ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 48
2-8-2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 48

## ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಜನ್ಮದಿನ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ

**ದಾವಣಗೆರೆ :** ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿ ಸ್ವಾಮೀಜಿ ಜನ್ಮದಿನದ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ವ್ಯಸನ ಮುಕ್ತ ದಿನಾಚರಣೆಯನ್ನು ಆಚರಿಸಲಾಯಿತು.

ಈ ವೇಳೆ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ, ಕರುಣಾ ಜೀವ ಕಲ್ಯಾಣ ಟ್ರಸ್ಟ್‌ನ ಶಿವನಕೆರೆ ಬಸವಲಿಂಗಪ್ಪ, ಅವರಗೆರೆ ರುದ್ರಮುನಿ, ಶಿವಬಸವ ಕಲ್ಕೋಟಿ ಉಪಸ್ಥಿತರಿದ್ದರು. ಈ ವೇಳೆ ಕಲಾವಿದ ಐರಣಿ ಚಂದ್ರು ವ್ಯಸನಮುಕ್ತ ಗೀತೆ ಪ್ರಸ್ತುತಪಡಿಸಿದರು.

## ದಾವಣಗೆರೆ ವಕೀಲರ ಸಂಘದ ಚುನಾವಣೆ

**ದಾವಣಗೆರೆ:** ದಾವಣಗೆರೆ ವಕೀಲರ ಸಂಘದ 2025-27ರ ದ್ವೈ ವಾರ್ಷಿಕ ಸಾಲಿನ 12 ಸ್ಥಾನಗಳಿಗೆ ಆ.23ರಂದು ಚುನಾವಣೆ ನಿಗದಿಪಡಿಸಿದ್ದು, ಆ.2ರಿಂದ 11ರವರೆಗೆ ಅರ್ಜಿ ಪಡೆದು ನಾಮಪತ್ರ ಸಲ್ಲಿಸಬಹುದಾಗಿದೆ.

ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿ ಹಾಗೂ ಖಜಾಂಚಿ ಸೇರಿ 12 ಸ್ಥಾನಗಳಿಗೆ ಚುನಾವಣೆ ನಡೆಯಲಿದ್ದು, ಆ.12 ರಿಂದ 13ರವರೆಗೆ ನಾಮಪತ್ರ ಹಿಂಪಡೆಯಲು ಸಮಯ ನೀಡಲಾಗಿದ್ದು, ಆ.23ರಂದು ನಡೆಯುವ ಮತದಾನವು ಅಂದು ಬೆಳಿಗ್ಗೆ 11-30ರಿಂದ ಸಂಜೆ 5-30ರವರೆಗೆ ಇರಲಿದೆ. ಅದೇ ದಿನ ಸಂಜೆ 6:30ರಿಂದ ಮತ ಎಣಿಕೆ ಪ್ರಾರಂಭವಾಗಲಿದ್ದು, ಅಂದೇ ಚುನಾವಣಾ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ ಎಂದು ಮುಖ್ಯ ಚುನಾವಣಾಧಿಕಾರಿ ಎಲ್. ದಯಾನಂದ್ ತಿಳಿಸಿದ್ದಾರೆ.

## ದಕ್ಷಿಣ ಕನ್ನಡ: ಅಃಅಃ ಕಾರ್ಯಾಚರಣೆ; 123 ಕೆಜಿ ಗಾಂಜಾ ವಶ, ಮೂವರ ಬಂಧನ

**ದಕ್ಷಿಣ ಕನ್ನಡ:** ಮಂಗಳೂರು ನಗರ ಅಪರಾಧ ವಿಭಾಗದ ಪೊಲೀಸರು ಮಾದಕ ದ್ರವ್ಯ ಕಳ್ಳಸಾಗಣೆ ತಡೆ ಕಾರ್ಯಾಚರಣೆಯಲ್ಲಿ 123 ಕೆಜಿ ತೂಕದ ಗಾಂಜಾವನ್ನು ವಶಪಡಿಸಿಕೊಂಡಿದ್ದು, ಆಂಧ್ರಪ್ರದೇಶದಿಂದ ಅಕ್ರಮವಾಗಿ ಸಾಗಿಸುತ್ತಿದ್ದ ಮೂವರನ್ನು ಬಂಧಿಸಲಾಗಿದೆ.

ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದ ಸಿಸಿಬಿ ಅಧಿಕಾರಿಗಳು ಗುರುವಾರ ದಕ್ಷಿಣ ಕನ್ನಡ ಜಿಲ್ಲೆ ಮೂಡುಬಿದಿರೆ ತಾಲೂಕಿನ ಬೆಳುವಾಯಿ ಗ್ರಾಮದ ಕಾಂತಾವರ ಕ್ರಾಸ್‌ನ ಮಠದಕೆರೆ ಬಳಿ ಎರಡು ಕಾರುಗಳನ್ನು ಅಡ್ಡಗಟ್ಟಿದ್ದಾರೆ. ಈ ಕಾರುಗಳಲ್ಲಿ ನಿಷೇಧ ವಸ್ತುಗಳನ್ನು ರಾಜ್ಯದ ಗಡಿಗಳಲ್ಲಿ ಕಳ್ಳಸಾಗಣೆ ಮಾಡಲಾಗುತಿತ್ತು ಎಂದು ವರದಿಯಾಗಿದೆ.

ಬಂಧಿತ ವ್ಯಕ್ತಿಗಳನ್ನು ಕೇರಳದ ಕಾಸರಗೋಡು ಜಿಲ್ಲೆಯ ನಿವಾಸಿಗಳಾದ ಮಸೂದ್ ಎಂ ಕೆ (45), ಮೊಹಮ್ಮದ್ ಆಶಿಕ್ (24) ಮತ್ತು ಸುಬೈರ್ (30) ಎಂದು ಗುರುತಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗಾಂಜಾದ ಜೊತೆಗೆ ಎರಡು ಕಾರುಗಳು ಮತ್ತು ಐದು ಮೊಬೈಲ್ ಫೋನ್ ಗಳನ್ನು ವಶಕ್ಕೆ ಪಡೆದಿದ್ದಾರೆ. ಇವುಗಳ ಒಟ್ಟು ಮೌಲ್ಯ ರೂ. 46.2 ಲಕ್ಷ ಎಂದು ಅಂದಾಜಿಸಲಾಗಿದೆ. ಈ ಕುರಿತು ಮೂಡುಬಿದಿರೆ ಪೊಲೀಸ್ ಠಾಣೆಯಲ್ಲಿ ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಪಿಕ್ ಸಬ್‌ಸ್ಟೆನ್ಸ್ (ಓಆಕಖ) ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಅಂತರ್ ರಾಜ್ಯ ಮಾದಕ ದ್ರವ್ಯ ಜಾಲ ನಿರ್ಮೂಲನೆಯ ಪ್ರಯತ್ನದ ಭಾಗವಾಗಿ ಈ ಕಾರ್ಯಾಚರಣೆ ನಡೆಸಲಾಗಿದೆ. ವಶಕ್ಕೆ ಪಡೆದ ಗಾಜಾ ಪೂರೈಕೆಯ ಮೂಲವನ್ನು ಪತ್ತೆಹಚ್ಚಲು ತನಿಖೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ರೇಣುಕಾ ಮಂದಿರದಲ್ಲಿ ಹತ್ತು ದಿನಗಳ ಬೃಹತ್ ಖಾದಿ ಸಂಭ್ರಮ ಮೇಳ

# ಶೇ.25 ರಿಯಾಯಿತಿ ದರದಲ್ಲಿ ಮಾರಾಟ

### ಕಣ್ಮನಸೆಳೆಯುವ ರಾಜ್ಯಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತುಪ್ರದರ್ಶನ

**ದಾವಣಗೆರೆ :** ನಗರದ ಪಿ ಬಿ ರಸ್ತೆಯ ರೇಣುಕಾ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಖಾದಿ ಗ್ರಾಮೋದ್ಯೋಗ ಮಂಡಳಿ ಹಾಗೂ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಸಹಯೋಗದಲ್ಲಿ ನಡೆಯುತ್ತಿರುವ ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತುಪ್ರದರ್ಶನ ಹಾಗೂ ಮಾರಾಟ ಮೇಳದ "ಖಾದಿ ಸಂಭ್ರಮ" ಮೇಳವನ್ನು ಆಗಸ್ಟ್ 1 ರಿಂದ 10 ರವರೆಗೆ ಆಯೋಜಿಸಲಾಗಿದೆ.



ಮೇಳದಲ್ಲಿ ಒಟ್ಟು 64 ಸ್ಟಾಲ್‌ಗಳನ್ನು ನಿರ್ಮಿಸಲಾಗಿದ್ದು, ಅದರಲ್ಲಿ ಕರ್ನಾಟಕ ರಾಜ್ಯ ಖಾದಿ ಗ್ರಾಮೋದ್ಯೋಗ ಮಂಡಳಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ತಯಾರಿಸಿದ ಖಾದಿ ಬಟ್ಟೆ, ಚನ್ನಪಟ್ಟಣದ ಗೊಂಬೆ ಆಟಿಕೆ, ಲೆದರ್ ಶೂ, ಕಾಶ್ಮೀರ ಶಾಲು, ಬಿಹಾರದ ಶರ್ಟ್, ಮಹಿಳೆಯರ ಮನಸೂರೆಗೊಳ್ಳುವಂತಹ ಸಿದ್ದ ಉಡುಪು, ಗೃಹೋಪಯೋಗಿ ವಸ್ತುಗಳು, ಗ್ರಾಮೀಣ ಕುಂಬಾರಿಕೆಯ ಕುಶಲ ವಸ್ತುಗಳು, ಸ್ವ-ಸಹಾಯ ಸಂಘದ ಸದಸ್ಯರು ತಯಾರಿಸಿದ ಆಹಾರದ ಸಿಹಿ ತಿನಿಸು ಮತ್ತು ಖಾದ್ಯಗಳು, ಆಯುರ್ವೇದಿಕ್ ಔಷಧಿ, ನವೀನ ಶೈಲಿಯ ಅರಳೆ ಖಾದಿ, ರೇಷ್ಮೆ ಖಾದಿ, ಉಣ್ಣೆಬಟ್ಟೆ, ಖಾದಿ ಪಾಲಿವಸ್ತ್ರ, ಯುವ ಪೀಳಿಗೆಯ ಮನಮೆಚ್ಚುವ ಮೋಹಕ ಖಾದಿ ಡಿಸೈನರ್ ಉಡುಪುಗಳು, ಶರ್ಟ್, ಕುರ್ತಾ, ಗ್ರಾಮೀಣ ಗುಡಿಕೈಗಾರಿಕೆಯಿಂದ ತಯಾರಿಸಿದ ಮರದ ಕೆತ್ತನೆಯ ವಸ್ತುಗಳು ಮತ್ತು ಆಕರ್ಷಣೆಯ ಆಟಿಕೆಗಳು ಹಾಗೂ ಬ್ಯಾಂಕ್‌ಗಳಲ್ಲಿ ಸಿಗುವ ಸಾಲ, ಸೌಲಭ್ಯಗಳ ಮಾಹಿತಿ, ಅಗತ್ಯ ವಸ್ತುಗಳ ಕುರಿತು ಬೃಹತ್ ಮೇಳ ಆಯೋಜಿಸಲಾಗಿದೆ. ಗುಣಮಟ್ಟದ ಖಾತರಿಗೆ ಖಾದಿ ಅಭಿವೃದ್ಧಿ ನಿಗಮ ಮಂಡಳಿ ಸಾಕ್ಷಿಯಾಗಿದೆ. ಸಾರ್ವಜನಿಕರು, ಗ್ರಾಹಕರು ರೇಣುಕಾ ಮಂದಿರದಲ್ಲಿನ ಖಾದಿ ಮೇಳಕ್ಕೆ ಬೇಟಿ ನೀಡಿ ವೀಕ್ಷಿಸಿ, ಅಗತ್ಯ ವೈವಿಧ್ಯಮಯ ವಸ್ತುಗಳನ್ನು ಖರೀದಿಸಬಹುದಾಗಿದೆ.

ಶಾಸಕರು ಹಾಗೂ ಖಾದಿ ಗ್ರಾಮೋದ್ಯೋಗ ಅಧ್ಯಕ್ಷ ಬಸನಗೌಡ ತುರುವಿಹಾಳ್ ವಸ್ತುಪ್ರದರ್ಶನ ಉದ್ಘಾಟಿಸಿ ಮಾತನಾಡಿ, ಖಾದಿ ಉತ್ಪನ್ನ ಗಾಂಧೀಜಿ ಅವರ ಕೊಡುಗೆ. ಖಾದಿ ಹಿತಾನುಭವ ನೀಡುವ ಬಟ್ಟೆ. ಈಗಾಗಲೇ ಖಾದಿ ಗ್ರಾಮೋದ್ಯೋಗ ವಸ್ತು ಪ್ರದರ್ಶನ ಮೂರು ತಿಂಗಳಲ್ಲಿ ಆರು ಜಿಲ್ಲೆಯಲ್ಲಿ ಪ್ರದರ್ಶನ ಮಾಡಲಾಗಿದೆ. ಈ ವಸ್ತುಪ್ರದರ್ಶನ ಬೆಂಗಳೂರಿಗೆ ಮಾತ್ರ ಸೀಮಿತ ಆಗುವುದು ಬೇಡ ಎಂಬ ಉದ್ದೇಶದಿಂದ ಕಳೆದ ವರ್ಷ ನಾಲ್ಕು ಜಿಲ್ಲೆಯಲ್ಲಿ ಮೇಳ ಮಾಡಲಾಗಿತ್ತು. ಇನ್ನೂ ಐದು ಜಿಲ್ಲೆಯಲ್ಲಿ ಮೇಳ ಆಯೋಜಿಸಲು ಉದ್ದೇಶಿಸಲಾಗಿದೆ. ಜನರಿಗೆ ಈ ಬಗ್ಗೆ ಮತ್ತಷ್ಟು ಅರಿವು ಮೂಡಿಸುವ ಅಗತ್ಯ ಇದೆ. ಮೇಳದಲ್ಲಿ ಖರೀದಿಸುವ ವಸ್ತುಗಳ ಮೇಲೆ ಶೇ 25ರಷ್ಟು ರಿಯಾಯಿತಿ ಇದೆ. ಯುವಕರು ಸಹ ಖಾದಿಯನ್ನು ಹೆಚ್ಚು ಬಳಕೆ ಮಾಡಬೇಕು ಎಂದ ಅವರು, ಮುಂದಿನ ದಿನಗಳಲ್ಲಿ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಖಾದಿ ಬಟ್ಟೆ ನೀಡುವ ಕುರಿತು ಚಿಂತನೆ ನಡೆಸಲಾಗಿದೆ. ಈ ಬಟ್ಟೆ ಬಳಕೆ ಮಾಡುವುದರಿಂದ ಇದನ್ನೇ ನಂಬಿದ ನೇಕಾರರ ಬದುಕಿಗೆ ಅನುಕೂಲ ಆಗಲಿದೆ. ಇದಕ್ಕೆ ಕೈಮಗ್ಗದಲ್ಲಿ ತಯಾರಿಸಿದ ಬಟ್ಟೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಒತ್ತು ನೀಡುತ್ತಿವೆ ಎಂದರು.

ಹರಿಹರ ಶಾಸಕ ಬಿ.ಪಿ.ಹರೀಶ್ ಮಾತನಾಡಿ, ಜಿಲ್ಲಾ ಕೇಂದ್ರದಲ್ಲಿ ಖಾದಿ ವಸ್ತು ಪ್ರದರ್ಶನ ಮಾಡಿದ್ದು ಅನುಕೂಲಕರ. ಇದನ್ನು ಜಿಲ್ಲೆಯ ಎಲ್ಲಾ ಗ್ರಾಹಕರು, ಸಾರ್ವಜನಿಕರು ಬಳಸಬೇಕು. ನೇಕಾರರು ಬದುಕು ಕಟ್ಟಿಕೊಳ್ಳುವುದು ನೇಕಾರಿಕೆ ಮೂಲಕ. ಹಾಗಾಗಿ ಖಾದಿ ಬಟ್ಟೆ, ಇನ್ನಿತರೆ ಅಗತ್ಯ ವಸ್ತುಗಳನ್ನು ಬಳಸುವುದರಿಂದ ಅವರ ಬದುಕು ಕೂಡ ಹಸನಾಗುತ್ತದೆ. ಜನರು ಈ ಬಟ್ಟೆ ಬಳಕೆ ಮಾಡಬೇಕು. ಮೈಸೂರು ಸಿಲ್ಕ್, ಬೇರೆ ಕಂಪನಿಗಳಿಗೆ ಹೋಲಿಕೆ ಮಾಡಿದರೆ ಇಲ್ಲಿ ಜನರ ಕೈಗೆಟಕುವ ದರದಲ್ಲಿ ಬಟ್ಟೆ ಸಿಗುವ ಸಾಧ್ಯತೆ ಇದೆ ಎಂದರು.

### 71ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ:

## ಶಾರುಖ್ ಖಾನ್, ವಿಕ್ರಾಂತ್ ಮ್ಯಾಸಿ ಅತ್ಯುತ್ತಮ ನಟ

### ರಾಣಿ ಮುಖರ್ಜಿ ಅತ್ಯುತ್ತಮ ನಟಿ



2023ನೇ ವರ್ಷದ 71ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಇಂದು ಶುಕ್ರವಾರ ಪ್ರಕಟಗೊಂಡಿದೆ.

ದೆಹಲಿಯ ರಾಷ್ಟ್ರೀಯ ಮಾಧ್ಯಮ ಕೇಂದ್ರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಶಸ್ತಿ ವಿಜೇತರ ಹೆಸರುಗಳನ್ನು ಘೋಷಿಸಲಾಗಿದೆ. ಈ ಪ್ರತಿಷ್ಠಿತ ಪ್ರಶಸ್ತಿಯನ್ನು ಪಡೆಯಲು ಅರ್ಹರಾಗಿರುವ ಚಲನಚಿತ್ರಗಳು ಜನವರಿ 1, 2023ರಿಂದ ಡಿಸೆಂಬರ್ 31, 2023 ರ ನಡುವೆ (ಸೆಂಟ್ರಲ್ ಬೋರ್ಡ್ ಆಫ್ ಫಿಲ್ಮ್ ಸರ್ಟಿಫಿಕೇಶನ್) ನಿಂದ ಪ್ರಮಾಣೀಕರಣವನ್ನು ಪಡೆದಿವೆ.

ಅನಿಮಲ್, ಹಾಯ್ ನನ್ನ, ಪಠಾಣ್, ಕಾಥಲ್ ದಿ ಕೋರ್ ಮತ್ತು ಇನ್ನೂ ಅನೇಕ ಚಲನಚಿತ್ರಗಳು 2023 ರಲ್ಲಿ ಬಿಡುಗಡೆಗೊಂಡು ಜನಮನಸೂರೆಗೊಂಡಿದ್ದವು. 'ಜವಾನ್' ಚಿತ್ರಕ್ಕಾಗಿ ಶಾರುಖ್ ಖಾನ್ ಮತ್ತು '12ಣ ಜಿಚಿಟ' ಚಿತ್ರಕ್ಕಾಗಿ ವಿಕ್ರಾಂತ್ ಮ್ಯಾಸಿ ಈ ಬಾರಿ ಅತ್ಯುತ್ತಮ ನಟ ಪ್ರಶಸ್ತಿ ಹಂಚಿಕೊಂಡಿದ್ದಾರೆ.

ವಿಕ್ರಾಂತ್ ಮ್ಯಾಸಿ ಅಭಿನಯದ ವಿಧು ವಿನೋದ್ ಚೋಪ್ರಾ ನಿರ್ದೇಶನದ '12th fail' ಚಿತ್ರ ಅತ್ಯುತ್ತಮ ಚಲನಚಿತ್ರ ಪ್ರಶಸ್ತಿಯನ್ನು ಪಡೆದುಕೊಂಡಿದೆ.

### ಬೇಡಿಕೆಗಿಂತ ಹೆಚ್ಚು ಯೂರಿಯಾ ದಾಸ್ತಾನು,

# ಪ್ರತಿ ರೈತರಿಗೆ ಎರಡು ಚೀಲ ಯೂರಿಯಾ ವಿತರಣೆ

**ದಾವಣಗೆರೆ :** ರೈತರ ಬೇಡಿಕೆಗಿಂತ ಹೆಚ್ಚು ಯೂರಿಯಾ ಜಿಲ್ಲೆಯಲ್ಲಿ ದಾಸ್ತಾನಿದ್ದು ರೈತರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರದ ಕೊರತೆಯಾಗಿದೆ ಎಂಬ ವರದಿಯನ್ವಯ ಜಿಲ್ಲೆಯ ಎಲ್ಲಾ ಸಗಟು ಮತ್ತು ಚಿಲ್ಲರೆ ಮಾರಾಟ ಮಳಿಗೆಗಳ ತಪಾಸಣೆಯನ್ನು ಕಂದಾಯ ಅಧಿಕಾರಿಗಳು ಮತ್ತು ಕೃಷಿ ಅಧಿಕಾರಿ, ಪೊಲೀಸ್ ಅಧಿಕಾರಿಗಳೊಂದಿಗೆ ಜುಲೈ 31 ರಂದು ಜಂಟಿ ತಪಾಸಣೆ ನಡೆಸಿ ನಿಯಮಗಳನ್ನು ಉಲ್ಲಂಘನೆ ಮಾಡಿದವರ ಮೇಲೆ ಕಠಿಣಕ್ರಮ ಕೈಗೊಳ್ಳಲಾಗಿದೆ.

ಜಿಲ್ಲೆಯಲ್ಲಿ ಈಗಾಗಲೇ ಭತ್ತದ ಕೃಷಿ ಚಟುವಟಿಕೆಗಳು ಆರಂಭವಾಗಿದೆ. ಮತ್ತು ತಂಪು ವಾತಾವರಣ ತಗ್ಗಿದೆಯಲ್ಲದೇ ಮೆಕ್ಕೆಜೋಳಕ್ಕೆ ರಸಗೊಬ್ಬರ ಹಾಕುವ ಹಂತ ಮುಕ್ತಾಯ ಹಂತದಲ್ಲಿದೆ. ಭತ್ತದ ನಾಟಿ ಚಟುವಟಿಕೆಗಳು ನಡೆಯುತ್ತಿದ್ದು ನಾಟಿಗೂ ಮುಂಚೆ ಮೇಲುಗೊಲ್ಲರವಾಗಿ ಯೂರಿಯಾ ಹಾಕುವುದು ವಾಡಿಕೆಯಾಗಿದೆ.

ಮುಂಗಾರು ಹಂಗಾಮಿನಲ್ಲಿ ದಾವಣಗೆರೆ ಜಿಲ್ಲೆಯಲ್ಲಿ 33000 ಮೆಟ್ರಿಕ್ ಟನ್ ಯೂರಿಯಾ ಬೇಡಿಕೆ ಇದೆ. ಆದರೆ ಬೇಡಿಕೆಗಿಂತಲೂ 3 ಸಾವಿರಕ್ಕೂ ಹೆಚ್ಚು ಮೆಟ್ರಿನ್ ಟನ್ ದಾಸ್ತಾನಿದ್ದರೂ ಹರಳು ಯೂರಿಯಾಗೆ ಬೇಡಿಕೆ ಹೆಚ್ಚಾಗಿದೆ. ಪ್ರಸ್ತುತ ಜಿಲ್ಲೆಯಲ್ಲಿ 2640 ಮೆಟ್ರಿಕ್ ಟನ್ ಯೂರಿಯಾ ದಾಸ್ತಾನಿದೆ. ಮತ್ತು ಇದರ ಜೊತೆಗೆ ಶಿವಮೊಗ್ಗದಿಂದ 454 ಮೆಟ್ರಿನ್ ಟನ್ ಯೂರಿಯಾ ತರಿಸಿಕೊಳ್ಳಲಾಗುತ್ತಿದೆ. ರೈತರು ಎಥೇಚ್ಛವಾಗಿ ಹರಳು ಯೂರಿಯಾ ಬಳಕೆ ಮಾಡುತ್ತಿದ್ದು ಇದರಿಂದ ಭೂಮಿಯ ಗುಣಮಟ್ಟವನ್ನು ಕಳೆದುಕೊಂಡು ಬೆಳೆಯಲ್ಲಿ ರೋಗಗಳು ಉಲ್ಬಣಗೊಳ್ಳುವುದು ವೈಜ್ಞಾನಿಕವಾಗಿಯು ದೃಢಪಟ್ಟಿರುತ್ತದೆ. ಈ ಹಿನ್ನೆಲೆಯಲ್ಲಿ ನ್ಯಾನೋ ಯೂರಿಯಾ ಬಳಕೆಗೆ ಹೆಚ್ಚಿನ ಉತ್ತೇಜನ ನೀಡಲು ಮತ್ತು ಸಮರ್ಪಕವಾಗಿ ಯೂರಿಯಾ ವಿತರಣೆ ಮಾಡಲು ಪ್ರತಿ ರೈತರಿಗೆ ಎರಡು ಚೀಲಗಳಂತೆ ನೀಡಲಾಗುತ್ತದೆ. ಇದಕ್ಕಾಗಿ ಗ್ರಾಮ ಆಡಳಿತಾಧಿಕಾರಿಗಳಿಂದ ರೈತರು ದೃಢೀಕರಣ ಪಡೆದು ರೈತರು ಯೂರಿಯಾ ತೆಗೆದುಕೊಳ್ಳಬಹುದು.



ಜಿಲ್ಲೆಯಲ್ಲಿ ಯೂರಿಯಾ ಹೊರತುಪಡಿಸಿ ಇತರೆ ರಸಗೊಬ್ಬರಗಳ ವ್ಯತ್ಯಯ ಉಂಟಾಗಿಲ್ಲ, ಹರಳು ಯೂರಿಯಾಗೆ ಹೆಚ್ಚಿನ ಬೇಡಿಕೆ ಬಂದಿದ್ದರಿಂದ ರೈತರಲ್ಲಿ ಆತಂಕವಾಗಿತ್ತೆ ವಿನಃ ಬೇಡಿಕೆಯಷ್ಟು ಪೂರೈಕೆ ಮತ್ತು ಹಂಚಿಕೆಯಾಗಿರುತ್ತದೆ. ಜಿಲ್ಲೆಯಲ್ಲಿರುವ ಸಗಟು ರಸಗೊಬ್ಬರ ಮಾರಾಟಗಾರರ ಗೋಧಾಮು ಮತ್ತು ಚಿಲ್ಲರೆ ರಸಗೊಬ್ಬರ ಮಾರಾಟಗಾರರ ಅಂಗಡಿಗಳ ಮೇಲೆ ಕಂದಾಯ ಅಧಿಕಾರಿಗಳು, ಕೃಷಿ ಅಧಿಕಾರಿಗಳು ದಾಳಿ ನಡೆಸಿ ಈ ವೇಳೆ ಲೋಪವೆಸಗಿದ ಸಗಟು ಮತ್ತು ಚಿಲ್ಲರೆ ಮಾರಾಟಗಾರರ ಲೈಸೆನ್ಸ್ ರದ್ದು ಮಾಡಿದೆ ಮತ್ತು ಅಮಾನತಿನಲ್ಲಿಡಲಾಗಿದೆ.

ಸಗಟು ಮಾರಾಟಗಾರರ ಲೈಸೆನ್ಸ್ ರದ್ದು; ರಸಗೊಬ್ಬರ ಸಗಟು ಮಾರಾಟಗಾರರಿಗೆ ಹಂಚಿಕೆಯಾದ ರಸಗೊಬ್ಬರವನ್ನು ಜಿಲ್ಲೆಯಲ್ಲಿನ ಚಿಲ್ಲರೆ ಮಾರಾಟಗಾರರಿಗೆ ಪೂರೈಕೆ ಮಾಡದೆ ಬೇರೆ ಜಿಲ್ಲೆಗಳಿಗೆ ಮಾರಾಟ ಮಾಡಿದ್ದರಿಂದ ಇವರ ಲೈಸೆನ್ಸ್‌ಗಳನ್ನು ರದ್ದುಪಡಿಸಲಾಗಿದೆ. ರದ್ದುಪಡಿಸಲಾದ ಲೈಸೆನ್ಸ್‌ದಾರರಲ್ಲಿ ದಾವಣಗೆರೆಯ ಆಶಾಪೂರಿ ಫರ್ಟಿಲೇಸರ್, ರಾಥೋಡ್ ಫರ್ಟಿಲೇಸರ್, ಶ್ರೀ ಮಲ್ಲಿಕಾರ್ಜುನ ಫರ್ಟಿಲೇಸರ್, ದಿಬ್ಬದಹಳ್ಳಿ ಆಗ್ರೋ ಸರ್ವೀಸ್, ಶ್ರೀಶ್ರೀನಿವಾಸ ಆಗ್ರೋ ಟ್ರೇಡರ್ಸ್, ಕಿಶೋರ್ ಫರ್ಟಿಲೇಸರ್, ಚನ್ನಗಿರಿ ತಾಲ್ಲೂಕಿನ ನಲ್ಲೂರು ವೀರಭದ್ರೇಶ್ವರ ಫರ್ಟಿಲೇಸರ್, ಗೋಪನಹಳ್ಳಿ ವೀರಭದ್ರೇಶ್ವರ ಟ್ರೇಡರ್ಸ್. ಚಿಲ್ಲರೆ ಮಾರಾಟಗಾರರ ಲೈಸೆನ್ಸ್ ಅಮಾನತು; ರಸಗೊಬ್ಬರ ಚಿಲ್ಲರೆ ಮಾರಾಟಗಾರರು ರಸಗೊಬ್ಬರವನ್ನು ಎಂ.ಆರ್.ಪಿ. ಅಂದರೆ ನಿಗದಿತ ಬೆಲೆಗಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರವನ್ನು ಮಾರಾಟ ಮಾಡುತ್ತಿರುವುದನ್ನು ಪತ್ತೆಹಚ್ಚಿ ಪರವಾನಗಿಯನ್ನು ಅಮಾನತಿನಲ್ಲಿಡಲಾಗಿದೆ.

# ಧರ್ಮ, ಸಂಸ್ಕೃತಿಗಳನ್ನು ಯಾರಿಂದಲೂ ವಿಧ್ವಂಸ ಮಾಡಲು ಸಾಧ್ಯವಿಲ್ಲ : ಸಿರಿಗೆರೆ ಶ್ರೀಗಳು

**ಹೊನ್ನಾಳಿ :** ದೇಶದಲ್ಲಿ ಎಷ್ಟೆ ವಿಧ್ವಂಸಕ ಕೃತ್ಯಗಳು ನಡೆದರೂ ಕೂಡ ಈ ದೇಶದ ದೇವರು, ದೈವ ನಂಬಿಕೆ, ಧರ್ಮ, ಸಂಸ್ಕೃತಿಗಳನ್ನು ಯಾರಿಂದಲೂ ವಿಧ್ವಂಸ ಮಾಡಲು ಸಾಧ್ಯವಿಲ್ಲ ಎಂದು ಸಿರಿಗೆರೆ ತರಳಬಾಳು ಜಗದ್ಗುರು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿಗಳು ಹೇಳಿದರು.

ತಾಲೂಕಿನ ಕೂಲಂಬಿ ಗ್ರಾಮದಲ್ಲಿ ಶುಕ್ರವಾರ ಶ್ರೀ ಈಶ್ವರ ದೇವಸ್ಥಾನ ಮತ್ತು ಶ್ರೀ ಮಾರಿಕಾಂಬ ದೇವಿ ದೇವಸ್ಥಾನ ಕಳಸಾರೋಹಣ, ಧರ್ಮಸಭೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವಹಿಸಿ ಅವರು ಆಶೀರ್ವಚನ ನೀಡಿದರು.

ಸಾವಿರಾರು ವರ್ಷಗಳಿಂದ ಈ ದೇಶದಲ್ಲಿ ಭಕ್ತರ ಭಕ್ತಿಯ ಪ್ರವಾಹ, ತುಂಬಿ ತುಳುಕುತ್ತಿದೆ ನದಿಯ ಕ್ರೇಸ್ಟ್ ಗೇಟ್ ತೆಗೆದಾಗ ಎಗೆ ನೀರು ಭೋರ್ಗರೆಯುತ್ತಾ ಹರಿಯುವ ನೀರಿನಂತೆ ದೇವರು ಮತ್ತು ಗುರುಗಳ ಬಗ್ಗೆ ಕೂಲಂಬಿ ಗ್ರಾಮದ ಯುವಕರಲ್ಲಿ ನಿರಂತರ ಹರಿಯುತ್ತಿರುವುದು ಸಂತಸದ ಸಂಗತಿ ಎಂದರು



ಈ ದೇಶದಲ್ಲಿ ದೀಪ ಹಚ್ಚುವವರಿಗಿಂತ ಬೆಂಕಿ ಹಚ್ಚುವವರ ಸಂಖ್ಯೆ ಹೆಚ್ಚಾಗುತ್ತಿದೆ ಜೊತೆಗೆ ಕೌಟಂಬಿಕ ಸಂಬಂಧಗಳು ಹೆಚ್ಚು ಸಂಕೀರ್ಣವಾಗುತ್ತಿವೆ ಈ ಬಗ್ಗೆ ಪ್ರತಿಯಬ್ಬರೂ ಚಿಂತಿಸಬೇಕಾಗಿದೆ ಎಂದು ಹೇಳಿದರು.

ಮಾನವೀಯ ಮೌಲ್ಯಗಳು ಪಕ್ಷಾತೀತವಾಗಿ ಮಾತ್ರ ಮಾನವೀಯತೆ ಹೆಚ್ಚು ಪ್ರಜ್ವಲಿಸುತ್ತದೆ ಒಬ್ಬ ಹೆಣ್ಣು ತನಗೆ ಜನಿಸಿದ ಮಗುವಿನಿಂದ ತಾಯಿ ಪಟ್ಟ ಪಡೆಯುತ್ತಾಳೆ ಇದೇ ರೀತಿ ದೇವರು, ಗುರುಗಳು ಭಕ್ತರ ಭಕ್ತಿಯಿಂದ ಪವಿತ್ರತೆಯ ಪಟ್ಟ ಪಡೆ-ಯುತ್ತಾರೆ ಎಂದರು.

ಸಿರಿಗೆರೆಯ ಹಿರಿಯ ಗುರುಗಳ ಆಶಯದಂತೆ ತಾವು ಇಡೀ ವಚನ ಸಾಹಿತ್ಯವನ್ನು ಗಣಕೀರಣಗೊಳಿಸುವ ಮೂಲಕ ಜಗತ್ತಿನ ಜನರಿಗೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದರು.

ಶಾಸಕ ಡಿ.ಜಿ.ಶಾಂತನಗೌಡ ಮಾತನಾಡಿ, ಗುರುಗಳ ಮಾರ್ಗದರ್ಶದಂತೆ ಪ್ರತಿಯೊಬ್ಬರು ಆತ್ಮಪೂರ್ವಕವಾಗಿ ನಡೆದುಕೊಂಡಾಗ ಸುಖಿ ಸಮಾಜವನ್ನು ಕಾಣಲು ಸಾಧ್ಯ, ಕೌಟಂಬಿಕ ಕಲಹಗಳಿಗಾಗಿ ನ್ಯಾಯಾಲಯದ ಮೆಟ್ಟಿಲು ಹತ್ತುವ ಬದಲು ಬದಲಿಗೆ ಸಿರಿಗೆರೆ ನ್ಯಾಯ ಪೀಠದಲ್ಲಿ ಸೌಹಾರ್ದಯುತವಾಗಿ ಬಗೆ ಹರಿಸಿಕೊಳ್ಳಬೇಕು ಎಂದರು. ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಮಾತನಾಡಿ, ಮಠಾಧೀಶರುಗಳು, ಮಠಮಾನ್ಯಗಳು ಸೂಜಿ ದಾರದಂತೆ ಸಮಾಜವನ್ನು ಒಗ್ಗೋಡಿಸುವ ಕೆಲಸ ಮಾಡಲಾಗುತ್ತಿವೆ ಎಂದು ಹೇಳಿದರು.

ತರಳಬಾಳು ಕೃಷಿ ವಿಜ್ಞಾನ ದಾವಣಗೆರೆ ತೋಟಗಾರಿಕೆ ವಿಜ್ಞಾನಿ ಡಾ. ಬಸವನಗೌಡ. ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಧನಂಜಯ ಉಪನ್ಯಾಸ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗುರು ಗದ್ದಿಗೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಟಿ.ಎಸ್. ಸೋಮಶೇಖರ್ ವಹಿಸಿದ್ದರು, ಮುಖಂಡರಾದ ಹೊನ್ನಾಳಿ ತಾ. ಸಾಧುವೀರಶೈವ ಸಮಾಜದ ಅಧ್ಯಕ್ಷ ಗದ್ದಿಗೇಶ್, ನ್ಯಾಮತಿ ಅಧ್ಯಕ್ಷ ಜಿ. ಶಿವಪ್ಪ, ಶಿವಬ್ಯಾಂಕ್ ಮಾಜಿ ಉಪಾಧ್ಯಕ್ಷ ಲೋಕೇಶಪ್ಪ ಪಾಟೀಲ್, ಕೆಂಗಲಹಳ್ಳಿ, ಗುರುಮೂರ್ತಿ, ಷಣ್ಮುಖಪ್ಪ, ಕಸಾಪ ಜಿಲ್ಲಾಧ್ಯಕ್ಷ ವಾಮದೇವಪ್ಪ, ರಘು, ಕೆ.ಬಿ. ಲಿಂಗರಾಜು, ಗುತ್ತಿಗೆದಾರ ಕೂಲಂಬಿ ನಾಗರಾಜ್ ಸೇರಿದಂತೆ ಸಾವಿರಾರು ಜನ ಭಕ್ತವೃಂದ ಇದ್ದರು.

# ಮಾದಕ ವಸ್ತು ಮಾರಾಟ ಕಂಡಲ್ಲಿ ಕಠಿಣ ಕ್ರಮಕ್ಕೆ ಸೂಚನೆ: ಶಾಸಕ ತಮ್ಮಯ್ಯ

**ಚಿಕ್ಕಮಗಳೂರು, ಆ.1:** ಜಿಲ್ಲೆಯಲ್ಲಿ ಮಾದಕ ವಸ್ತುಗಳ ವ್ಯಾಪಾರ-ವ್ಯವಹಾರ ಕಂಡು ಬಂದಲ್ಲಿ ಕಟ್ಟುನಿಟ್ಟಾದ ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜ್ಞಾನ ಜ್ಯೋತಿ ಟಿ.ಎಂ.ಎಸ್. ವಿದ್ಯಾ ಸಂಸ್ಥೆ, ಚಿಕ್ಕಮಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಟಿ.ಎಂ.ಎಸ್. ರೋಟರಿ ಹಾಲ್‌ನಲ್ಲಿ ಡಾ.ಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿಗಳ ಜನ್ಮದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ವ್ಯಸನಮುಕ್ತ ದಿನಾಚರಣೆ ಹಾಗೂ ವಿಚಾರ ಸಂಕಿರಣದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಪಂಚಾಯಿತಿಯ ಕೆ.ಡಿ.ಪಿ. ಸಭೆಯಲ್ಲಿ ಈ ಬಗ್ಗೆ ಚರ್ಚೆಯಾಗಿದ್ದು, ಮಾದಕ ವಸ್ತು ಮಾರಾಟ ಮಾಡುವುದಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ತಾವು ಅಧಿಕಾರಿಗಳಿಗೆ ನಿರ್ದೇಶನ ನೀಡಿರುವುದಾಗಿ ತಿಳಿಸಿದ ಅವರು, ದೇಶದ ದಿಕ್ಕನ್ನೇ ಬದಲಿಸುವ ಶಕ್ತಿ ಇರುವ ಯುವಜನತೆ ವ್ಯಸನಗಳಿಗೆ ಬಲಿಯಾದರೆ, ಅವರ ಕುಟುಂಬ, ಸಮಾಜ ಅಷ್ಟೇ ಅಲ್ಲ, ಇಡೀ ದೇಶವೇ ದಿಕ್ಕು ತಪ್ಪುತ್ತದೆ ಎಂದು ಹೇಳಿದರು.

ಮಾದಕ ವ್ಯಸನಿಗಳಾದಲ್ಲಿ ಅವರ ವ್ಯಕ್ತಿಗತ ಜೀವನ ಮಾತ್ರವಲ್ಲ ಸಾಮಾಜಿಕ ಜೀವನದ ಮೇಲೂ ದುಷ್ಪರಿಣಾಮ

ಬೀರುತ್ತದೆ. ಈ ಚಟಕ್ಕೆ ಬಿದ್ದವರು ಅಪರಾಧ ಕೃತ್ಯಗಳಲ್ಲಿ ತೊಡಗಿ ಸಮಾಜಕ್ಕೆ ಮಾರಕವಾಗುತ್ತಾರೆ. ಈ ಹಿನ್ನೆಲೆಯಲ್ಲಿ ಸಂಸ್ಕಾರವಂತ ದೇಶದಲ್ಲಿ ಜನಿಸಿರುವ ನಾವು ಕ್ಷಣಿಕ ಸಂತೋಷ ಕೊಡುವ ಈ ಚಟದಿಂದ ದೂರ ಉಳಿಯಬೇಕು ಎಂದು ತಿಳಿಸಿದರು.



ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಮಾತನಾಡಿ, ಎಲ್ಲರ ಬದುಕಿನಲ್ಲಿ ಯೋಗ್ಯತೆ ಇರುತ್ತದೆ. ಆದರೆ ಯೋಗ ಮಾತ್ರ ಕೂಡಿಬಂದಲ್ಲಿ ಮಾತ್ರ ಅವಕಾಶವನ್ನು ಪಡೆದುಕೊಳ್ಳಬಹುದು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಚೆನ್ನಾಗಿ ಓದಲು, ಉತ್ತಮ ಉದ್ಯೋಗ ಮಾಡಲು ಎಲ್ಲಾ ಯೋಗ್ಯತೆಗಳನ್ನು ಹೊಂದಿದ್ದರೂ ಪ್ರಯತ್ನ ಮಾಡುವುದು ಅಗತ್ಯ. ಈ ದಿಸೆಯಲ್ಲಿ ನಮ್ಮ ಬದುಕಿಗೆ ಕೆಟ್ಟದ್ದರತ್ತ ಕಣ್ಣು ಹಾಯಿಸಲೂ ಬಾರದು. ಅದರಲ್ಲೂ ಮಾದಕ ವಸ್ತುಗಳ ವ್ಯಾಮೋಹಕ್ಕೆ ಒಳಗಾಗಬಾರದು. ಅಂಥವುಗಳನ್ನು ಕೆಟ್ಟದ್ದು ಎಂದು ಹೇಳುವ ಧೈರ್ಯವೂ ನಮ್ಮಲ್ಲಿ ಇರಬೇಕು. ಆ ಮೂಲಕ ಈ ಪೀಳಿಗೆಯನ್ನು ಉತ್ತಮ ಹಾದಿಗೆ ಒಯ್ಯುವಂತಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಡಾ.ಮಹಾಂತ ಶಿವಯೋಗಿಗಳ ಜೀವನ ಚರಿತ್ರೆ ಕುರಿತು ಉಪನ್ಯಾಸ ನೀಡಿದ ನಿವೃತ್ತ ಉಪನ್ಯಾಸಕ ಬಿ.ತಿಪ್ಪೇರುದ್ರಪ್ಪ ಮಾತನಾಡಿ, ತ್ರಿವಿಧ ದಾಸೋಹಗಳಾದ ಜ್ಞಾನಕ್ಕೆ ಅನ್ನಕ್ಕೆ, ಅರಿವೆಗೆ ಒತ್ತುಕೊಟ್ಟು ಅನಾದಿ ಕಾಲದಿಂದಲೂ ಶ್ರಮಿಸುತ್ತಿರುವ ಅನೇಕ ವಿರಕ್ತ ಮಠಗಳು ಕರ್ನಾಟಕದಾದ್ಯಂತ ಇವೆ. ಅದೇ ಸಾಲಿನಲ್ಲಿ ಚಿತ್ತರಗಿಯ ಮಹಾಂತ ಶಿವಯೋಗಿಗಳ ಮಠವೂ ಒಂದು. ಬಸವಾದಿ ಶರಣರ ಆಶಯಗಳನ್ನು ಪಾಲಿಸುವ ನಿಟ್ಟಿನಲ್ಲಿ ಸಂಕಲ್ಪ ಮತ್ತು ದೀಕ್ಷೆಯನ್ನು ಹೊತ್ತುಕೊಂಡು ಕಾರ್ಯೋನ್ಮುಖರಾಗಿರುವ ನಿಟ್ಟಿನಲ್ಲಿ ನಾವು ಮಹಾಂತ ಶಿವಯೋಗಿಗಳ ಜನ್ಮದಿನವನ್ನು ಆಚರಿಸುತ್ತಿದ್ದೇವೆ ಎಂದರು.

ಡಾ.ಮಹಾಂತ ಶಿವಯೋಗಿಗಳು ತಮ್ಮ ಸಮಾಜಮುಖಿ ಕಾರ್ಯಗಳಿಂದ ಮಹಾತ್ಮರಾದವರು. ವ್ಯಸನಮುಕ್ತ ವ್ಯಕ್ತಿ, ಸಮಾಜ, ಕುಟುಂಬ ಹಾಗೂ ವ್ಯಸನಮುಕ್ತ ದೇಶವನ್ನು ಕಟ್ಟುವ ಕಾಯಕದಲ್ಲಿ ಅವರು ಮುಂಚೂಣಿಯಲ್ಲಿದ್ದರು. ಅವರ ಜಯಂತಿಯನ್ನು ಆಚರಣೆ ಮಾಡಲು ಸರ್ಕಾರವೇ ಆದೇಶ ನೀಡಿರುವುದು ಇದೇ ಕಾರಣಕ್ಕೆ. ಅವರು ತಮ್ಮ ಕಿರಿಯ ವಯಸ್ಸಿನಲ್ಲೇ ಆ ಮಠಕ್ಕೆ ಕಿರಿಯ ಸ್ವಾಮೀಜಿಯಾಗಿ ಪಟ್ಟಾಭಿಷಿಕ್ತರಾಗುತ್ತಾರೆ. ಕಾಶಿಯಲ್ಲಿ ಸಕಲ ವಿದ್ಯಾ ಪಾರಂಗತರಾಗಿದ್ದರು. ಉತ್ತರ ಕರ್ನಾಟಕದಲ್ಲಿ ಬರಗಾಲ ಬಂದಾಗ ಗೋಶಾಲೆಗಳು, ಗಂಜಿ ಕೇಂದ್ರಗಳು, ಮೇವಿನ ಕೇಂದ್ರಗಳನ್ನು ತೆರೆಯುವ ಮೂಲಕ ಸಮಾಜಮುಖಿಯಾಗಿ ಕಾರ್ಯ ನಿರ್ವಹಿಸಿದ್ದರು. ಅವರು ಧರ್ಮ, ಜಾತಿ, ಭಾಷೆ, ಪಂಥ, ದೇಶ ಎಲ್ಲವನ್ನೂ ಮೀರಿದ ಶಿವಯೋಗಿಗಳು ಎಂದು ಬಣ್ಣಿಸಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ. ನಿಮ್ಮ ವರ್ತನೆ ಕೇವಲ ನಿಮ್ಮ ಕುಟುಂಬಕ್ಕೆ ಮಾತ್ರವೇ ಅಸಮಾಧಾನ ತರದೇ ಸಂಬಂಧಗಳಲ್ಲೂ ಶೂನ್ಯತೆಯನ್ನು ತರಬಹುದು.

### ವೃಷಭ ರಾಶಿ

ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನೀವು ಅತ್ಯಂತ ಅನಿರಿಕ್ಷಿತ ಮೂಲಗಳಿಂದ ಗಳಿಕೆಯ ಸಾಧ್ಯತೆಯನ್ನು ಹೊಂದಿದ್ದೀರಿ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ನಿಮ್ಮ ಕಣ್ಣುಗಳು ಅದೆಷ್ಟು ಪ್ರಕಾಶಮಾನವಾಗಿವೆಯೆಂದರೆ ಅವು ನಿಮ್ಮ ಪ್ರೇಮಿಯ ಕಾಳರಾತ್ರಿಯನ್ನು ಬೆಳಗಬಹುದು.

### ಮಿಥುನ ರಾಶಿ

ನಿಮ್ಮ ಬಲವಾದ ಧೃಢತೆ ಮತ್ತು ನಿರ್ಭಯತೆ ನಿಮ್ಮ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ. ನೀವು ಅತ್ಯಂತ ಅನಿರೀಕ್ಷಿತ ಮೂಲಗಳಿಂದ ಗಳಿಕೆಯ ಸಾಧ್ಯತೆಯನ್ನು ಹೊಂದಿದ್ದೀರಿ. ಈ ಅವಧಿ ನಿಮ್ಮ ಹೊಸ ಯೋಜನೆಗಳು ಹಾಗೂ ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

### ಕರ್ಕ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ. ಇಂದು ನೀವು ಒಂದು ಹೃದಯ ಒಡೆಯುವುದನ್ನು ತಪ್ಪಿಸುತ್ತೀರಿ. ನಿಮ್ಮ ಕೆಲಸಕ್ಕೆ ಮೆಚ್ಚುಗೆ ದೊರಕಲಿದೆ.

### ಸಿಂಹ ರಾಶಿ

ನಿಮ್ಮ ನಿರಾಶಾದಾಯಕ ನಡವಳಿಕೆಯಿಂದಾಗಿ ನೀವು ಯಾವದೇಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿ ಯನ್ನು ಕುಂಠಿತಗೊಳಿಸಿದೆಯೆಂದು ಕಂಡುಕೊಳ್ಳಲು ಇದು ಸಕಾಲ. ಸಕಾರಾತ್ಮಕವಾಗಿ ಆಲೋಚಿಸಿ ಮತ್ತು ನಿಮ್ಮ ವಿವೇಚನೆಯಲ್ಲಿ ಗಮನಾರ್ಹ ಬದಲಾವಣೆ ಕಾಣುತ್ತದೆ. ಜಂಟಿ ಯೋಜನೆಗಳು ಮತ್ತು ಸಂಶಯಾಸ್ಪದ ಹಣಕಾಸು ಯೋಜನೆಗಳಲ್ಲಿ ಹೂಡಿಕೆ ಮಾಡಬೇಡಿ.

### ಕನ್ಯಾ ರಾಶಿ

ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಕೆಲಸದ ಒತ್ತಡ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇಸಮಯವಿಲ್ಲದಂತೆ ಮಾಡುತ್ತದೆ.

### ತುಲಾ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮಗೆ ಹತ್ತಿರವಿರುವ ಯಾರಾದರೂ ಅತ್ಯಂತ ಅನಿರೀಕ್ಷಿತ ಮನಸ್ಥಿತಿಯಲ್ಲಿರುತ್ತಾರೆ. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ. ಕೆಲಸದ ಸ್ಥಳದಲ್ಲಿ ಸಾಮರ್ಥ್ಯವನ್ನು ಸುಧಾರಿಸಲು ನಿಮ್ಮ ಕೌಶಲ್ಯದ ಮಟ್ಟವನ್ನು ಸುಧಾರಿಸಲು ಪ್ರಯತ್ನಿಸಿ.

### ವೃಶ್ಚಿಕ ರಾಶಿ

ನಕಾರಾತ್ಮಕ ಆಲೋಚನೆಗಳು ಮಾನಸಿಕ ಕಾಯಿಲೆಗಳಾಗುವ ಮೊದಲೇ ನೀವು ಅವುಗಳನ್ನು ನಾಶಮಾಡಬೇಕು. ನೀವು ನಿಮಗೆ ಸಂಪೂರ್ಣ ಮಾನಸಿಕ ತೃಪ್ತಿ ನೀಡುವ ದಾನ ಮತ್ತು ಧರ್ಮಕಾರ್ಯಗಳಲ್ಲಿ ನಿಮ್ಮನ್ನು ತೊಡಗಿಸಿಕೊಂಡು ಅವುಗಳನ್ನು ತೊಡೆದುಹಾಕಬಹುದು. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

### ಧನು ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು. ಮಕ್ಕಳೊಂದಿಗೆ ಸಮಯ ಕಳೆಯುವುದು ಮುಖ್ಯ. ಪ್ರೇಮನಿವೇದನೆ ನಿಮ್ಮ ಹೊರೆಯನ್ನು ಇಳಿಸುವುದರಿಂದ ನಿಮಗೆ ಆನಂದವಾಗಬಹುದು. ಇತರ ದೇಶಗಳಲ್ಲಿ ವೃತ್ತಿಪರ ಸಂಪರ್ಕಗಳನ್ನು ಅಭಿವೃದ್ಧಿಪಡಿಸಲು ಇದು ಉತ್ತಮ ಸಮಯ.

### ಮಕರ ರಾಶಿ

ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ ಮತ್ತು ಇಂದು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ನಿಮ್ಮ ವೈಯಕ್ತಿಕ ರಂಗದಲ್ಲಿ ಮುಖ್ಯ ಬೆಳವಣಿಗೆಯಾಗುತ್ತಿದ್ದು ಇದು ನೀವು ಮತ್ತು ನಿಮ್ಮ ಇಡೀ ಕುಟುಂಬಕ್ಕೆ ಸಂತೋಷ ತರುತ್ತದೆ.

### ಕುಂಭ ರಾಶಿ

ನಿಮ್ಮ ಅನಾರೋಗ್ಯದ ಬಗ್ಗೆ ಚರ್ಚಿಸುವುದನ್ನು ತಪ್ಪಿಸಿ. ನಿಮ್ಮ ಕಾಯಿಲೆಯ ಬಗ್ಗೆ ಹೆಚ್ಚು ಮಾತನಾಡಿದಷ್ಟೂ ಅದು ಇನ್ನೂ ಉಲ್ಬಣಗೊಳ್ಳುವುದರಿಂದ ನಿಮ್ಮ ಗಮನವನ್ನು ಬೇರೆಡೆಗೆ ಕಾಯಿಲೆಯಿಂದ ತಿರುಗಿಸಲು ಏನಾದರೂ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ.

### ಮೀನ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ನೀವು ಯಾರನ್ನಾದರೂ ಮರಳಿ ಎರವಲು ಕೇಳುತ್ತಿದ್ದರೆ ಮತ್ತು ಇಲ್ಲಿಯವರೆಗೆ ಅವರು ನಿಮ್ಮ ಮಾತನ್ನು ತಪ್ಪಿಸುತ್ತಿದ್ದರೆ, ಇಂದು ಅವರು ಮಾತನಾಡದೆ ಹಣವನ್ನು ನಿಮಗೆ ಹಿಂದಿರುಗಿಸಬಹುದು. ನಿಮ್ಮ ಮನಸ್ಸಿನಲ್ಲಿ ಒತ್ತಡವಿದ್ದಲ್ಲಿ – ನಿಮ್ಮ ಸಂಬಂಧಿಕರು ಅಥವಾ ಆಪ್ತ ಸ್ನೇಹಿತರೊಡನೆ ಮಾತನಾಡಿ –ಇದು ನಿಮ್ಮ ತಲೆಯ ಹೊರೆಯನ್ನು ಕಡಿಮೆ ಮಾಡುತ್ತದೆ. ನೀವು ಇಂದುಪ್ರೀತಿ ಮಾಡುವ ಅವಕಾಶವನ್ನು ಕಳೆದುಕೊಳ್ಳದಿದ್ದಲ್ಲಿ, ನಿಮ್ಮ ಇಡೀಜೀವನದಲ್ಲಿ ಈ ದಿನವನ್ನು ಎಂದಿಗೂ ಮರೆಯುವುದಿಲ್ಲ.

# ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ "ಸಾಧಕ ವಿಭೂಷಣ" ಅಂತರಾಷ್ಟ್ರೀಯ ಪ್ರಶಸ್ತಿ

**ದಾವಣಗೆರೆ:** ವಾಣಿಜ್ಯ ನಗರಿ ದಾವಣಗೆರೆಯಲ್ಲಿ ಕಳೆದ 4 ದಶಕಗಳಿಂದ ಸಾಂಸ್ಕೃತಿಕ ನಗರಿಯನ್ನಾಗಿ ಪರಿವರ್ತನೆಯೊಂದಿಗೆ ನಿರಂತರವಾಗಿ ಕಠಿಣ ಪರಿಶ್ರಮದೊಂದಿಗೆ ಕಲೆ, ಸಾಹಿತ್ಯ, ಸಂಗೀತ, ಯಕ್ಷಗಾನ ಸೇರಿದಂತೆ ಅಪ್ಪಟ ಕನ್ನಡ ಭಾಷೆಯನ್ನು ವೈಭವೀಕರಿಸಿದ "ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ" ಮತ್ತು "ದಾವಣಗೆರೆಯ ಯಕ್ಷಗಾನ ರಾಯಭಾರಿ" ಎಂದೇ ಪ್ರಖ್ಯಾತರಾದ ಪ್ರಾಥಮಿಕ ಶಾಲೆಗೆ ಸೀಮಿತರರದ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಯಾವುದೇ ಸ್ವಾರ್ಥವಿಲ್ಲದೇ ಅಪಾರ ಜ್ಞಾನದೊಂದಿಗೆ

ಸಮಾಜವನ್ನು ಉಜ್ವಲಗೊಳಿಸಿದ ಅದ್ವಿತೀಯ ಪ್ರತಿಭೆ ಅವರ ಸಾಧನೆಗಳನ್ನು ಗುರುತಿಸಿ "ಸಾಧಕ ವಿಭೂಷಣ" ಅಂತರಾಷ್ಟ್ರೀಯ ಪ್ರಶಸ್ತಿಯನ್ನು ಇತ್ತೀಚಿಗೆ ಆನ್‌ಲೈನ್‌ನಲ್ಲಿ ಅಂತರಾಷ್ಟ್ರೀಯ ಕವಿಗೋಷ್ಠಿ ಹಾಗೂ ಗೌರವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ವಿತರಿಸಲಾಯಿತು ಎಂದು ನಾಗರಮನೋಳಿಯ ಕವಿತ್ತಕರ್ಮಮಣಿ ಫೌಂಡೇಶನ್ ಅಧ್ಯಕ್ಷರಾದ ಲಾಲಸಾಬ ಹೆಚ್. ಪೆಂಡಾರಿ ತಿಳಿಸಿದ್ದಾರೆ.

ಶೆಣೈಯವರ ಈ ಅಂತರಾಷ್ಟ್ರೀಯ ಪ್ರಶಸ್ತಿಗೆ ಭಾಜನರಾಗಿದ್ದಕ್ಕೆ ಬಿಚ್ಚತ್ತಿ ಕುಟುಂಬ, ಕಲಾಕುಂಚ, ಯಕ್ಷರಂಗ, ಸಿನಿಮಾಸಿರಿ, ಶ್ರೀ ಗಾಯಿತ್ರಿ ಪರಿವಾರ, ಕರ್ನಾಟಕ ಸಗಮ ಸಂಗೀತ ಪರಿಷತ್, ಶ್ರೀಮತಿ



ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಗೌಡಸಾರಸ್ವತ ಸಮಾಜ, ದಾವಣಗೆರೆ ಜಿಲ್ಲಾ ಛಾಯಗ್ರಾಹಕ ಸಂಘ, ಕರಾವಳಿ ಮಿತ್ರ ಮಂಡಳಿ ಮುಂತಾದ ಸಂಘಟನೆಗಳ ಸರ್ವ ಸದಸ್ಯರು, ಪದಾಧಿಕಾರಿಗಳು ಅಭಿಮಾನದಿಂದ ಅಭಿನಂದನೆ ಸಲ್ಲಿಸಿದ್ದಾರೆ.

# ಉಮೇಶ್ ಕುಮಾರ್ ಹೆಚ್.ಎನ್ ಅವರಿಗೆ ರಾಜ್ಯಮಟ್ಟದ ಕನ್ನಡ ಕೋಗಿಲೆ ಪ್ರಶಸ್ತಿ



**ದಾವಣಗೆರೆ :** ನನ್ನ ಹಾಡು ಗಾಯನ ಸ್ಪರ್ಧೆಯಲ್ಲಿ ರಾಜ್ಯಮಟ್ಟದ ಕನ್ನಡ ಕೋಗಿಲೆ ಪ್ರಶಸ್ತಿಗೆ ಉಮೇಶ್ ಕುಮಾರ್ ಹೆಚ್.ಎನ್ ಭಾಜನರಾಗಿದ್ದಾರೆ.

ಕರ್ನಾಟಕ ರಾಜ್ಯ ಬರಹಗಾರ ಸಂಘ, (ರಿ) ರಾಜ್ಯ ಘಟಕ ಹೂವಿನ ಹಡಗಲಿ ಮತ್ತು ಚಿಕ್ಕಮಗಳೂರು ಜಿಲ್ಲಾ ಘಟಕದ

ಸಹಯೋಗದಲ್ಲಿ ಜೂನ್ 15,2025 ರಂದು ಕರ್ನಾಟಕ ಧ್ವನಿ 47ರ ಸಂಚಿಕೆಯ ಗಾಯನ ಸ್ಪರ್ಧೆಯಲ್ಲಿ ಉಮೇಶ್ ಕುಮಾರ್ ಹೆಚ್.ಎನ್ ಅವರು ಭಾಗವಹಿಸಿದ್ದರು.

ಜುಲೈ 27,2025 ರಂದು ಚಿಕ್ಕಮಗಳೂರಿನ ಕನ್ನಡ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಮೇಶ್ ಕುಮಾರ್ ಹೆಚ್.ಎನ್ ಅವರಿಗೆ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.

ಈ ಪ್ರಶಸ್ತಿಗೆ ಆಯ್ಕೆ ಮಾಡಿದ ಕರ್ನಾಟಕ ರಾಜ್ಯ ಬರಹಗಾರ ಸಂಘದ ಅಧ್ಯಕ್ಷರಾದ ಮಧು ನಾಯಕ್ ಲಮಾಣಿ ಅವರಿಗೆ ಉಮೇಶ್ ಕುಮಾರ್ ಹೆಚ್.ಎನ್ ಕೃತಜ್ಞತೆ ಸಲ್ಲಿಸಿದ್ದಾರೆ.

# ನಿತ್ಯ ಮಕ್ಕಳ ಜೊತೆ ಪಾಠ ನಲಿ ಕಲಿಯುವುದೇ ಸಂತಸ ತಂದಿದೆ

**ಜಗಳೂರು:** ಶಿಕ್ಷಕ ಎಂದರೆ ಪ್ರತಿಯೊಬ್ಬ ವಿದ್ಯಾರ್ಥಿಗೆ ದಾರಿ ದೀಪವಿದ್ದಂತೆ. ವಿದ್ಯಾರ್ಥಿಯ ಕಲಿಕೆಯ ಎಲ್ಲಾ ಆಯಾಮಗಳಲ್ಲಿ ಗುರುವಿನ ಪಾತ್ರವಿರುತ್ತದೆ.ಸರ್ಕಾರಿ ಶಾಲೆಯಾಗಿರಲಿ, ಖಾಸಗಿ ಶಾಲೆಯಾಗಿರಲಿ ನಿವೃತ್ತಿಯಾಗುವುದುಎಂದರೆಒಂದು ರೀತಿ ಸಂಕಟಕದ'ಸ್ಥಿತಿ. ನಿತ್ಯಮಕ್ಕಳ ಜೊತೆ ಪಾಠ ನಲಿ ಕಲಿಯುವುದೇ ಸಂತಸ ತಂದಿದೆ ಎಂದು ವಾಣಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕರಾಗಿ ನಿವೃತ್ತಿಯಾದ ಎಂ.ಜಿ.ಚಿದಾನಂದಪ್ಪ ಹೇಳಿದರು.

ತಾಲೂಕಿನ ಬಿಳಿಚೋಡು ಗ್ರಾಮದಲ್ಲಿರುವ ಖಾಸಗಿಯ ವಾಣಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಯೋನಿ ವೃತ್ತಿ ಹೊಂದಿದ ಶಿಕ್ಷಕ ಎಂ.ಜಿ.ಚಿದಾನಂದಪ್ಪಗೆ ಗ್ರಾಮಸ್ಥರು, ಶಿಕ್ಷಕರು ಗುರುವಾರ ಹಮ್ಮಿಕೊಂಡಿದ್ದ ಬೀಳ್ಕೊಡು ಗೆಸಮಾರಂಭದಲ್ಲಿ



ಮಾತನಾಡಿದರು.

ಶಿಕ್ಷಕನಾದವನು ನಮ್ಮಲ್ಲಿರುವ ಬೌದ್ಧಿಕ ಜ್ಞಾನವನ್ನು ವಿದ್ಯಾರ್ಥಿಗಳಿಗೆ ಪ್ರಾಮಾಣಿಕವಾಗಿ ಉಣಬಡಿಸಿ ಎಲ್ಲ ಸ್ಥರದ ವಿದ್ಯಾರ್ಥಿಗಳನ್ನು ಮುನ್ನೆಲೆ ತರುವವನೇ ನಿಜವಾದ ಶಿಕ್ಷಕ.ನಮ್ಮ ಶಾಲೆಯಲ್ಲಿ ಓದಿದ ಅನೇಕ ವಿದ್ಯಾರ್ಥಿಗಳು, ಪೋಲೀಸ್, ಇಂಜಿನಿಯರ್ ಸೇರಿದಂತೆ ಸರ್ಕಾರಿ ಹುದ್ದೆಯಲ್ಲಿ ಸೇರಿದ್ದಾರೆ. ಅದಲ್ಲದೇ ವಾಣಿ ಶಾಲೆಯು ಎಲ್ಲವನ್ನೂ ನನಗೆ ಕೊಟ್ಟಿದೆ.ಗ್ರಾಮಸ್ಥರು, ಶಾಲಾ ಶಿಕ್ಷಕರುಗಳು, ಆಡಳಿತ ಮಂಡಳಿಯವರು ನಮ್ಮ ವೃತ್ತಿ ಜೀವನದ ಕಡೆಯವರೆಗೂ ಯಾವುದ ಕ್ಯೂಚ್ಯುತಿಬಾರದೇ ನೋಡಿಕೊಂಡಿರುವುದು ನನ್ನ ಭಾಗ್ಯ, ಶಿಕ್ಷಣ ಇಲಾಖೆ ಅಧಿಕಾರಿಗಳ ಸಹಕಾರ ನೀಡಿದ್ದಾರೆ ಎಂದು ಹೇಳುವಾಗ ದುಃಖಿತರಾದರು.

ವಾಣಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿಎಚ್. ಎನ್.ಯಶೋಧಾ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ಶಾಲೆಯಲ್ಲಿ ರಾಷ್ಟ್ರೀಯ ಹಬ್ಬಗಳಾದಿಯಾಗಿ ಎಲಾ ಕಾರ್ಯಗಳಲ್ಲಿ ಶಿಕ್ಷಕಚಿದಾನಂದಿಯಾಗಿ ಎಲ್ಲರೂಒಗ್ಗಟ್ಟಿನಿಂದ ಶ್ರಮಿಸುತ್ತಿದ್ದೇವೆ. ಹೀಗಾಗಿ ಶಾಲೆ ಅಭಿವೃದ್ಧಿ ಸಾಧ್ಯವಾಯಿತು.ಬೇರೆ ಬೇರೆ ಊರುಗಳಿಂದಮಕ್ಕಳು ಬಂದು ಶಿಕ್ಷಣ ಪಡೆಯುವಷ್ಟು ಮಟ್ಟಿಗೆ ಸರಕಾರಿ ಶಾಲೆಯನ್ನು ಅಭಿವೃದ್ಧಿ ಪಡಿಸಲು ಎಲ್ಲ ಶಿಕ್ಷಕರು ಶ್ರಮಿಸುತ್ತಿದ್ದಾರೆ .ನಿವೃತ್ತಿ ಹೊಂದಿದ ಎಂ.ಜಿ.ಚಿದಾನಂದಪ್ಪ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಶುಭಕೋರಿದರು.

ಕಾರ್ಯಕ್ರದಲ್ಲಿ ವಾಣಿ ಹಿರಿಯ ಪ್ರಾಥಮಿಕ ಶಾಲೆಯ ನಿವೃತ್ತ ಶಿಕ್ಷಕ ಎಚ್.ಬಿ.ಜಯಪ್ಪ, ತಾಲೂಕು ಕಾರ್ಯನಿರತ ಪತ್ರಕರ್ತರಸಂಘದ ಅಧ್ಯಕ್ಷ ಜಿ.ಎಸ್.ಚಿದಾನಂದ, ಕೆ.ಜಿ.ಚನ್ನಬಸಪ್ಪ, ವಾಣಿ ಶಾಲೆಯ ಶಿಕ್ಷಕರಾದ ಕೆ.ಟಿ.ಮಂಜಣ್ಣ, ಶಿವಕುಮಾ ಗ್ರ್ರಾಮದ ಮುಖಂಡರಾದ ತಿಪ್ಪೇಸ್ವಾಮಿ, ಬರಮಣ್ಣ, ವೆಂಟಕೇಶ್, ಕೆಪಿಎಸ್ಸಿ ಶಾಲೆಯ ಮುಖ್ಯ ಶಿಕ್ಷಕರಾದ ಪ್ರಶಾಂತ್, ಸಹಶಿಕ್ಷರುಗಳಾದ ರೂಪಾ. ಶಾಂತಲಾ, ರೇವಣ್ಣ, ರೇಖಾ, ಜ್ಯೋತಿ, ನರೇನಹಳ್ಳಿ ಮುಖ್ಯ ಶಿಕ್ಷಕ ನಾಗರಾಜ್, ಮುಷ್ಟಿಗರಹಳ್ಳಿ ಶಾಲೆಯ ಮುಖ್ಯ ಶಿಕ್ಷಕರಾದ ಹನುಮಂತಪ್ಪ, ದೇವಿಕೆರೆ ಶಾಲೆಯ ಸಹಶಿಕ್ಷಕರಾದ ಬಸಮ್ಮ ಸೇರಿದಂತ 'ಅನೇಕರುಇದ್ದರು.

ಅ)ಜಗಳೂರು ತಾಲೂಕಿನ ಬಿಳಿಚೋಡು ವಾಣಿಶಾಲೆಯ ಸಹ ಶಿಕ್ಷಕ ಎಂ.ಜಿ.ಚಿದಾನಂದಪ್ಪ ನಿವೃತ್ತಿಯಾದ ಹಿನ್ನೆಲೆ ಬೀಳ್ಕೊಡುಗೆ ಹಮ್ಮಿಕೊಳ್ಳಲಾಗಿತ್ತು.

# ಯೂರಿಯಾ ಕೊರತೆ – ಬಿಜೆಪಿ ರೈತ ಘಟಕದಿಂದ ಪ್ರತಿಭಟನೆ

**ಬಳ್ಳಾರಿ:** ರಾಜ್ಯದ ರೈತರಿಗೆ ಸಮರ್ಪಕವಾಗಿ ರಸಗೊಬ್ಬರ ಪೂರೈಸುವಲ್ಲಿ ಸರಕಾರ ವಿಫಲವಾಗಿದೆ ಎಂದು ಆರೋಪಿಸಿ ಭಾರತೀಯ ಜನತಾ ಪಾರ್ಟಿ ರೈತ ಮೋರ್ಚಾ ಘಟಕದಿಂದ ಇಂದು ಪ್ರತಿಭಟನೆ ನಡೆಸಲಾಯಿತು.

ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಸರಬರಾಜು ಆಗುತ್ತಿರುವ ಬಿತ್ತನೆ ಬೀಜ ಕಳಪೆಯಾಗಿವೆ. ಇಳುವರಿ ಮೇಲೆ ಪೆಟ್ಟು ಬಿದ್ದಿದೆ. ರಾಜ್ಯದಲ್ಲಿ ನಕಲಿ ರಸಗೊಬ್ಬರ ಕಂಪನಿಗಳು ತಲೆ ಎತ್ತಿದೆ. ರಾಜ್ಯದ ವಿವಿಧ ಜಿಲ್ಲೆಗಳಿಗೆ ಭೇಟಿ ಕೊಟ್ಟು ಬೆಳೆ ಮತ್ತು ಬಿತ್ತನೆ ಮಾದರಿ ಪರಿಶೀಲಿಸಬೇಕಿದ್ದ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಬೆಂಗಳೂರು ಮತ್ತು ಮಂಡ್ಯ ಜಿಲ್ಲೆಗೆ ಸೀಮಿತಗೊಂಡಿದ್ದಾರೆ' ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷರಾದ ಎಸ್.ಗುರುಲಿಂಗನಗೌಡ ಆರೋಪಿಸಿದರು.

ಗೌಡರೊಂದಿಗೆ ಸಾಥ್ ನೀಡಿದ ಬಿಜೆಪಿ ಕಾರ್ಯಕರ್ತರು ಕೇಂದ್ರ ಸರ್ಕಾರ ಸಮರ್ಪಕವಾಗಿ ನೀಡಿರುವ ರಸಗೊಬ್ಬರವನ್ನು ರಾಜ್ಯ ಸರ್ಕಾರ ರೈತರಿಗೆ ಸರಿಯಾಗಿ ಹಂಚಿಕೆ ಮಾಡಿಲ್ಲ ಎಂದು ಆರೋಪಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ರಾಯಲ್ ವೃತ್ತದಲ್ಲಿ ಸಮಾವೇಶಗೊಂಡು ಕೆಲವು ಹೊತ್ತು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯದಲ್ಲಿ ರೈತರಿಗೆ ಬೇಡಿಕೆಯಷ್ಟು ಯೂರಿಯಾ ಗೊಬ್ಬರ ಒದಗಿಸುವಲ್ಲಿ ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ. ಕಾಳಸಂತೆಯಲ್ಲಿ ಅದನ್ನು ಮಾರಲಾಗುತ್ತಿದೆ ಎಂದು ದೂರಿದರು.

ಕೇಂದ್ರ ಸರ್ಕಾರ ಒದಗಿಸಿರುವ ರಸಗೊಬ್ಬರವನ್ನು ರಾಜ್ಯ ಸರ್ಕಾರ ರೈತರಿಗೆ



ಸರಿಯಾಗಿ ಹಂಚಿಕೆ ಮಾಡುತ್ತಿಲ್ಲವೆಂದು ರಾಯಲ್ ವೃತ್ತದಲ್ಲಿ ಸಮಾವೇಶಗೊಂಡ ಕಾರ್ಯಕರ್ತರು, ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಯಲ್ ವೃತ್ತದಿಂದ ಹಳೇ ತಾಲೂಕು ಕಛೇರಿ ಅವರಣದಲ್ಲಿರುವ ಕೃಷಿ ಇಲಾಖೆಯ ಜಂಟಿ ನಿರ್ದೇಶಕರ ಕಛೇರಿಯವರೆಗೆ ಪಕ್ಷದ ಕಾರ್ಯಕರ್ತರೊಂದಿಗೆ ಆಗಮಿಸಿದ ಎಸ್. ಗುರುಲಿಂಗನಗೌಡರು, ಕಳೆದೆರಡು ವರ್ಷಗಳಲ್ಲಿ ರಾಜ್ಯದ ವಿವಿಧೆಡೆ ಶೇ 30 ರಿಂದ 40 ರಷ್ಟು ಮಳೆ ಕೊರತೆಯಾಗಿತ್ತು. ಆಗ ಯೂರಿಯಾ ಗೊಬ್ಬರಕ್ಕೆ ಬೇಡಿಕೆಯೂ ಕಡಿಮೆ ಇತ್ತು. ಈ ವರ್ಷ ಮುಂಗಾರು ಪೂರ್ವ ಮತ್ತು ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗಿದೆ. ರೈತರು ಕೃಷಿ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಯೂರಿಯಾ ದುರುಪಯೋಗಪಡಿಸಿಕೊಂಡು ಕಾಳಸಂತೆಯಲ್ಲಿ ಮಾರುತ್ತಿರುವುದು ಬಹಿರಂಗವಾಗಿದೆ ದೂರಿದರು.

ಮಾಜಿ ಶಾಸಕ ಜಿ.ಸೋಮಶೇಖರರೆಡ್ಡಿ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದಲೂ ರೈತರಿಗೆ ಅನ್ಯಾಯವಾಗುತ್ತಿದೆ. ರೈತರ ಕಲ್ಯಾಣಕ್ಕಾಗಿ ಹಿಂದಿನ ಬಿಜೆಪಿ ಸರ್ಕಾರ ರೂಪಿಸಿದ್ದ ರೈತ ವಿದ್ಯಾನಿಧಿ ಯೋಜನೆ, ಕೃಷಿ ಉಪಕರಣಗಳಿಗೆ ಸಬ್ಸಿಡಿ ಮತ್ತು ರಾಗಿ ಕೃಷಿಗೆ ಬೆಂಬಲ ಬೆಲೆ ಮತ್ತಿತರ ಕಾರ್ಯಕ್ರಮಗಳನ್ನು ಸ್ಥಗಿತಗೊಳಿಸಿದ್ದಾರೆ.

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಗೆ ರಾಜ್ಯ ಸರ್ಕಾರ ತನ್ನ ಪಾಲು ಕೊಡುತ್ತಿಲ್ಲ ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ರೈತ ಮೋರ್ಚಾದ ಜಿಲ್ಲಾಧ್ಯಕ್ಷ ಗಣಪಾಲ ಐನಾಥ ರೆಡ್ಡಿ, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ವಿ.ರಾಮಚಂದ್ರಪ್ಪ, ಉರುಕುಂದ, ಓಬಳೇಶ್, ಮಹೇಶ್ವರಸ್ವಾಮಿ, ಉಜ್ವಲ, ಕಮ್ಮರಚೇಡು ಅಂಜಿ, ಭೋಜರಾಜ, ಸುಗುಣ, ಅಲುವೇಲಮ್ಮ ಸೇರಿದಂತೆ ಹಲವಾರು ರೈತರು, ಬಿಜೆಪಿ ಮುಖಂಡರು ಕಾರ್ಯಕರ್ತರು ಮತ್ತಿತರರು ಉಪಸ್ಥಿತರಿದ್ದರು.

# ಬಾಮ ಅವರ ಸಣ್ಣಕಥೆ ದಾವಿವಿಯ ಪಠ್ಯಪುಸ್ತಕಕ್ಕೆ ಆಯ್ಕೆ

**ದಾವಣಗೆರೆ :** ಹಿರಿಯ ಪತ್ರಕರ್ತರೂ ಆಗಿರುವ ಸಾಹಿತಿ ಬಾ ಮ ಬಸವರಾಜಯ್ಯ ಅವರ ಸಣ್ಣ ಕಥೆ ದಾವಣಗೆರರೆ ವಿಶ್ವವಿದ್ಯಾಲಯದ ತೃತೀಯ ಬಿ.ಎ, ಬಿ.ಎಸ್.ಡಬ್ಲ್ಯೂ, ಬಿ.ಎಫ್.ಡಿ, ಸ್ನಾತಕ ಕನ್ನಡ ಭಾಷಾ ಪಠ್ಯಪುಸ್ತಕಕ್ಕೆ ಆಯ್ಕೆಯಾಗಿದೆ.

ಈ ಕಥೆಯನ್ನು ಬಾಮ ಬಸವರಾಜಯ್ಯ ಅವರ 'ಬಯಲು ಸೀಮೆ ಬೆಂಕಿ ಬೆಳಕು' ಕಥಾ ಸಂಕಲನ ದಿಂದ ಆಯ್ಕೆ ಮಾಡಿಕೊಳ್ಳಲಾಗಿದೆ ಎಂದು ದಾವಣಗೆರೆ ವಿವಿ ಸ್ನಾತಕ ಕನ್ನಡ ಅಧ್ಯಯನ ಮಂಡಳಿ ಅಧ್ಯಕ್ಷ ಡಾ. ಜೋಗಿನಕಟ್ಟೆ ಮಂಜುನಾಥ ಅವರು ತಿಳಿಸಿದ್ದಾರೆ. ಸೀನಪ್ಪ ಸಿದ್ದಣ್ಣ ಮತ್ತು ಕಾನೂನು' ಕಥೆಯು 90ರ ದಶಕದಲ್ಲಿ 'ಪ್ರಜಾವಾಣಿ' ಪತ್ರಿಕೆಯಲ್ಲಿ ಪ್ರಕಟವಾಗಿದೆ.

# ಇಂದು ಶ್ರಾವಣದ ವಿಶೇಷ ಪೂಜೆ

**ಹರಪನಹಳ್ಳಿ :** ಚಿಗಟೇರಿ ಗ್ರಾಮದ ಶ್ರೀ ಶಿವ ನಾರದಮುನಿ ಸ್ವಾಮಿಯ ಸನ್ನಿಧಾನದಲ್ಲಿ ಇಂದು ಶನಿವಾರ 8ನೇ ವರ್ಷದ ಹೂವಿನ ಅಲಂಕಾರದೊಂದಿಗೆ ವಿಶೇಷ ಪೂಜೆ ಮತ್ತು ಅನ್ನ ಸಂತರ್ಪಣೆ ಕಾರ್ಯ ನಡೆಯಲಿದೆ. ಈ ಸೇವೆಯನ್ನು ಪಲ್ಲಾಗಟ್ಟೆಯ ಶ್ರೀ ಶಿವ ನಾರದಮುನಿ ಸೇವಾ ಸಮಿತಿಯು ಸಲ್ಲಿಸಲಿದೆ.

# ಸುಗಮ ಸಂಗೀತ ಕಲಾ ತರಬೇತಿಗೆ ಚಾಲನೆ




**ಗದಗ :** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ 2025–26 ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸುಗಮ ಸಂಗೀತ ಕಲಾ ತರಬೇತಿ ಕಾರ್ಯಕ್ರಮಕ್ಕೆ ಬುಧವಾರ ಗದಗನ ರಾಜೀವ ಗಾಂಧಿ ನಗರದ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದಲ್ಲಿ ಚಾಲನೆ ನೀಡಲಾಯಿತು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು .ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ವಿಶ್ವದಲ್ಲಿ ಸಂಗೀತ ಕ್ಷೇತ್ರಕ್ಕೆ ಭಾರತ ರತ್ನ ಪ್ರಶಸ್ತಿ ಪಡೆದ ಏಕೈಕ ಸಂಗೀತ ವಿದ್ವಾಂಸರು ಗದಗಿನವರು. ಅವರು ಸಂಗೀತ ಕ್ಷೇತ್ರದ ಸಾಧನೆಗಾಗಿ ಭಾರತ ರತ್ನ ಪುರಸ್ಕೃತ ಪಂಡಿತ ಭೀಮಸೇನ ಜೋಶಿ ಸಾಧನೆಗೆ ಪಾತ್ರರಾಗಿದ್ದಾರೆ. ಜೊತೆಗೆ ರಾಜ್ಯದಲ್ಲಿ ಗದಗ ಎಂದ ತಕ್ಷಣ ಗಾನಯೋಗಿ ಪಂಡಿತ ಪುಟ್ಟರಾಜ ಗವಾಯಿ ಸಂಗೀತ ಪಾಠಶಾಲೆ ಎಲ್ಲರಿಗೂ ನೆನಪಾಗುತ್ತದೆ. ಅಂತಹ ಸಂಗೀತದ ಪರಂಪರೆ ಹೊಂದಿರುವ ಗದಗ ಜಿಲ್ಲೆ ಸಂಗೀತದಲ್ಲಿ ಸಮೃದ್ಧವಾಗಿದೆ ಎಂದರು. ಸರ್ಕಾರ ಮಕ್ಕಳಿಗೆ ಶಿಕ್ಷಣಕ್ಕಾಗಿ ಉಚಿತ ಶಿಕ್ಷಣ ವಸತಿ ಜೊತೆಗೆ ಸುಗಮ ಸಂಗೀತ ತರಬೇತಿಯನ್ನು ನೀಡುತ್ತಿರುವುದು ಸಂತಸದ ವಿಷಯ. ಇದನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ತಮ್ಮಲ್ಲಿ ಅಡಗಿರುವ ಸಂಗೀತ ಪ್ರತಿಭೆ ಅನಾವರಣಕ್ಕೆ ಸಹಕಾರಿಯಾಗಲಿದೆ ಎಂದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಪ್ರಾಸ್ತಾವಿಕವಾಗಿ ಮಾತನಾಡಿ ವಸತಿ ಶಾಲೆಯ ಮಕ್ಕಳಿಗೆ ಸುಗಮ ಸಂಗೀತ ತರಬೇತಿಯನ್ನು ನುರಿತ ಕಲಾವಿದರಿಂದ ಮುಂದಿನ ಆರು ತಿಂಗಳವರೆಗೆ ನೀಡಲಾಗುವುದು. ವಾದ್ಯ ಪರಿಕರಗಳ ಜೊತೆಗೆ ತರಬೇತಿಯನ್ನು ನೀಡಲಾಗುತ್ತಿದ್ದು ಮಕ್ಕಳು ತಮಗಿರುವ ಸಂಗೀತದ ಅಭಿರುಚಿಯನ್ನು ಅಭಿವ್ಯಕ್ತಿಗೊಳಿಸುವ ಮೂಲಕ ಸಂಗೀತ ಕಲಾವಿದರಾಗಲು ಇದೊಂದು ಸುವರ್ಣಾವಕಾಶವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀಮತಿ ಮಂಜುಳಾ ಎನ್, ಮಾತನಾಡಿ ವಸತಿ ಶಾಲೆಯ ಮಕ್ಕಳಿಗೆ ಈಗಾಗಲೇ ಸರ್ಕಾರ ಹತ್ತು ಹಲವು ಸೌಲಭ್ಯಗಳನ್ನು ನೀಡುವ ಮೂಲಕ ಕಲಿಕೆಗೆ ಪ್ರೋತ್ಸಾಹ ನೀಡುತ್ತಿದೆ. ಇದರೊಂದಿಗೆ ಸಂಗೀತ ಅಭ್ಯಾಸಿಸಲು ಸಹ ಅನುವು ಮಾಡಿಕೊಟ್ಟಿರುವುದು ಸಹ ಸಂತಸ ತಂದಿದ್ದು ಮಕ್ಕಳು ಸಂಗೀತ ಅಭ್ಯಸಿಸುವ ಮೂಲಕ ಸಂಗೀತ ಜ್ಞಾನ ತಮ್ಮದಾಗಿಸಿಕೊಳ್ಳಬೇಕು ಎಂದರು.ಕಾರ್ಯಕ್ರಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಪಾಲಕರಾದ ಶ್ರೀಮತಿ ವಿದ್ಯಾ ಬೆಳವಣಕಿ, ಪಾಪನಾಶಿ ತಾಂಡಾದ ಸುಗಮ ಸಂಗೀತ ಕಲಾವಿದರಾದ ಶ್ರೀಮತಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸೋಪಡ್ಲಾ , ನವೀನ ಪತ್ತಾರ ಹಾಜರಿದ್ದರು.

# ನಿಧನ ಸುದ್ದಿಗಳು

### ಕೆ.ಜಿ. ಮಹೇಶ್ವರಪ್ಪ ನಿಧನ

**ದಾವಣಗೆರೆ:** ತಾಲೂಕಿನ ಕಂದಗಲ್ಲು ಗ್ರಾಮದ ನಿವಾಸಿಕೆ.ಜಿ. ಮಹೇಶ್ವರಪ್ಪ (76) ಬುಧವಾರ ನಿಧನರಾದರು. ಅವರಿಗೆ ಪತ್ನಿ, ಒಬ್ಬ ಪುತ್ರ, ಒಬ್ಬ ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಕಂದಗಲ್ಲು ಗ್ರಾಮದ ತೋಟದಲ್ಲಿ ಶುಕ್ರವಾರ ನಡೆದಿದೆ.

### ಸುನೀಲ್ ಸಾ ಮಿಸ್ಕಿನ್ ನಿಧನ

**ಹರಿಹರ:** ತಾಲೂಕಿನ ನಡುವಲಪೇಟೆ ವಿಠಲ ದೇವಸ್ಥಾನ ಸಮೀಪದ ನಿವಾಸಿ ಸುನೀಲ್ ಸಾ ಮಿಸ್ಕಿನ್ (69) ಗುರುವಾರ ನಿಧನರಾದರು. ಮೃತರಿಗೆ ಒಬ್ಬ ಪುತ್ರ, ಇಬ್ಬರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ರಾಣೆಬೆನ್ನೂರಿನ ಚಿತಾಗಾರದಲ್ಲಿ ನಡೆದಿದೆ.

### ಕೆ.ಜಿ. ಮಹೇಶ್ವರಪ್ಪ ನಿಧನ

**ದಾವಣಗೆರೆ:** ತಾಲೂಕಿನ ಕಂದಗಲ್ಲು ಗ್ರಾಮದ ನಿವಾಸಿ ಕೆ.ಜಿ. ಮಹೇಶ್ವರಪ್ಪ (76) ಬುಧವಾರ ನಿಧನರಾದರು. ಅವರಿಗೆ ಪತ್ನಿ, ಒಬ್ಬ ಪುತ್ರ, ಒಬ್ಬ ಪುತ್ರಿ ಇದ್ದಾರೆ. ಅಂತ್ಯಕ್ರಿಯೆ ಕಂದಗಲ್ಲು ಗ್ರಾಮದ ತೋಟದಲ್ಲಿ ಶುಕ್ರವಾರ ನಡೆದಿದೆ.

### ಶ್ರೀಮತಿ ಡಿ.ಎಸ್. ರಾಜೇಶ್ವರಿ ನಿಧನ

**ದಾವಣಗೆರೆ :** ಸಿಟಿ, ವಿದ್ಯಾನಗರ ವಾಸಿ ಕೆರೆಹೊಸಳ್ಳಿ ಶ್ರೀ ಕೆ.ಪಿ. ಮಲ್ಲಿಕಾರ್ಜುನ ಸ್ವಾಮಿ ಅವರ ಧರ್ಮಪತ್ನಿಶ್ರೀಮತಿ ಡಿ.ಎಸ್. ರಾಜೇಶ್ವರಿ ಅವರು ದಿನಾಂಕ : 31.07.2025ರ ಗುರುವಾರ ಮಧ್ಯಾಹ್ನ 1 ಗಂಟೆಗೆ ನಿಧನರಾದರು. ಮೃತರಿಗೆ 49 ವರ್ಷ ವಯಸ್ಸಾಗಿತ್ತು. ಪತಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು

ದಿನಾಂಕ: 01.08.2025ರ ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ದಾವಣಗೆರೆ ತಾಲ್ಲೂಕು, ದ್ಯಾಮೇನಹಳ್ಳಿ ಗ್ರಾಮದಲ್ಲಿ ನೆರವೇರಿದೆ.

ಇಂತಿ ದುಃಖತಪ್ತ ಕುಟುಂಬ ವರ್ಗ : ಪುತ್ರ ಆರ್ಯ, ಪುತ್ರಿ ಅನನ್ಯ,ಪುರದಪ್ಪರ ವಂಶಸ್ಥರು, ಕೆರೆಹೊಸಳ್ಳಿ, ಡಿ.ಜಿ. ಸದಾಶಿವಪ್ಪ ಮತ್ತು ಮಕ್ಕಳು, ದ್ಯಾಮಪ್ಪರ ವಂಶಸ್ಥರು, ದ್ಯಾಮೇನಹಳ್ಳಿ ಹಾಗೂ ಬಂಧು–ಮಿತ್ರರು.

## ನಿಗಮ-ಮಂಡಳಿಗೆ 12 ಜನ ಪಟ್ಟಿ ರೆಡಿ..?

**ಬೆಂಗಳೂರು :** ಬಾಕಿಯಿರುವ ನಿಗಮ ಮಂಡಳಿಗಳಿಗೆ ಅಧ್ಯಕ್ಷರನ್ನು ನೇಮಿಸಿ, ಕಾರ್ಯಕರ್ತರು ಹಾಗೂ ಮುಖಂಡರ ಬಹುದಿನಗಳ ಬೇಡಿಕೆಗೆ ಸ್ಪಂದಿಸಲು ಕಾಂಗ್ರೆಸ್ ಮುಂದಾಗಿದ್ದು, ಸುಮಾರು 12 ಜನರ ಪಟ್ಟಿ ಸಿದ್ಧಗೊಂಡಿದೆ.ಸಂಭವನೀಯರ ಪಟ್ಟಿಯಲ್ಲಿ ಇಬ್ಬರು ಶಾಸಕರ ಹೆಸರುಗಳಿದ್ದು, ಇನ್ನಿಬ್ಬರ ಶಾಸಕರ ಕುಟುಂಬದ ಸದಸ್ಯರಿಗೆ ಮಣೆ ಹಾಕುವ ಇಂಗಿ-ತ ವ್ಯಕ್ತವಾಗಿದೆ.

ಪಕ್ಷಕ್ಕಾಗಿ ಶ್ರಮಿಸಿದ, ಹಲವು ತ್ಯಾಗಗಳ ಮೂಲಕ ನೋವು ನುಂಗಿಕೊಂಡ ಪ್ರಮುಖರನ್ನು ಆಯ್ದು ನಿಗಮ ಮಂಡಳಿಗಳಿಗೆ ನಿಯೋಜಿಸುವ ಉದ್ದೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವ್ಯಕ್ತಪಡಿಸಿದ್ದಾರೆ. ಅದರಂತೆ ಸಂಭನೀಯರ ಪಟ್ಟಿ ಸಿದ್ಧಗೊಂಡಿದೆ.

ಕೂಡ್ಲಿಗಿ ಕ್ಷೇತ್ರದ ಶಾಸಕ ಡಾ. ಎನ್.ಟಿ. ಶ್ರೀನಿವಾಸ್, ಮಾಯಕೊಂಡ ಶಾಸಕ ಬಸಂತಪ್ಪ, ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿಗಳಾದ ಆಘಾಸುಲ್ತಾನ್, ಸತೀಶ್, ವಿನಯ್ ನವಲಘಟ್ಟಿ, ಡಾ. ಮುದ್ದು ಗಂಗಾಧರ್, ಶಾಸಕ ವಿನಯ್‌ಕುಲಕರ್ಣಿ ಅವರ ಪತ್ನಿ ಶಿವಲೀಲಾ, ಶಾಸಕ ಎಂ.ವೈ. ಪಾಟೀಲ್ ಅವರ ಪುತ್ರ ಅರುಣ್ ಪಾಟೀಲ್, ದಾವಣಗೆರೆಯ ಜಿಲ್ಲಾಕಾಂಗ್ರೆಸ್ ಅಧ್ಯಕ್ಷ ಎಚ್.ಬಿ. ಮಂಜಪ್ಪ, ಮಾಜಿ ಶಾಸಕ ರಾಮಪ್ಪ, ಕೆಪಿಸಿಸಿಯ ವಕ್ತಾರರಾದ ನಟ-ರಾಜ್‌ಗೌಡ ಅವರುಗಳನ್ನು ನಿಗಮ ಮಂಡಳಿಗೆ ನೇಮಿಸಲು ಪಟ್ಟಿ ತಯಾರಾಗಿದೆ.

ಸಂಭನೀಯರ ಪಟ್ಟಿಯಲ್ಲಿ ಡಾ. ಶ್ರೀನಿವಾಸ್, ಬಸಂತಪ್ಪ ಹಾಲಿ ಶಾಸಕರಾಗಿದ್ದರೆ, ಶಾಸಕರ ಕುಟುಂಬದ ಸದಸ್ಯರಿಗೂ ಅವಕಾಶ ಕಲ್ಪಿಸಲಾಗುತ್ತದೆ. ಕಳೆದ ಚುನಾವಣೆಯಲ್ಲಿ ಟಿಕೆಟ್ ವಂಚಿತರಾದ ನಿಕೇತ್ ರಾಜ್ ಮೌರ್ಯ, ಮುದ್ದು ಗಂಗಾಧರ್, ನಟರಾಜ್ ಗೌಡ ಅವರಿಗೆ ನಿಗಮ ಮಂಡಳಿಯಲ್ಲಿ ಅವಕಾಶ ದೊರೆಯುವ ಸಾಧ್ಯ ಇದೆ.

ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೈಕಮಾಂಡ್ ನಾಯಕರ ಜೊತೆ ಚರ್ಚೆ ನಡೆಸಿದ್ದು, ಪಟ್ಟಿಗೆ ಬಹುತೇಕ ಸಹಮತ ವ್ಯಕ್ತವಾಗಿದೆ ಎನ್ನಲಾಗಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರೊಂದಿಗೆ ಪಟ್ಟಿಯ ಬಗ್ಗೆ ಚರ್ಚೆ ನಡೆಸಲಾಗಿದೆ. ಬಹುತೇಕ ಸೊಮವಾರ ಅಥವಾ ಬುಧವಾರ ನೇಮಕಾತಿ ಆದೇಶಗಳು ಹೊರ ಬೀಳುವ ಸಾಧ್ಯತೆಗಳಿವೆ.

## ಮೂವರು ಹೆಣ್ಣು ಮಕ್ಕಳಿಗೆ ವಿಷವಿಟ್ಟು ಕೊಂದ ತಾಯಿ

**ಥಾಣೆ:** ಕೌಟುಂಬಿಕ ಸಮಸ್ಯೆಗಳಿಂದ ನೊಂದ ಮಹಿಳೆ ತಾನು ಹೆತ್ತ ಮೂವರು ಹೆಣ್ಣು ಮಕ್ಕಳಿಗೆ ವಿಷಪ್ರಾಶನ ಮಾಡಿ ಕೊಲೆ ಮಾಡಿರುವ ಘಟನೆ ನಗರದ ಶಹಾಪುರ ಪ್ರದೇಶದ ಅಸ್ನೋಲಿ ಗ್ರಾಮದಲ್ಲಿ ನಡೆದಿದೆ.

ಸಂಧ್ಯಾ ಸಂದೀಪ್ ಬೆರೆ(27) ಎಂಬಾಕೆಯನ್ನು ಪೊಲೀಸರು ಬಂಧಿಸಿದ್ದಾರೆ. ಆಹಾರದಲ್ಲಿ ಕೀಟನಾಶಕವನ್ನು ಬೆರೆಸಿ ತನ್ನ 5, 8 ಮತ್ತು 10 ವರ್ಷದ ಹೆಣ್ಣುಮಕ್ಕಳಿಗೆ ತಿನ್ನಿಸಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಮಕ್ಕಳಿಗೆ ವಾಂತಿ ಮತ್ತು ತಲೆತಿರುಗುವಿಕೆ ಸೇರಿದಂತೆ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡು ನಂತರ ಅವರನ್ನು ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಅವರ ಸ್ಥಿತಿ ಹದಗೆಟ್ಟಂತೆ, ಅವರಲ್ಲಿ ಇಬ್ಬರು ನಂತರ ಮುಂಬೈನ ಆಸ್ಪತ್ರೆಗೆ ದಾಖಲಿಸಲಾಯಿತು, ಅಲ್ಲಿ ಅವರು ಜುಲೈ 24 ಮತ್ತು ಜುಲೈ 25 ರಂದು ನಿಧನರಾದರು. ಮತ್ತೊಬ್ಬ ಬಾಲಕಿಯನ್ನು ನಾಸಿಕ್‌ನ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

ಅಲ್ಲಿ ಅವರು ಜುಲೈ 24 ರಂದು ಸಾವನ್ನಪ್ಪಿದರು ಎಂದು ಅಧಿಕಾರಿ ತಿಳಿಸಿದ್ದಾರೆ. ಆರಂಭದಲ್ಲಿ, ಖಿನವ್‌ಲಿ ಪೊಲೀಸರು ಆಕಸಿಕ ಸಾವಿನ ಪ್ರಕರಣವನ್ನು ದಾಖಲಿಸಿದ್ದರು. ಆದಾಗ್ಯೂ, ಕಳೆದ ರಾತ್ರಿ ಶವಪರೀಕ್ಷೆ ವರದಿಯಲ್ಲಿ ಮಕ್ಕಳ ದೇಹದಲ್ಲಿ ವಿಷದ ಅಂಶ ಇರುವುದನ್ನು ದೃಢಪಡಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿರ್ಣಾಯಕ ಸಾಕ್ಷ್ಯಗಳ ಆಧಾರದ ಮೇಲೆ ತ್ವರಿತ ಕಾರ್ಯನಿರ್ವಹಿಸಿ ಪೊಲೀಸರು ಮಕ್ಕಳ ತಾಯಿಯನ್ನು ಇಂದು ಮುಂಜಾನೆ 2 ಗಂಟೆ ಸುಮಾರಿಗೆ ಅವರನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಆರೋಪಿತೆಗೆ ತನ್ನ ಗಂಡನ ಮದ್ಯಪಾನ ಚಟ ಸೇರಿದಂತೆ ಕೌಟುಂಬಿಕ ಸಮಸ್ಯೆಕಾಡಿತ್ತು ಇದರಿಂದ ಅವಳು ತನ್ನ ಗಂಡನಿಂದ ಬೇರ್ಪಟ್ಟಿದ್ದಳು ಮತ್ತು ತನ್ನ ಮೂವರು ಹೆಣ್ಣುಮಕ್ಕಳನ್ನು ನೋಡಿಕೊಳ್ಳಲು ಹೆಣಗಾಡುತ್ತಿದ್ದಳು ಎಂದು ಅವರು ಹೇಳಿದರು.

ಆಕೆಯನ್ನು ವಿಚಾರಣೆಗಾಗಿ ಆರಂಭದಲ್ಲಿ ವಶಕ್ಕೆ ಪಡೆಯಲಾಯಿತು ಮತ್ತು ಶವಪರೀಕ್ಷೆಯ ವರದಿಗಳು ಬಂದ ನಂತರ ಬಂಧಿಸಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.ಪ್ರಕರಣದ ಕುರಿತು ಹೆಚ್ಚಿನ ತನಿಖೆ ನಡೆ-ಯುತ್ತಿದೆ.

## ರಾಜ್ಯದಲ್ಲಿ ಇನ್ನೊಂದು ವಾರ ಮುಂದುವರೆಯಲಿದೆ ಮಳೆ

**ಬೆಂಗಳೂರು :** ನೈರುತ್ಯ ಮುಂಗಾರು ಚುರುಕಾಗಿದ್ದು, ರಾಜ್ಯದಲ್ಲಿ ಇನ್ನೊಂದು ವಾರ ಮುಂದುವರೆಯುವ ಮುನ್ಸೂಚನೆಗಳಿವೆ. ಕರಾವಳಿ ಹಾಗೂ ಮಲೆನಾಡು ಭಾಗದ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ಒಳನಾಡಿನಲ್ಲಿ ಅಲ್ಲಲ್ಲಿ ಚದುರಿದಂತೆ ಸಾಧಾರಣ ಮಳೆಯಾಗಿದೆ.

ಹವಾಮಾನ ಇಲಾಖೆ ಮಾಹಿತಿ ಪ್ರಕಾರ ಶಿವಮೊಗ್ಗ ಜಿಲ್ಲೆಯ ಆಗುಂಬೆ-22.5 ಮಿ.ಮೀ., ಉತ್ತರ ಕನ್ನಡ ಜಿಲ್ಲೆಯ ಕ್ಯಾಸ್ಟಲ್ ರಾಕ್- 218.4 ಮಿ.ಮೀ., ಶೃಂಗೇರಿ-137ಮಿ.ಮೀ., ಸೋಮವಾರ ಪೇಟೆ-117.4 ಮಿ.ಮೀ., ಬಾಗಮಂಡಲ-117.2ಮಿ.ಮೀ., ಜಯಪುರ-104.8 ಮಿ.ಮೀ. ನಷ್ಟು ಭಾರಿ ಮಳೆಯಾಗಿದೆ.


ಕೊಟ್ಟಿಗೆಹಾರ-92.4 ಮಿ.ಮೀ., ಸಿದ್ದಾಪುರ -91.2 ಮಿ.ಮೀ, ಕೊಪ್ಪ-85ಮಿ.ಮೀ., ಬಾಳೆಹೊನ್ನೂರು-83.2 ಮಿ.ಮೀ, ಧರ್ಮಸ್ಥಳ-81, ನಾಪೋಕ್ಲು-80 ಮಿ.ಮೀ, ಪುತ್ತೂರು -73 ಮಿ.ಮೀ., ಗೇರುಸೊಪ್ಪ- 71 ಮಿ.ಮೀ.ನಷ್ಟು ಅಧಿಕ ಪ್ರಮಾಣದ ಮಳೆಯಾಗಿದೆ.

ಕರಾವಳಿ ಹಾಗೂ ಕರಾವಳಿಗೆ ಹೊಂದಿಕೊಂಡಿರುವ ಮಲೆನಾಡು ಭಾಗದ ಜಿಲ್ಲೆಗಳಲ್ಲಿ ಭಾರಿ ಮಳೆ ಮುಂದುವರೆಯಲಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ.

ರಾಜ್ಯದಲ್ಲಿ ಬಹುತೇಕ ಭಾಗಶಃ ಮೋಡ ಕವಿದ ವಾತಾವರಣ ಇರಲಿದ್ದು, ಆಗಾಗ್ಗೆ ತಂಪಾದ ಮೇಲ್ಮೈ ಗಾಳಿ ಬೀಸಲಿದೆ. ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ.

# ಮುಳ್ಳಯನಗಿರಿ ಸೌಂದರ್ಯ ಹೆಚ್ಚಿಸಿದ ನೀಲಿಕುರವಂಜಿ

## ಸಂರಕ್ಷಣಾ ಮೀಸಲು ಪ್ರದೇಶ ಘೋಷಣೆಗೆ ಆಗ್ರಹ



**ಚಿಕ್ಕಮಗಳೂರು :** ನೀಲಿಕುರುಂಜಿ ಹೂಗಳು ಚಿಕ್ಕಮಗಳೂರಿನ ಮುಳ್ಳಯ್ಯನಗಿರಿಯ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸಿದ್ದು, ಈ ಪ್ರದೇಶವನ್ನು ಸಂರಕ್ಷಣಾ ಮೀಸಲು ಪ್ರದೇಶವೆಂದು ಘೋಷಿಸುವಂತೆ ಕರ್ನಾಟಕ ಅರಣ್ಯ ಇಲಾಖೆಯು ಕಂದಾಯ ಇಲಾಖೆಯನ್ನು ಒತ್ತಾಯಿಸಿದೆ.

ಮುಲ್ಲಯನಗಿರಿಯಲ್ಲಿ ನೀಲಕುರಿಂಜಿ ಹೂಗಳು ಅರಳುವ ಪ್ರದೇಶ 2020 ರಲ್ಲಿ 16,000 ಎಕರೆಗಳಷ್ಟಿತ್ತು. ಈ ನಡುವೆ ರಾಜ್ಯ ವನ್ಯಜೀವಿ ಮಂಡಳಿಯ ಸಭೆಯಲ್ಲಿ ಸಂರಕ್ಷಣಾ ಮೀಸಲು ಪ್ರದೇಶ ಘೋಷಿಸುವ ಪ್ರಸ್ತಾವನೆ ಮುಂದಿಟ್ಟಾಗ ಮರು ಪರಿಶೀಲನೆ ಕುರಿತು ನಿರ್ಧಾರ ಕೈಗೊಳ್ಳಲಾಗಿತ್ತು. ಪರಿಶೀಲನೆ ವೇಳೆ ಈ ಪ್ರದೇಶವನ್ನು 9,000 ಎಕರೆಗಳಿಗೆ ಇಳಿಸಲಾಗಿತ್ತು ಎಂದು ಇಲಾಖೆಯ ಮೂಲಗಳು ತಿಳಿಸಿವೆ.

ಮುಳ್ಳಯ್ಯನಗಿರಿಯಲ್ಲಿ ಅರಳುವ ಹೂವುಗಳು ನೀಲಗಿರಿ ಪರ್ವತಗಳಾದ ಸ್ಟ್ರೋಬಿಲಾಂಥೆಸ್ ಕುಂಥಿಯಾನಾದಲ್ಲಿ ಕಂಡುಬರುವ ಹೂವುಗಳಿಗಿಂತ ಭಿನ್ನವಾಗಿದೆ. ಇಲ್ಲಿಯವರೆಗೆ ಸುಮಾರು 32 ನೀಲಕುರಿಂಜಿ ಪ್ರಭೇದಗಳನ್ನು ಕಂಡುಹಿಡಿಯಲಾಗಿದೆ ಎಂದು ಭಾರತೀಯ ಸಸ್ಯ ಸಮೀಕ್ಷೆಯ (ಬಿಎಸ್‌ಐ) ತಜ್ಞರು ಹೇಳಿದ್ದಾರೆ.

12 ವರ್ಷಗಳಿಗೊಮ್ಮೆ ಈ ಹೂವುಗಳು ಅರಳಲಿದ್ದು, ಇವುಗಳನ್ನು ಪತ್ತೆ ಮಾಡುವುದು ಕಷ್ಟ. ಎತ್ತರದ ಪ್ರದೇಶಗಳಲ್ಲಿ ಕಂಡುಬರುತ್ತಿದ್ದ ಈ ಹೂವುಗಳು ಇದೀಗ ತಪ್ಪಲಿನಲ್ಲಿ ಮತ್ತು ಇತರ ಅರಣ್ಯ ಪ್ರದೇಶಗಳಲ್ಲಿ ಕಂಡುಬರುತ್ತಿರುವುದು ಆಸಕ್ತಿದಾಯಕವಾಗಿದೆ ಎಂದು ದಕ್ಷಿಣ ಪ್ರಾದೇಶಿಕ ಕೇಂದ್ರದ ಬಿಎಸ್‌ಐ ಕಚೇರಿಯ ಮುಖ್ಯಸ್ಥ ಮತ್ತು ಹಿರಿಯ ವಿಜ್ಞಾನಿ ಡಾ. ಸಹೀದ್ ಎಸ್ ಹಮೀದ್ ಹೇಳಿದ್ದಾರೆ. ರಾಜ್ಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯು ಈ ಪ್ರದೇಶವನ್ನು ಸಂರಕ್ಷಣಾ ಮೀಸಲು ಪ್ರದೇಶವೆಂದು ಘೋಷಿಸುವ ಕಲ್ಪನೆಯನ್ನು ಅನುಮೋದಿಸಿದ ನಂತರ, ಎರಡು ತಿಂಗಳ ಹಿಂದೆ ಕಂದಾಯ ಇಲಾಖೆಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ ಎಂದು ವನ್ಯಜೀವಿಗಳ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಪಿಸಿ ರೈ ಹೇಳಿದ್ದಾರೆ.

ಜಿಲ್ಲಾಡಳಿತದಿಂದ ಭೂ ವರದಿಯನ್ನು ಕೋರಲಾಗಿದ್ದು, ಮರು ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಟಾರಿಯಾ ಅವರು ತಿಳಿಸಿದ್ದಾರೆ.

ಗುರುತಿಸಲಾದ ಹಲವು ಪ್ರದೇಶಗಳು ಇನಾಮ್ ಭೂಮಿಗಳಾಗಿವೆ, ಮಾರಾಟ, ಅಭಿವೃದ್ಧಿ ಅಥವಾ ಖಾಸಗಿ ಭೂಮಿಗಳಾಗಿವೆ. ಅಭಿವೃದ್ಧಿ ಹೊಂದಿದ ಅರಣ್ಯ ಭೂಮಿಯನ್ನು ಗುರುತಿಸಲು, ಸಂರಕ್ಷಣಾ ಮೀಸಲು ಪ್ರದೇಶವಾಗಿ ಘೋಷಿಸುವ ಕುರಿತು ಸಮೀಕ್ಷೆ ನಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ. ನೀಲಕುರಿಂಜಿ ಪ್ರಭೇದಗಳನ್ನು ರಕ್ಷಿಸುವ ಮತ್ತು ಅಂತರರಾಷ್ಟ್ರೀಯ ಪ್ರಕೃತಿ ಸಂರಕ್ಷಣಾ ಒಕ್ಕೂಟ (IUCN) ನಿಂದ ಅವುಗಳನ್ನು ರಕ್ಷಿಸಲಾಗಿದೆ ಎಂದು ಘೋಷಿಸುವ ಕುರಿತು ಚೆನ್ನೈನ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಸ್ವಯಂಪ್ರೇರಿತ ವಿಚಾರಣೆ ಕೈಗೆತ್ತಿ-ಕೊಂಡಿದ್ದು, ಇದರ ಮೇಲೆ ಅರಣ್ಯ ಇಲಾಖೆ ಭರವಸೆ ಇಟ್ಟಿದೆ. ಎಲ್ಲಾ ನೀಲಕುರಿಂಜಿ ಪ್ರಭೇದಗಳನ್ನು IUCN ಎಂದು ಘೋಷಿಸಿದರೆ, ನೀಲಗಿರಿ ಮಾತ್ರವಲ್ಲ, ಪಶ್ಚಿಮ ಘಟ್ಟಗಳ ಎಲ್ಲಾ ಭಾಗಗಳನ್ನು ಕೂಡ ರಕ್ಷಿಸಲಾಗುತ್ತದೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ.

# ಜಾತಿ ಗಣತಿ ಸಮೀಕ್ಷೆಗೆ ಶಿಕ್ಷಕರ ಬಳಕೆ

## ಸಭಾಪತಿ ಬಸವರಾಜ ಹೊರಟ್ಟಿ ಬೇಸರ



**ಹುಬ್ಬಳ್ಳಿ:** ಜಾತಿ ಗಣತಿ ನಡೆಸಲು ಶಿಕ್ಷಕರನ್ನು ನಿಯೋಜಿಸುವುದಕ್ಕೆ ಸಭಾಪತಿ ಬಸವರಾಜ ಹೊರಟ್ಟಿ ಅವರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಈ ಕುರಿತು ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿರುವ ಅವರು, ಶಾಲಾ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದಕ್ಕೆ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿದ್ದು, ಇದಕ್ಕೆ ಶಿಕ್ಷಕರ ಮೇಲೆ ಶೈಕ್ಷಣಿಕೇತರ ಕರ್ತವ್ಯಗಳನ್ನು ಹೇರುತ್ತಿರುವುದು ಪ್ರಮುಖ ಕಾರಣಗಳಾಗಿದೆ ಎಂದು ಆರೋಪಿಸಿದ್ದಾರೆ.

ಇದೇ ವೇಳೆ ಮುಂಬರುವ ಜಾತಿ ಗಣತಿಗೆ ಶಾಲಾ ಶಿಕ್ಷಕರನ್ನು, ವಿಶೇಷವಾಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರನ್ನು ನಿಯೋಜಿಸುವ ಸರ್ಕಾರದ ಕ್ರಮವನ್ನು ಅವರು ವಿರೋಧಿಸಿದ್ದಾರೆ, ಅಂತಹ ಪದ್ಧತಿಗಳು ವಿದ್ಯಾರ್ಥಿಗಳ ಶೈಕ್ಷಣಿಕ ಅಡಿಪಾಯಕ್ಕೆ ಹಾನಿ ಮಾಡುತ್ತದೆ ಎಂದು ಎಚ್ಚರಿಸಿದ್ದಾರೆ.

ಶಿಕ್ಷಣ ಇಲಾಖೆಯ ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಶಾಸ್ತ್ರ ಉಪಕ್ರಮದ ಅಡಿಯಲ್ಲಿ ಯಾದಗಿರಿ ಜಿಲ್ಲೆಯಲ್ಲಿ ನಡೆಸಿದ ಅಧ್ಯಯನವನ್ನು ಉಲ್ಲೇಖಿಸಿರುವ ಅವರು, ಅನೇಕ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಇನ್ನೂ ಓದುವುದು, ಬರೆಯುವುದು ಮತ್ತು ಅಂಕಗಣಿತದಂತಹ ಮೂಲಭೂತ ಕೌಶಲ್ಯಗಳ ಕೊರತೆಯಿದೆ ಎಂಬುದು ಆಘಾತ ತಂದಿದೆ.

ಪ್ರಾಥಮಿಕ ಶಾಲೆಯಲ್ಲಿ ಮೂಲಭೂತ ಸಾಕ್ಷರತೆಯನ್ನು ನಿರ್ಮಿಸುವಲ್ಲಿ ವಿಫಲವಾಗಿರುವುದು ಪ್ರಸ್ತುತ ವ್ಯವಸ್ಥೆಯ ಗಂಭೀರ ದೋಷವಾಗಿದೆ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಕನ್ನಡ ಅಥವಾ ಇಂಗ್ಲಿಷ್ ವರ್ಣಮಾಲೆ ತಿಳಿದಿಲ್ಲದಿದ್ದರೆ ಮತ್ತು ಮೂಲಭೂತ ಸಂಕಲನ ಅಥವಾ ವ್ಯವಕಲನವನ್ನು ಸಹ ಮಾಡಲು ಸಾಧ್ಯವಾಗದಿದ್ದರೆ ಇದಕ್ಕೆ ಹೊಣೆಗಾರರು ಯಾರು? ಎಂದು ಪ್ರಶ್ನಿಸಿದ್ದಾರೆ.

ಸಮೀಕ್ಷೆಗಳು, ಜನಗಣತಿ ಕೆಲಸ ಮತ್ತು ಚುನಾವಣಾ ಕರ್ತವ್ಯಗಳಂತಹ ಬೋಧಕೇತರ ಕೆಲಸಗಳಿಗೆ ಪದೇ ಪದೇ ಶಿಕ್ಷಕರನ್ನು ಎಳೆತರುತ್ತಿರುವುದು ಬೋಧನೆಯತ್ತ ಗಮನಹರಿಸಲು ಅವರಿಗೆ ಸಾಧ್ಯವಿಲ್ಲದಂತೆ ಮಾಡುತ್ತಿದೆ.

ಜಾತಿ ಸಮೀಕ್ಷೆಗಳು, ಮೌಲ್ಯಮಾಪನಗಳು, ಮಕ್ಕಳ ಎಣಿಕೆ, ಮತಗಟ್ಟೆ ಅಧಿಕಾರಿ ಕರ್ತವ್ಯಗಳು ಮತ್ತು ಇನ್ನೂ ಹೆಚ್ಚಿನದನ್ನು ನಿರ್ವಹಿಸಲು ಶಿಕ್ಷಕರನ್ನು ಒತ್ತಾಯಿಸಲಾಗುತ್ತದೆ. ಇದೆಲ್ಲದರ ಜೊತೆಗೆ ಅವರ ಮಕ್ಕಳಿಗೆ ವಿದ್ಯಾಭ್ಯಾಸ ಹೇಳಿಕೊಡುವುದು ಯಾವಾಗ? ಎಂದು ಪ್ರಶ್ನಿಸಿದ್ದಾರೆ.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗದಿದ್ದರೆ. ಅದು 6 ರಿಂದ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣವನ್ನು ಖಾತರಿಪಡಿಸುವ ಸಂವಿಧಾನದ 21 ಎ ವಿಧಿಯ ಉಲ್ಲಂಘನೆಯಾಗುತ್ತದೆ. ಹೀಗಾಗಿ ಶಿಕ್ಷಕರನ್ನು ಶೈಕ್ಷಣಿಕೇತರ ಕರ್ತವ್ಯಗಳಿಂದ ತಕ್ಷಣವೇ ಮುಕ್ತಗೊಳಿಸಬೇಕೆಂದು ಒತ್ತಾಯಿಸಿದ್ದಾರೆ.

# ಬಿಹಾರದಲ್ಲಿ ಅಂದಾಜು 75 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರು ಪಟ್ಟಿಯಿಂದ ಹೊರಕ್ಕೆ

**ನವದೆಹಲಿ :** ದೇಶಾದ್ಯಂತ ರಾಜಕೀಯ ಪಕ್ಷಗಳಲ್ಲಿ ಭಾರೀ ವಿವಾದ ಸೃಷ್ಟಿಸಿರುವ ವಿಶೇಷ ವಿಶೇಷ ತೀವ್ರ ಪರಿಷ್ಕರಣೆ(ಎಸ್‌ಐಆರ್) ಯಿಂದ ಬಿಹಾರದಲ್ಲಿ ಅಂದಾಜು 75 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರು ಪಟ್ಟಿಯಿಂದ ಹೊರಗುಳಿಯಲಿದ್ದಾರೆ.

ಚುನಾವಣಾ ಆಯೋಗ ಕಳೆದ ಜು.20ರಿಂದ ನಡೆಸಿರುವ ವಿಶೇಷ ತೀವ್ರ ಪರಿಷ್ಕರಣೆ ಪರಿಣಾಮ ಗುರುತು ಪತ್ರಗಳನ್ನು ಹೊಂದದೆ ಮತದಾರ ಪಟ್ಟಿಗೆ ಸೇರ್ಪಡೆಯಾಗಿದ್ದ 75 ಲಕ್ಷಕ್ಕೂ ಹೆಚ್ಚು ನಕಲಿ ಮತದಾರರನ್ನು ತೆಗೆದು ಹಾಕಿದ್ದಾರೆ.

ಕಾಂಗ್ರೆಸ್, ಆರ್‌ಜೆಡಿ, ಎಸ್‌ಪಿ, ಟಿಎಂಸಿ, ಎಎಪಿ, ಸಿಪಿಎಂ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ವಿರೋಧದ ನಡುವೆಯೂ ಸುಪ್ರೀಂಕೋರ್ಟ್ ಎಸ್‌ಐಆರ್ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಲು ನಿರಾಕರಿಸಿದ ಹಿನ್ನಲೆಯಲ್ಲಿ ಆಯೋಗ ನಕಲಿ ಮತದಾರರನ್ನು ಪತ್ತೆ ಮಾಡಿದೆ.

ಈವರೆಗೂ ಅಧಿಕೃತವಾಗಿ ಚುನಾವಣಾ ಆಯೋಗ ಬಿಹಾರದ ಅಂತಿಮ ಮತದಾರರ ಕರಡು ಪಟ್ಟಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಿಲ್ಲವಾದರೂ ಮೂಲಗಳ ಪ್ರಕಾರ ಆ.1ರಂದು ಬಿಡುಗಡೆ ಮಾಡಲಿದೆ.

ಗಣತಿ ನಮೂನೆಗಳನ್ನು ಸಲ್ಲಿಸಲು ಕೊನೆಯ ದಿನವಾದ ಶುಕ್ರವಾರ ಚುನಾವಣಾ ಆಯೋಗ ಬಿಡುಗಡೆ ಮಾಡಿದ ದತ್ತಾಂಶದ ಪ್ರಕಾರ, 65.2 ಲಕ್ಷ ಮತದಾರರಲ್ಲಿ 22 ಲಕ್ಷ ಜನರು ಮೃತಪಟ್ಟಿದ್ದಾರೆ, 35 ಲಕ್ಷ ಜನರು ಶಾಶ್ವತವಾಗಿ ಬಿಹಾರದ ಹೊರಗೆ ಸ್ಥಳಾಂತರಗೊಂಡಿದ್ದಾರೆ, 7 ಲಕ್ಷ ಜನರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ಮತದಾರರಾಗಿ ದಾಖಲಾಗಿದ್ದಾರೆ ಮತ್ತು 1.2 ಲಕ್ಷ ಜನರು ಇನ್ನೂ ತಮ ನಮೂನೆಗಳನ್ನು ಸಲ್ಲಿಸಿಲ್ಲ.

ಜೂನ್ 24 ರಂದು ರಾಜ್ಯದಲ್ಲಿ ಪ್ರಾರಂಭವಾದ ಎಸ್‌ಐಆರ್ ಪ್ರಕ್ರಿಯೆಯಡಿ ಬಿಹಾರದ ಶೇ.99.8 ಮತದಾರರನ್ನು ಸೇರಿಸಲಾಗಿದೆ ಎಂದು ಚುನಾವಣಾ ಆಯೋಗ (ಇಸಿ) ತಿಳಿಸಿದೆ. 7.9 ಕೋಟಿ ಮತದಾರರಲ್ಲಿ, 7.23 ಕೋಟಿ ಮತದಾರರ ಎಣಿ-ಕೆ ನಮೂನೆಗಳನ್ನು ಸ್ವೀಕರಿಸಲಾಗಿದ್ದು, ಡಿಜಿಟಲೀಕರಣಗೊಳಿಸಲಾಗಿದೆ ಮತ್ತು ಅವರ ಹೆಸರುಗಳನ್ನು ಆಗಸ್ಟ್ 1ರಂದು ಪ್ರಕಟಿಸಲು ನಿಗದಿಪಡಿಸಲಾದ ಕರಡು ಮತದಾರರ ಪಟ್ಟಿಯಲ್ಲಿ ಸೇರಿಸಲಾಗುವುದು. ಉಳಿದ 1.2 ಲಕ್ಷ ಮತದಾರರ ಮರು ಎಣಿಕೆ ನಮೂನೆಗಳು ಇನ್ನೂ ಸ್ವೀಕರಿಸಬೇಕಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.



ಉಳಿದ ಮತದಾರರ ಬೂತ್ ಮಟ್ಟದ ಅಧಿಕಾರಿಗಳ ವರದಿಗಳೊಂದಿಗೆ ಗಣತಿ ನಮೂನೆಗಳ ಡಿಜಿಟಲೀಕರಣವನ್ನು ಆಗಸ್ಟ್ 1 ರೊಳಗೆ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದೆ.

ಆಗಸ್ಟ್ 1ರಿಂದ ಸೆಪ್ಟೆಂಬರ್ 1ರ ನಡುವಿನ ಪ್ರಕ್ರಿಯೆಯ ಮುಂದಿನ ಹಂತದಲ್ಲಿ ನಿಗದಿತ ನಮೂನೆಗಳನ್ನು ಭರ್ತಿ ಮಾಡಿದ ನಂತರವೂ ಹೆಸರುಗಳನ್ನು ಬಿಟ್ಟುಹೋಗಿರುವ ಅರ್ಹ ಮತದಾರರನ್ನು ಸೇರಿಸಬಹುದು ಮತ್ತು ಅನರ್ಹ ಮತದಾರರನ್ನು ತೆಗೆದುಹಾಕಲು ಪಕ್ಷಗಳು ಚುನಾವಣಾ ನೋಂದಣಿ ಅಧಿಕಾರಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಆಯೋಗ ತಿಳಿಸಿದೆ.

ಎಣಿಕೆ ನಮೂನೆಗಳನ್ನು ಭರ್ತಿ ಮಾಡದ ಅಥವಾ ಮರಣ ಹೊಂದಿದ ಮತ್ತು ಶಾಶ್ವತವಾಗಿ ಸ್ಥಳಾಂತರಗೊಂಡ ಮತದಾರರ ಪಟ್ಟಿಯನ್ನು ಈಗಾಗಲೇ ಎಲ್ಲಾ 12 ಮಾನ್ಯತೆ ಪಡೆದ ರಾಜಕೀಯ ಪಕ್ಷಗಳೊಂದಿಗೆ ಹಂಚಿಕೊಳ್ಳಲಾಗಿದೆ ಎಂದು ಆಯೋಗ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಆಗಸ್ಟ್ 1 ರಂದು ಪ್ರಕಟಿಸಲಾಗುವ ಕರಡು ಮತದಾರರ ಪಟ್ಟಿಯಲ್ಲಿ ದೋಷಗಳಿದ್ದರೆ ಸರಿಪಡಿಸಲು ರಾಜಕೀಯ ಪಕ್ಷಗಳು ಒಟ್ಟಾಗಿ 1,60813 ಶಾಸಕರ ಸಾಲನ್ನು ನಾಮನಿರ್ದೇಶನ ಮಾಡಿವೆ.

17,549 ಶಾಸಕರ ಪಟ್ಟಿ (ಬೂತ್ ಲೆವೆಲ್ ಏಜೆ-ಂಟ್) ಮತ್ತು 47,506 ಶಾಸಕರ ಸಾಲನ್ನು ಹೊಂದಿರುವ ಆರ್‌ಜೆಡಿ ಪಕ್ಷಗಳು ಈ ಪಟ್ಟಿಯಲ್ಲಿ ಸೇರಿವೆ. ಪಟ್ಟಗಳನ್ನು ನೀಡಲಾದ ಇತರ ರಾಜಕೀಯ ಪಕ್ಷಗಳಲ್ಲಿ ಬಿಜೆಪಿ, ಬಿಎಸ್‌ಪಿ, ಸಿಪಿಎಂ, ಜೆಡಿ(ಯು), ಆರ್‌ಎಲ್‌ಎಸ್‌ಪಿ, ಸಿಪಿಐ-ಎಂಎಲ್ (ಲಿಬರೇಷನ್), ಆರ್‌ಎಲ್‌ಜೆಪಿ, ಎಲ್‌ಜೆಪಿ(ಆರ್‌ವಿ), ಎನ್‌ಪಿಪಿ ಮತ್ತು ಎಎಪಿ ಸೇರಿವೆ.

ಕೆಲವು ಪಕ್ಷಗಳ ಶಾಸಕರ ವಿವರಗಳನ್ನು ಹಂಚಿಕೊಂಡ ಚುನಾವಣಾ ಆಯೋಗ, ಬಿಜೆಪಿ ಅತಿ ಹೆಚ್ಚು 53,338, ಜೆಡಿ(ಯು) 36,550, ಆರ್‌ಎಲ್‌ಎಸ್‌ಪಿ 270, ಆರ್‌ಎಲ್‌ಜೆಪಿ 1,913 ಮತ್ತು ಎಲ್‌ಜೆಪಿ (ಆರ್‌ವಿ) 1,210 ಅಭ್ಯರ್ಥಿಗಳನ್ನು ನಾಮನಿರ್ದೇಶನ ಮಾಡಿದೆ ಎಂದು ತಿಳಿಸಿದೆ.

# ಚಿತ್ರದುರ್ಗದಲ್ಲಿ ಅತ್ಯುನ್ನತ ತಾಂತ್ರಿಕ ಸೌಲಭ್ಯವುಳ್ಳ ಆಸ್ಪತ್ರೆಗಳು ಸಿದ್ಧ : ಡಾ.ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ :** ಚಿತ್ರದುರ್ಗ ಜನರಿಗೆ ಅತ್ಯಂತ ತಾಂತ್ರಿಕ ಸೌಲಭ್ಯವುಳ್ಳ ಆಸ್ಪತ್ರೆಗಳು ಸೃಷ್ಟಿಯಾಗುತ್ತಿದ್ದು, ಜನಸಾಮಾನ್ಯರ ಕೈಗೆಟುಕುವಂತಹ ದರದಲ್ಲಿ ಚಿಕಿತ್ಸೆ ದೊರಕುತ್ತಿದ್ದು, ಇಂತಹ ಸಂಸ್ಥೆಗಳನ್ನು ಸರ್ಕಾರ, ಸಾರ್ವಜನಿಕರು ಗುರುತಿಸಿ ಪ್ರೋತ್ಸಾಹಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗ ನಗರದ ಚಳ್ಳಕೆರೆ ರಸ್ತೆಯಲ್ಲಿ ರೋಟರಿ ಸಂಸ್ಥೆಯವರು ಸ್ಥಾಪಿಸಿರುವ ಡಯಾಲಿಸಿಸ್ ಸೆಂಟರ್ನಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳಿಗೆ ತಮ್ಮ ಜೀವನ ರೂಪಿಸಿಕೊಳ್ಳುವ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.



ಮೂತ್ರಪಿಂಡದ ಸಮಸ್ಯೆಯಿಂದ ಬಳಲುತ್ತಿರುವಂತಹ ರೋಗಿಗಳಿಗೆ, ಕಡಿಮೆ ದರದಲ್ಲಿ ಡಯಾಲಿಸಿಸ್ ಚಿಕಿತ್ಸೆ ನೀಡಿ, ಅವರ ಜೀವನವನ್ನು ಸುಧಾರಿಸುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿರುವ ರೋಟರಿ ಕ್ಲಬ್, ಜನರ ಆರೋಗ್ಯದ ಬಗ್ಗೆ ಯೋಚಿಸಿ ಸಹಾಯ ಕಲ್ಪಿಸುತ್ತಿರುವುದು ಉತ್ತಮವಾದ ಬೆಳವಣಿಗೆಯಾಗಿದೆ ಎಂದರು.

ಮೂತ್ರಪಿಂಡದ ಕಾಯಿಲೆಗಳಲ್ಲಿ ಅತಿಹೆಚ್ಚಿನ ವೆಚ್ಚಮಯವಾದಂತಹ ಚಿಕಿತ್ಸೆ ಡಯಲಿಸಿಸ್, ಅದಕ್ಕಾಗಿ ತಿಂಗಳಿಗೆ 8 ರಿಂದ 10 ಸಾವಿರದ ವರೆಗೂ ಖರ್ಚು ಮಾಡಿ, ರಕ್ತ ಶುದ್ಧೀಕರಣ ಮಾಡಿಸಿಕೊಳ್ಳುವಂತಹ ಆಸ್ಪತ್ರೆಗಳು ಎಲ್ಲಾ ಕಡೆ ಲಭ್ಯವಿದೆ, ಆದರೆ ಕಡಿಮೆ ಖರ್ಚಿನಲ್ಲಿ ಡಯಾಲಿಸಿಸ್ ಮಾಡಿಸಿಕೊಳ್ಳುವ ವ್ಯವಸ್ಥೆ ಚಿತ್ರದುರ್ಗದಲ್ಲಿ ಇರಲಿಲ್ಲ, ಚಿತ್ರದುರ್ಗದಲ್ಲಿ ಲಭ್ಯವಿದ್ದ ದೊಡ್ಡ ದೊಡ್ಡ ಆಸ್ಪತ್ರೆಗಳಲ್ಲಿ ರೋಗಿಗಳು ಸರದಿ ಪ್ರಕಾರ ಡೈಲಿಸಿಸ್ ಮಾಡಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿತ್ತು, ಆದರೆ ಈಗ ರೋಟರಿ ಕ್ಲಬ್ ನವರು ಸಾಮಾನ್ಯ ಜನರಿಗೂ ಸಹ, ಕಡಿಮೆ ದರದಲ್ಲಿ ಡಯಾಲಿಸಿಸ್ ವ್ಯವಸ್ಥೆ ಕಲ್ಪಿಸಿರುವುದು ಜನಸಾಮಾನ್ಯರ ಬಗ್ಗೆ ಅವರಿಗಿರುವ ಕಾಳಜಿಯನ್ನ ಎತ್ತಿ ತೋರಿಸುತ್ತದೆ ಎಂದರು.

ಕೆಲವೊಂದಿಷ್ಟು ದಾನಿಗಳು ರೋಟರಿ ಕ್ಲಬ್ ಜೊತೆ ಕೈಜೋಡಿಸಿ, ಉತ್ತಮವಾದ ಕಟ್ಟಡ ನಿರ್ಮಾಣ ಮಾಡಿ, ಅಲ್ಲಿ ರಕ್ತ ಪರೀಕ್ಷೆ, ಡಯಾಲಿಸಿಸ್ ವ್ಯವಸ್ಥೆ ಹಾಗೂ ಪದವಿ ಪಡೆದ ವಿದ್ಯಾರ್ಥಿಗಳಿಗೆ ತಮ್ಮ ಜೀವನ ರೂಪಿಸಿಕೊಳ್ಳುವಂತಹ ತರಬೇತಿ ಕಾರ್ಯಾಗಾರವನ್ನು, ವಿದ್ಯಾರ್ಥಿಗಳಿಗೆ ಓದಲು ಗ್ರಂಥಾಲಯ ಹಾಗೂ ಕಂಪ್ಯೂಟರ್ ವ್ಯವಸ್ಥೆಯನ್ನು ಸಹ ನೀಡಿರುವುದು ಶ್ಲಾಘನೀಯ ಎಂದರು.

ಜನರಿಗೆ ಚಿಕಿತ್ಸೆ ಜೊತೆಗೆ ರೋಗರುಜಿನಗಳು ಬಗ್ಗೆ ಜಾಗೃತಿ ಮೂಡಿಸಲು ಪ್ರಯತ್ನಿಸುತ್ತಿರುವ ಲೊಟರಿ ಕ್ಲಬ್, ಇತರ ಸಂಸ್ಥೆಗಳಿಗೆ ಮಾದರಿಯಾಗಿದೆ. ಪ್ರತಿ ನಿತ್ಯ ಒಂದಲ್ಲ ಒಂದು ಜನಜಾಗೃತಿ ರಚನಾತ್ಮಕ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿರುವ ಈ ಸಂಸ್ಥೆ ರಕ್ತದಾನ ಶಿಬಿರಗಳು, ಕಣ್ಣಿನ ಚಿಕಿತ್ಸಾ ಶಿಬಿರಗಳು, ಕ್ಯಾನ್ಸರ್ ನ ಜಾಗೃತಿ ಶಿಬಿರಗಳು ಹಾಗೂ ಇನ್ನಿತರ ರೋಗರುಜಿನಗಳ ನಿವಾರಣೆ ಬಗ್ಗೆ ಶ್ರಮಿಸುತ್ತಿರುವ ಈ ಸಂಸ್ಥೆಗೆ ಜನರ ಸಹಕಾರ ಮತ್ತು ಪ್ರೋತ್ಸಾಹ ದೊರೆಯಲಿ ಎಂದು ಆಶಿಸಿದರು.

ಬಹಳಷ್ಟು ವಿದ್ಯಾರ್ಥಿಗಳು ಸಹ ರೋಟರಿ ಸಂಸ್ಥೆಯಲ್ಲಿ ರೋಟರ್ ಯ್ಯಾಕ್ಟ ಎಂಬ ವಿಭಾಗದಲ್ಲಿ ಸೇರ್ಪಡೆಯಾಗಿ, ಸೇವಾ ತರಬೇತಿಯನ್ನು ಪಡೆದು, ಮುಂದೆ ದೊಡ್ಡ ದೊಡ್ಡ ಸಂಸ್ಥೆಗಳಲ್ಲಿ ಸೇವಾ ಕಾರ್ಯ ನಿರ್ವಹಿಸಲು ಅನುಕೂಲಕರವಾಗುತ್ತದೆ. ಹಾಗಾಗಿ ಯುವ ಜನಾಂಗ ರೋಟರಿ ಕಾರ್ಯಕ್ರಮಗಳಲ್ಲಿ ಹೆಚ್ಚಾಗಿ ಭಾಗವಹಿಸಿ ಅದರ ಅನುಭವವನ್ನು ಪಡೆಯಬೇಕು ಎಂದು ವಿನಂತಿಸಿಕೊಂಡರು.

ಪ್ರತಿ ಬುಧವಾರ ವಾರಕ್ಕೊಮ್ಮೆ ವಿಶೇಷ ಅತಿಥಿ ಉಪನ್ಯಾಸಗಳನ್ನು, ಆರೋಗ್ಯ ಮಾಹಿತಿಯನ್ನ, ವಿವಿಧ ರಂಗಗಳಲ್ಲಿ ಸಾಧನೆಗೈದವರನ್ನು ಆಹ್ವಾನಿಸಿ, ಜನರಿಗೆ, ಸಾರ್ವಜನಿಕರಿಗೆ, ಪರಿಚಯಿಸಿ, ಮಾಹಿತಿ ನೀಡುತ್ತಿರುವಂತಹ ಇಂತಹ ಸಂಸ್ಥೆಯ ಜೊತೆ ಸಹಕಾರ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಬಡತನದಲ್ಲಿರುವಂತಹ ಮಹಿಳೆಯರು, ಮಕ್ಕಳು, ವಿದ್ಯಾರ್ಥಿಗಳಿಗೂ ಸಹ ಆರ್ಥಿಕ ಸಹಾಯವನ್ನು ನೀಡಿ, ಅವರ ವಿದ್ಯಾಭ್ಯಾಸಕ್ಕೆ ಸಹಾಯಕಲ್ಪಿಸುತ್ತಿರುವ ಈ ಸಂಸ್ಥೆಯ ದಾನಿಗಳಿಗೆ, ನಾವು ಹೆಚ್ಚಿನ ಅಭಿನಂದನೆಗಳನ್ನು ಸಲ್ಲಿಸಬೇಕಾಗಿದೆ. ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ, ಅಂಗವಿಕಲರಿಗೆ ತ್ರಿಚಕ್ರ ವಾಹನಗಳು, ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನ ವಿತರಿಸಿ, ಸಾಮಾಜಿಕ ಸುಭದ್ರತೆಗೆ ಪ್ರಯತ್ನಿಸುತ್ತಿರುವ ಇಂಥ ಸಂಸ್ಥೆಗಳು ಇನ್ನು ಹೆಚ್ಚಿನ ಸೇವೆ ಸಲ್ಲಿಸುವಂತೆ ಆಗಲಿ ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

## ದಾವಣಗೆರೆ: ಕೆರೆ ಅಂಗಳದ ಮೆಕ್ಕೆಜೋಳ, ಟೊಮೆಟೋ ಬೆಳೆ ತೆರವು

# ಅಧಿಕಾರಿಗಳ ಹಠಾತ್ ಕ್ರಮಕ್ಕೆ ಬಡ ರೈತರು ಕಂಗಾಲು

**ದಾವಣಗೆರೆ:** ಹೊನ್ನೂರು ಕೆರೆಯಲ್ಲಿ ಕಳೆದ ಐದಾರು ದಶಕಗಳಿಂದ ಮೆಕ್ಕೆಜೋಳ, ಟೊಮೆಟೋ ಬೆಳೆಗಳ ಬೆಳೆದು ಸಣ್ಣದಾಗಿ ಬದುಕು ಕಟ್ಟಿಕೊಂಡಿದ್ದ ಬಡ ರೈತರಿಗೆ ಸಣ್ಣ ನೀರಾವರಿ ಇಲಾಖೆ ಇದ್ದಕ್ಕಿದ್ದಂತೆ ಶಾಕ್ ನೀಡಿದೆ.


ರೈತರು ಬೆಳೆದಿದ್ದ ಬೆಳೆಗಳನ್ನು ಸಣ್ಣ ನೀರಾವರಿ ಇಲಾಖೆ ತೆರವುಗೊಳಿಸಿದ್ದು, ಇದರಿಂದ ನೊಂದ ಬಡರೈತರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಪೂರ್ವ ಎಚ್ಚರಿಕೆಗಳು ಮತ್ತು ಜಾಗೃತಿ ಅಭಿಯಾನಗಳ ಹೊರತಾಗಿಯೂ, ರೈತರು ಅತಿಕ್ರಮಣಗೊಂಡ ಪ್ರದೇಶದಲ್ಲಿ ಬೆಳೆಗಳನ್ನು ಬೆಳೆಯುವುದನ್ನು ಮುಂದುವರೆಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದಾಗ್ಯೂ, ರೈತರು ತಮಗೆ ಸಮರ್ಪಕವಾಗಿ ಮಾಹಿತಿ ನೀಡಿಲ್ಲ ಎಂದು ಹೇಳಿದ್ದಾರೆ.

ಅಧಿಕಾರಿಗಳ ದಿಢೀರ್ ಕ್ರಮದಿಂದಾಗಿ 50,000 ರೂ.ಗಳವರೆಗೆ ನಷ್ಟವಾಗಿದ್ದು, ಕೆಲವರಿಗೆ 50,000 ರೂ.ಗಳವರೆಗೆ ನಷ್ಟವಾಗಿದೆ ಎಂದು ಆರೋಪಿಸಿದ್ದಾರೆ.

ತಾಲೂಕಿನ ನರಸೀಪುರ ಗ್ರಾಮ ಸಮೀಪದ ಹೊನ್ನೂರು ಕೆರೆಯಲ್ಲಿ ಹನಿ ನೀರೂ ಇಲ್ಲದೆ ಕೆರೆ ಖಾಲಿಯಾಗಿತ್ತು. ಈ ಕೆರೆ ಪ್ರದೇಶದಲ್ಲಿ ಗ್ರಾಮದ ಬಡವರು ಮೆಕ್ಕೆಜೋಳ, ಟೊಮೆಟೋ ಬೆಳೆಗಳನ್ನು ಬೆಳೆದು ಜೀವನಕ್ಕೆ ದಾರಿ ಮಾಡಿಕೊಂಡಿದ್ದರು.ಸಾಲ ಮಾಡಿ ಕೆರೆ ಅಂಗಳದ ಅರ್ಧದಷ್ಟು ಜಾಗದಲ್ಲಿ ಮೆಕ್ಕೆಜೋಳ, ಟೊಮೆಟೋ ಬೆಳೆದಿದ್ದರು. ಇದರ ವಿರುದ್ಧ ಅನಾಮಧೇಯ ಕೈಗಳು ಸಣ್ಣ ನೀರಾವರಿ ಇಲಾಖೆಗೆ ಕರೆ ಮಾಡಿ, ಇಲಾಖೆಗೆ ಪತ್ರ ಬರೆದಿದ್ದಾರೆ. ಈ ಕಾರಣಕ್ಕೆ ಇಲಾಖೆ ಅಧಿಕಾರಿಗಳು ಏಕಾಏಕಿ ಸ್ಥಳಕ್ಕೆ ಧಾವಿಸಿ ಬೆಳೆಗಳನ್ನು ಟ್ರ್ಯಾಕ್ಟರ್ ಬಳಸಿ ತೆರವುಗೊಳಿಸಿದ್ದಾರೆಂದು ತಿಳಿದುಬಂದಿದೆ.

ಐದಾರು ದಶಕಗಳಿಂದ ಕೆರೆ ಜಾಗದಲ್ಲಿ ಬೆಳೆ ಬೆಳೆಯುತ್ತಿದ್ದೇವೆ. 15 ದಿನಗಳ ಹಿಂದೆ ಬಂದ ಅಧಿಕಾರಿಗಳು ಕೆರೆ ಜಾಗ ಎಲ್ಲಿವರೆಗೆ ಬರುತ್ತದೆಯೋ ಅಲ್ಲಿಯವರೆಗೂ ಬೋರ್ಡ್ ಅಳವಡಿಸಿ ಹೋಗಿದ್ದರು. ಈ ವೇಳೆ ಒಂದು ಬೆಳೆ ಬೆಳೆದುಕೊಳ್ಳಿ. ಇನ್ನು ಮುಂದೆ ಕೆರೆಯಂಗಳದಲ್ಲಿ ಬೆಳೆ ಬೆಳೆಯಬಾರದು ಎಂದು ಹೇಳಿದ್ದರು. ಆದರೆ, ಇದೀಗ ಇದ್ದಕ್ಕಿದ್ದಂತೆ ಬಂದು ಏಕಾಏಕಿ ಟ್ರ್ಯಾಕ್ಟರ್ ಬಳಸಿ ಬೆಳೆಗಳನ್ನು ಕಿತ್ತೆಸೆದಿದ್ದಾರೆ. ಇದೀಗನಮ್ಮಂತರ ಬಡವರು ಎಲ್ಲಿಗೆ ಹೋಗಬೇಕು. ಬೆಳೆ ಕೈಗೆ ಬಂದ ವೇಳೆ ನಾಶಪಡಿಸಿರುವುದು ಕೈಗೆ ಬಂದ ಮಗನ ಸಾವು ಎದುರಿಗೆ ನೋಡಿದಷ್ಟು ಸಂಕಟವಾಗುತ್ತಿದೆ ಎಂದು ರೈತರು ಕಣ್ಣೀರಿಟ್ಟಿದ್ದಾರೆ.




ನಾವು ಬೀಜಗಳು ಮತ್ತು ರಸಗೊಬ್ಬರಗಳಿಗೆ ಸುಮಾರು 50,000 ರೂ. ಖರ್ಚು ಮಾಡಿದ್ದೇವೆ, ಆದರೆ, ಇದೀಗ ಎಲ್ಲವೂ ವ್ಯರ್ಥವಾಗಿದೆ. ಈ ವರ್ಷ ಬೆಳೆ ಬೆಳೆದು ತಿನ್ನಲು ಅಧಿಕಾರಿಗಳು ನಮಗೆ ಹೇಳಿದರು. ಈಗ ತೆರವು ಮಾಡಿದ್ದಾರೆ. ಇದನ್ನು ಕ್ಷಮಿಸಲು ಸಾಧ್ಯವಿಲ್ಲ. ನಮಗೆ ಮೊದಲೇ ತಿಳಿಸಿದ್ದರೆ, ನಾವು ಹಣ ಖರ್ಚು ಮಾಡಿ ಬೆಳೆಗಳನ್ನು ನೆಡುತ್ತಿರಲಿಲ್ಲ.

ಅಧಿಕಾರಿಗಳು ಇದ್ದಕ್ಕಿದ್ದಂತೆ ಬಂದು ನಮಗೆ ಹೇಳದೆ ಸುಮಾರು 25 ಎಕರೆ ಭೂಮಿಯನ್ನು ನಾಶಪಡಿಸಿದರು. ನಮಗೆ ಒಂದೂವರೆ ತಿಂಗಳು ಕಾಲಾವಕಾಶ ನೀಡಿದ್ದರೆ, ಅದು ಸಾಕಾಗುತ್ತಿತ್ತು; ಅಷ್ಟರೊಳಗೆ ನಾವು ಬೆಳೆಗಳನ್ನು ಕೊಯ್ಲು ಮಾಡಿರುತ್ತಿದ್ದೆವು ಎಂದು ರೈತ ನಾಗರಾಜ್ ಎಂಬುವವರು ಹೇಳಿದ್ದಾರೆ.

ಈ ನಡುವೆ ತಮ್ಮ ನಡೆಯನ್ನು ಅಧಿಕಾರಿಗಳು ಸಮರ್ಥಿಸಿಕೊಂಡಿದ್ದಾರೆ. ಕೆರೆ ಜಾಗ ರಕ್ಷಣೆ ದೃಷ್ಟಿಯಿಂದ ಮುಂಚೆಯೇ ರೈತರಿಗೆ ತಿಳುವಳಿಕೆ ನೋಟಿಸ್ ನೀಡಲಾಗಿತ್ತು. ಈ ಸಂಬಂಧ ಜಾಗೃತಿಯನ್ನೂ ಕೂಡ ಮೂಡಿಸಿದ್ದೆವು. ಕೆರೆ ಜಾಗ ಒತ್ತುವರಿ ಮಾಡಿ, ಬೆಳೆ ಬೆಳೆಯದಂತೆ ಎಚ್ಚರಿಸಿದ್ದೆವು. ಆದರೂ, ಸರ್ಕಾರಿ ಕೆರೆ ಜಾಗ ಒತ್ತುವರಿ ಮಾಡಿದ್ದಾರೆ. ನೋಟಿಸ್ ಕೊಟ್ಟು ಡಂಗುರ ಕೂಡ ಸಹ ಸಾರಿ ಜಾಗೃತಿ ಮೂಡಿಸಿದ್ದೆವು. ಆದರೂ, ಇಲಾಖೆ ನೋಟಿಸ್'ಗೂ ಬೆಲೆ ಕೊಡದೆ ಬೆಳೆಗಳ ಬೆಳೆದಿದ್ದಾರೆ. ಇದೀಗ ಬೆಳೆ ತೆರವು ಮಾಡುವಂತೆ ಸರ್ಕಾರದಿಂದಲೇ ಆದೇಶ ಬಂದಿದೆ. ಹೀಗಾಗಿ ತೆರವು ಮಾಡಿದ್ದೇವೆ. ಸರ್ಕಾರಿ ಜಾಗ ಯಾರೇ ಒತ್ತುವರಿ ಮಾಡಿದ್ದರೂ ತೆರವು ಮಾಡಿಸುತ್ತೇವೆ. ಇದು ಸರ್ಕಾರದ ಆದೇಶವೆಂದು ಹೇಳಿದ್ದಾರೆ.

ಸಣ್ಣ ನೀರಾವರಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರವೀಣ್ ಅವರು ಮಾತನಾಡಿ, ನಾವು ಈ ಹಿಂದೆ ಇಲ್ಲಿನ ರೈತರಿಗೆ ನೋಟಿಸ್ ನೀಡಿ, ಜಾಗೃತಿ ಮೂಡಿಸಿದ್ದೆವು, ಆದರೆ, ಅವರು ಭೂಮಿಯನ್ನು ಅತಿಕ್ರಮಣ ಮಾಡಿ ಬೆಳೆಗಳನ್ನು ಬೆಳೆಯುವುದನ್ನು ಮುಂದುರೆಸಿದ್ದರು. ನಾನು ನೀಡಿದ ನೋಟಿಸ್‌ಗಳಿಗೆ ಗಮನ ಕೊಡಲಿಲ್ಲ. ಸರ್ಕಾರಿ ಭೂಮಿಯನ್ನು ಅತಿಕ್ರಮಣ ಮಾಡಿದವರನ್ನು ನಾವು ತೆರವುಗೊಳಿಸುತ್ತೇವೆಂದು ಹೇಳಿದ್ದಾರೆ.

### ಕಾಡಾನೆ ದಾಳಿ ಮಹಿಳೆ ಸಾವು

# ಶಾಶ್ವತ ಪರಿಹಾರಕ್ಕೆ ನಿಖಿಲ್ ಕುಮಾರಸ್ವಾಮಿ ಆಗ್ರಹ

**ಚಿಕ್ಕಮಗಳೂರು:** ಅರಣ್ಯ ಸಚಿವರಿಗೆ ಮಲ್ನಾಡು ಭಾಗಕ್ಕೂ ಹಾಗೂ ಬಯಲು ಸೀಮೆಗೂ ಇರೋ ವ್ಯತ್ಯಾಸ ಗೊತ್ತಿಲ್ಲ. ನಿರಂತರವಾಗಿ ಈ ಭಾಗದಲ್ಲಿ ಇಂತಹ ಘಟನೆಗಳು ಮರುಕಳಿಸುತ್ತಿವೆ ಇದಕ್ಕೆ ಶಾಶ್ವತವಾಗಿ ಪರಿಹಾರ ಒದಗಿಸಬೇಕೆಂದು ರಾಜ್ಯ ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಒತ್ತಾಯಿಸಿದರು.

ಅವರು ಇಂದು ಶೃಂಗೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರವಾಸ ಕೈಗೊಂಡು ಬಾಳೆಹೊನ್ನೂರು ಉಪ ವಲಯ ಅರಣ್ಯ ಇಲಾಖೆ ಮುಂಭಾಗದಲ್ಲಿ ಏರ್ಪಡಿಸಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಅರಣ್ಯ ಸಚಿವ ಈಶ್ವರ್ ಖಂಡ್ರೆ ವಿರುದ್ಧ ಅವರು ತೀವ್ರ ವಾಗ್ದಾಳಿ ನಡೆಸಿದರು.

ಕೂಡಲೇ ಅರಣ್ಯ ಸಚಿವರು ಸ್ಥಳಕ್ಕಾಗಮಿಸಿ ಪರಿಶೀಲನೆ ಮಾಡಬೇಕೆಂದು ಒತ್ತಾಯಿಸಿದರು. ನಿರಂತರವಾಗಿ ಈ ಭಾಗದ ರೈತರು ಆನೆ ದಾಳಿಯಿಂದ ಸಮಸ್ಯೆ ಎದುರಿಸುತ್ತಿದ್ದಾರೆ. ಈ ಕೂಡಲೇ ಕಾಡಾನೆಯನ್ನು ಹಿಡಿದು ಆನೆ ಶಿಬಿರಕ್ಕೆ ಬಿಡಬೇಕು ಎಂದು ಆಗ್ರಹಿಸಿದರು.

ಒಂದು ಕಡೆ ಮೃತಪಟ್ಟ ಕುಟುಂಬಗಳಿಗೆ ಸರ್ಕಾರ ಪರಿಹಾರ ಘೋಷಿಸುವುದನ್ನು ಮೃತಪಟ್ಟ ಕುಟುಂಬ ಯಾರು ಕೂಡ ನೀವು ಕೊಡುವಂತ ಪರಿಹಾರವನ್ನು ನಂಬಿಕೊಂಡು ಜೀವನ ನಡೆಸುತ್ತಿಲ್ಲ. ಈ ಕೂಡಲೇ ಅರಣ್ಯ ಸಚಿವರು ಸ್ಥಳಕ್ಕೆ ಆಗಮಿಸಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಬೇಕು. ಇಲ್ಲಿನ ಅರಣ್ಯ ಅಧಿಕಾರಿಗಳು ಹಾಗೂ ಸರ್ವ ಪಕ್ಷದ ಮುಖಂಡರ ಜೊತೆ ಸಭೆ ನಡೆಸಬೇಕು ಎಂದು ಹೇಳಿದರು.



ರಾಜ್ಯ ಕಾಂಗ್ರೆಸ್ ಸರ್ಕಾರ ಏಳುವರೆ ಕೋಟಿ ಕನ್ನಡಿಗರನ್ನ ಕೈಬಿಟ್ಟಿದೆ. ಇವತ್ತು ಒಬ್ಬರು ಸಿಎಂ ಕುರ್ಚಿ ಮೇಲೆ ಕಣ್ಣಿಟ್ಟಿದ್ದಾರೆ. ಇನ್ನೊಬ್ಬರು ಡಿಸಿಎಂ, ಮತ್ತೆ ಡಿಸಿಎಂ ಕುರ್ಚಿ ಖಾಲಿ ಅದ್ರೆ ಅಧ್ಯಕ್ಷರು ಕುರ್ಚಿ ಮೇಲೆ ಕಣ್ಣಿಟ್ಟಿದ್ದಾರೆ ಎಂದು ವ್ಯಂಗ್ಯವಾಡಿದರು. ಕುರ್ಚಿ ಉಳಿಸಿಕೊಳ್ಳುವ ಜಂಜಾಟದಲ್ಲಿ ರಾಜ್ಯದ ಜನ ದೇಶಕ್ಕೆ ಹೋಗಿದ್ದಾರೆ ಎಂದು ಕಿಡಿಕಾರಿದರು.

> **ಈ ಭಾಗದಲ್ಲಿ ಕಾಡಾನೆ ಸಮಸ್ಯೆಗಳಿಂದ ಶಾಶ್ವತವಾಗಿ ಪರಿಹಾರ ಘೋಷಿಸಬೇಕೆಂದು. ಈ ಹೋರಾಟವನ್ನು ದೊಡ್ಡ ಮಟ್ಟದಲ್ಲಿ ನಡೆಸುತ್ತೇವೆ. ಇದನ್ನ ವಿಧಾನಮಂಡಲದಲ್ಲೂ ಸರ್ಕಾರದ ಗಮನ ಸೆಳೆಯುತ್ತೇವೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಎಚ್ಚರಿಸಿದರು.**

# ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ಆರೋಗ್ಯ ಶಿಬಿರ




**ಚಿಕ್ಕಮಗಳೂರು, ಜುಲೈ 24:** ನಗರದ ಸಂತ ಜೋಸೆಫರ ಆಂಗ್ಲಮಾಧ್ಯಮ ಶಾಲೆಯಲ್ಲಿ ಕಾರ್ಮಿಕರಿಗೆ ಹಾಗೂ ಅವರ ಕುಟುಂಬದವರಿಗೆ ಬುಧವಾರ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು. ಕಾರ್ಮಿಕರ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ಮತ್ತು ಅಸಂಘಟಿತ ಕಾರ್ಮಿಕರ ಒಕ್ಕೂಟದಿಂದ ಅನೇಕ ಮಂದಿಗೆ ತಪಾಸಣೆ ನಡೆಯಿತು.

ಈ ವೇಳೆ ಮಾತನಾಡಿದ ಒಕ್ಕೂಟದ ಜಿಲ್ಲಾಧ್ಯಕ್ಷ ಜೈರಾಮ್ ಕಾರ್ಮಿಕರ ಇಲಾಖೆಯಲ್ಲಿ ಯಾವ ಕಾ ರ್ಯಗಳನ್ನು ನಿರ್ವಹಿಸುವ ಕಾರ್ಮಿ ಕರು ಕಾರ್ಮಿಕರ ಕಾರ್ಡ್ ಪಡೆದುಕೊಳ್ಳಬಹುದು. ಲೇಬರ್ ಕಾರ್ಡ್ ಪಡೆದ ಕಾರ್ಮಿಕರಿಗೆ ಕಾರ್ಮಿಕರ ಇಲಾಖೆಯ ಮೂಲಕ ತಕ್ಷಣ ಸಿಗುವ ಸೌಲಭ್ಯಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಿದರು.

ಕಾರ್ಮಿಕರ ಇಲಾಖೆಯು ಕಾರ್ಮಿಕರಿಗೆ ಅಪಘಾತ ಪರಿಹಾರ ಯೋಜನೆ, ವೈದ್ಯಕಿಯ ಧನ ಸಹಾಯ ಯೋಜನೆ, ಕಾರ್ಮಿಕರ ಇಬ್ಬರು ಮಕ್ಕಳಿಗೆ ಶೈಕ್ಷಣಿಕ ಧನ ಸಹಾಯ ಯೋಜನೆ, ಯಾವುದೇ ಪದವಿ ಯವರೆಗೂ ಕಾರ್ಮಿಕನ ಮಕ್ಕಳು ಸ್ಪರ್ಧಾತ್ಮಕ ಪರೀಕ್ಷೆಗಳ ಕೋಚಿಂಗ್ ಕ್ಲಾಸ್ ಫೀಸ್ ನೀಡುತ್ತಿದೆ. ಜೊತೆಗೆ ಮೊದಲ ಇಬ್ಬರು ಮಕ್ಕಳಿಗೆ ಮದುವೆ ಧನ ಸಹಾಯ ಯೋಜನೆ, 60 ವರ್ಷ ಪೂರೈಸಿದ ಕಾರ್ಮಿಕರಿಗೆ ಪಿಂ ಚಣಿ ಯೋಜನೆ ನೀಡುವ ಯೋಜನೆಯಿದೆ ಎಂದು ಮಾಹಿತಿ ನೀಡಿದರು.

ಶಾಲೆಯ ಮುಖ್ಯೋಪಾಧ್ಯಾಯ ಕಾರ್ಮಿನ್ ಡಾಯಸ್ ಮಾತನಾಡಿ ದುಡಿಮೆಯೇ ಬದುಕು ಶಿಕ್ಷಣ ವೇ ಬೆಳಕು" ಎಂಬ ಹಿತ ನುಡಿಯೊಂದಿಗೆ ಕಾರ್ಮಿಕರ ಇಲಾಖೆಯಲ್ಲಿ ನೀಡುವ ಎಲ್ಲಾ ಸವಲತ್ತುಗಳನ್ನು ನೈಜ ಕಟ್ಟಡ ಕಾರ್ಮಿಕರು ಮತ್ತು ಅವರ ಮಕ್ಕಳು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಇದೇ ವೇಳೆ ಕಾರ್ಮಿಕರ ಇಲಾಖೆಯಿಂದ ಸುಮಾರು 20 ಬಗೆಯ ಉಚಿತ ಅರೋಗ್ಯ ತಪಾಸಣಾ ಶಿಬಿರವನ್ನು ಮಕ್ಕಳಿಗೆ ಹಮ್ಮಿಕೊಳ್ಳಲಾಗಿತ್ತು. ಡಾ॥ಉಲ್ಲಾಸ್ ಅವರ ತಂಡದಿಂದ ಸುಮಾರು 100 ಜನರಿಗೆ ಅರೋಗ್ಯ ತಪಾಸಣೆಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯಿನಿ ನಿರ್ಮಲ ಡಿಸೋಜ ಇದ್ದರು.

# ಮೈಸೂರು ನಾಲ್ವಡಿ ಒಡೆಯರನ್ನು ಸಿದ್ದರಾಮಯ್ಯಗೆ ಹೋಲಿಕೆ; ನನ್ನ ಹೇಳಿಕೆ ತಿರುಚಲಾಗಿದೆ, ಬಹಿರಂಗವಾಗಿ ಕ್ಷಮೆ ಕೇಳಲ್ಲ: ಯತೀಂದ್ರ

**ಮೈಸೂರು:** ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ಸಿಎಂ ಸಿದ್ದರಾಮಯ್ಯನವರಿಗೆ ಹೋಲಿಸಿ ಮಾತನಾಡಿದ ವಿಚಾರಕ್ಕೆ ಸಾಕಷ್ಟು ಟೀಕೆ ವ್ಯಕ್ತವಾಗುತ್ತಿದೆ. ಬಿಜೆಪಿ ನಾಯಕರು ವಿಧಾನ ಪರಿಷತ್ ಸದಸ್ಯ ಯತೀಂದ್ರ ಅವರ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ಹಿನ್ನೆಲೆ, ಈ ವಿಚಾರದ ಬಗ್ಗೆ ಮೈಸೂರಿನಲ್ಲಿ ಮೌನ ಮುರಿದಿದ್ದಾರೆ.

ಮೈಸೂರಿನ ಅಭಿವೃದ್ಧಿಗೆ ನಾಲ್ವಡಿ ಮಹಾರಾಜರಿಗಿಂತ ಹೆಚ್ಚು ಅಥವಾ ಮಹಾರಾಜರಷ್ಟೇ ಅನುದಾನ ಕೊಟ್ಟು ಅಭಿವೃದ್ಧಿ ಮಾಡಿದ್ದು ಸಿದ್ದರಾಮಯ್ಯ ಮಾತ್ರ. ಸಾಕಷ್ಟು ಅಭಿವೃದ್ಧಿಯನ್ನು ಸಿದ್ದರಾಮಯ್ಯ ಮಾಡಿದ್ದಾರೆ ಎಂದು ಮೈಸೂರಿನಲ್ಲಿ ಯತೀಂದ್ರರವರು ಶುಕ್ರವಾರ ಹೇಳಿದ್ದರು. ಸದ್ಯ ಆ ಬಗ್ಗೆ ಸಮರ್ಥಿಸಿಕೊಂಡಿದ್ದಾರೆ.

ನಾನು ಯಾವುದೇ ಕೆಟ್ಟ ಉದ್ದೇಶದಿಂದ ಆ ರೀತಿ ಹೇಳಿಲ್ಲ. ನಾಲ್ವಡಿಯವರ ಬಗ್ಗೆ ನನಗೆ ಗೌರವ ಇದೆ. ಆದರೆ, ಸಿದ್ದರಾಮಯ್ಯನವರು ಮೈಸೂರಿಗೆ ಹೆಚ್ಚು ಅನುದಾನ ನೀಡಿದ್ದಾರೆ ಎಂದು ಹೇಳುವ ಉದ್ದೇಶವಿತ್ತು. ವಿರೋಧ ಪಕ್ಷಗಳು ಸುಖಾ ಸುಮ್ಮನೆ ಈ ವಿಚಾರವನ್ನು ದೊಡ್ಡದು ಮಾಡುತ್ತಿವೆ ಎಂದು ಹೇಳಿದರು.

ನಾಲ್ವಡಿಯವರ ಬಗ್ಗೆ ಅಪಾರ ಗೌರವ ಇದೆ. ನಾನು ಯಾವುದೇ ದುರುದ್ದೇಶ ಇಟ್ಟುಕೊಂಡು ಹೇಳಿದ ಹೇಳಿಕೆಯಲ್ಲ.

ನಾಲ್ವಡಿ ಕೃಷ್ಣರಾಜ ಒಡೆಯರ ಆಡಳಿತ ಎಲ್ಲರಿಗೂ ಸ್ಫೂರ್ತಿಯಾಗಿದೆ. ಒಡೆಯರ್ ಅವರ ಬಗ್ಗೆ ಸಭೆ ಸಮಾರಂಭಗಳಲ್ಲಿ ಗೌರವಯುತವಾಗಿ ಮಾತನಾಡಿದ್ದೇವೆ ಎಂದು ಅವರು ತಿಳಿಸಿದ್ದಾರೆ.

# ಅಡಿಕೆ ಎಲೆ ಚುಕ್ಕೆ ರೋಗ ನಿಯಂತ್ರಣಕ್ಕೆ ಕ್ರಮ

**ಚಿಕ್ಕಮಗಳೂರು :** 2025–26ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಚಿಕ್ಕಮಗಳೂರು ತಾಲ್ಲೂಕು ತೋಟಗಾರಿಕೆ ಇಲಾಖೆಯಿಂದ ಅಡಿಕೆ ಎಲೆ ಚುಕ್ಕೆ ರೋಗ ನಿಯಂತ್ರಣ ಕ್ರಮ ಕೈಗೊಳ್ಳಲು ಸಮಗ್ರ ಪೋಷಕಾಂಶ ನಿರ್ವಹಣೆ, ಸಮಗ್ರ ಕೀಟ ನಿರ್ವಹಣೆ ಘಟಕದಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಘಟಕ ವೆಚ್ಚವು ಪ್ರತೀ ಹೆಕ್ಟೇರ್ 5 ಸಾವಿರ ರೂ. ಆಗಲಿದ್ದು, ಶೇ.30 ರಂತೆ ಪ್ರತೀ ಹೆಕ್ಟೇರ್‌ಗೆ 1500 ರೂ.ವರೆಗೆ ಪ್ರತೀ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್‌ವರೆಗೆ ಸಹಾಯಧನ ನೀಡಲಾಗುವುದು. ಅರ್ಜಿ ನಮೂನೆಯೊಂದಿಗೆ ಹೊಸ ಪಹಣಿ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್, ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿ, ಒಂದು ಪಾಸ್‌ಪೋರ್ಟ್ ಸೈಜ್ ಫೋಟೋ, ಎಸ್‌ಸಿ, ಎಸ್‌ಟಿ ಆಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿ, ಔಷಧಿ ಖರೀದಿಸಿರುವ ಜಿ.ಎಸ್.ಟಿ. ಬಿಲ್‌ಗಳನ್ನು (ಮೈಲುತುತ್ತ, ಪ್ರೋಲಿಕೋನಜೋಲ್, ಹೆಕ್ಸಕೋನಜೋಲ್, ಟೆಬೂಕೋನಜೋಲ್, ಪ್ರೊಬಿನೆಬ್) ಒದಗಿಸಬೇಕು.

# ಫೋಟೋ–ವೀಡಿಯೋಗ್ರಫಿಗೆ ಕೆನಾನ್ ಕ್ಯಾಮಾರಗಳು ಶ್ರೇಷ್ಠ: ನಾಗೇಶ್

**ಚಿಕ್ಕಮಗಳೂರು, ಜುಲೈ 24 :** ಪೋಟೋಗ್ರಫಿ ಮತ್ತು ವೀಡಿಯೋಗ್ರಫಿ ಕ್ಷೇತ್ರದಲ್ಲಿ ಹೊಸ ಆಯಾಮವನ್ನು ಸೃಷ್ಟಿಸುವ ಕೆನಾನ್ ಕ್ಯಾಮರಾಗಳು ಛಾಯಾಗ್ರಾಹಕರ ಅನುಕೂಲತೆಗೆ ತಕ್ಕಂತೆ ಬಹಳಷ್ಟು ತಂತ್ರಾಂಶ ವನ್ನು ಅಡಕಗೊಳಿಸಲಾಗಿದೆ ಎಂದು ಕೆನಾನ್ ಕ್ಯಾಮಾರಾ ಕಂಪನಿ ತರಬೇತಿದಾರ ನಾಗೇಶ್ ಹೇಳಿದರು.

ನಗರದ ಸ್ಕೌಟ್ಸ್ ಭವನದಲ್ಲಿ ಚಿಕ್ಕಮಗಳೂರು ಛಾಯಾಗ್ರಾಹಕರ ಸಂಘದಿಂದ ಗುರುವಾರ ಏರ್ಪಡಿಸಿದ್ಧ 'ಕೆನಾನ್' ಕಂಪನಿಯ ಕ್ಯಾಮಾರಾಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅತ್ಯಾಧುನಿಕ ತಂತ್ರಜ್ಞಾನಗಳು ಮತ್ತು ಹೊಸ ವಿಧಾನಗಳು ಇತರೆ ಕ್ಯಾಮರಾಗಳಿಗಿಂತ ವಿಭಿನ್ನ ರೀತಿಯ ಲ್ಲಿ ಕೆನಾನ್ ಕ್ಯಾಮಾರಾದಲ್ಲಿ ಅಳವಡಿಸಿದೆ. ಈ ತಂತ್ರಜ್ಞಾನವಳು ಮದುವೆ ಜೊತೆಗೆ ಸಿನಿಪೋಟ–ೋ ಹಾಗೂ ವೀಡೀಯೋಗ್ರಫಿಗೆ ಪೂರಕವಾಗಿದ್ದು ಲೆನ್ಸ್‌ಗಳು ಕೂಡಾ ಗುಣಮಟ್ಟತೆಯಿಂದ ಕೂಡಿವೆ ಎಂದರು.

ಪ್ರಸಕ್ತ ಸಾಲಿನಲ್ಲಿ ಕೆನಾನ್ ಕಂಪನಿಯ ಕ್ಯಾಮಾರಾಗಳು ಛಾಯಾಗ್ರಾಹಕರ ವೃತ್ತಿ ಬದುಕಿನಲ್ಲಿ ಅನೇಕ ಸಮಯವನ್ನು ಉಳಿಸುವ ಶಕ್ತಿ ಹೊಂದಿದೆ. ಎಡಿ–ಟಿಂಗ್ ಕೆಲಸ, ಕಲರ್ ಪಿಕ್ಸಿಂಗ್ ಸೇರಿದಂತೆ ಗಂಟೆಗಟ್ಟಲೇಯ ಹೆಚ್ಚು ಸಮಯವನ್ನು ಕ್ಯಾಮಾರಗಳ ಸೆಟ್ಟಿಂಗ್‌ನಿಂದಲೇ ಉಳಿಸುತ್ತದೆ ಎಂದು ಹೇಳಿದರು.




ಇತ್ತೀಚೆಗೆ ಸಿನಿಮಾ, ಧಾರವಾಹಿ ಕ್ಷೇತ್ರಗಳಲ್ಲಿ ಕೆನಾನ್ ಕಂಪನಿಯ ಕ್ಯಾಮರಾಗಳು ಬಳಕೆಯಾಗುತ್ತಿದೆ. ಕೆಲವರು ಕ್ಯಾಮಾರಾ ಬಗ್ಗೆ ಸುಳ್ಳುಸುದ್ದಿಗಳು ಹರಡುತ್ತಿದ್ದು ಇದರ ಬಗ್ಗೆ ತಲೆಕೆಡಿಸಿಕೊಳ್ಳದೇ ಎಲ್ಲವೂ ಗುಣ ಮಟ್ಟ ಹಾಗೂ ತಂತ್ರಜ್ಞಾನದಿಂದ ಕೂಡಿದ ಕಾರಣ ಬೆಂಗಳೂರು ಹಾಗೂ ಮಂಗಳೂರಿನಲ್ಲಿ ಅತಿಹೆಚ್ಚು ಕೆನಾ ನ್ ಕ್ಯಾಮಾರಾ ಚಾಲ್ತಿಯಲ್ಲಿದೆ ಎಂದು ತಿಳಿಸಿದರು.

ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನದೀಮ್ ಪಾಷ ಮಾತನಾಡಿ ಮಲೆನಾಡು ಭಾಗ ವಿಪರೀತ ಮಳೆ ಯಾಗುವ ಪ್ರದೇಶ. ಈ ಜಾಗದಲ್ಲಿ ಛಾಯಾಚಿತ್ರಣ ಬಹುದೊಡ್ಡ ಕೆಲಸವಾದ ಕಾರಣ ಛಾಯಾಗ್ರಾಹಕರಿಗೆ ಅನುಕೂಲವಾಗಲು ಕೆನಾನ್ ಕಂಪನಿ ತರಬೇತಿದಾರರಿಂದ ಕಾರ್ಯಾಗಾರ ಹಮ್ಮಿಕೊಂಡು ಕ್ಯಾಮಾರದ ವಿ ಶೇಷತೆ ಪರಿಚಯಿಸಲಾಗುತ್ತಿದೆ ಎಂದು ಹೇಳಿದರು.

ಇದೇ ವೇಳೆ ಕೆನಾನ್ ಕಂಪನಿ ತರಬೇತುದಾರ ಯಲ್ಲಪ್ಪ ಪಾಟೀಲ್ ಮಾಡೆಲ್‌ನೊಂದಿಗೆ ಕೆನಾನ್ ಕ್ಯಾ ಮಾರಗಳ ವಿಶೇಷತೆಯನ್ನು ಛಾಯಾಗ್ರಾಹಕರಿಗೆ ಮನದಟ್ಟು ಮಾಡಿದರು.

ಈ ಸಂದರ್ಭದಲ್ಲಿ ಚಿಕ್ಕಮಗಳೂರು ಛಾಯಾಗ್ರಾಹಕರ ಸಂಘದ ಪ್ರಧಾನ ಕಾರ್ಯದರ್ಶಿ ಮತ್ತಿಕೆರೆ ಪ್ರದೀಪ್, ಗೌರವಾಧ್ಯಕ್ಷ ಎಂ.ಆರ್.ರಮೇಶ್, ಉಪಾಧ್ಯಕ್ಷ ಪಾರ್ಥ ಸಾರಥಿ, ಖಜಾಂಚಿ ಜಯನಾಯಕ್ ಸಹ ಕಾರ್ಯದರ್ಶಿ ರೇಣುಕುಮಾರ್, ನಿರ್ದೇಶಕರುಗಳಾದ ಹರೀಶ್, ನೀಲಕಂಠ, ರಾಜೇಶ್, ನವೀನ್, ಪ್ರಭು, ಸಂತೋಷ್, ಮಲ್ಲಿಕಾರ್ಜುನ್ ಮತ್ತಿತರರು ಉಪಸ್ಥಿತರಿದ್ದರು.

# ಬೆಂಗಳೂರು: ಕಾಡುಗೋಡಿಯಲ್ಲಿ 4,000 ಕೋಟಿ ರೂ. ಮೌಲ್ಯದ 120 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವು

**ಬೆಂಗಳೂರು:** ರಾಜ್ಯ ಸರ್ಕಾರವು ಸೋಮವಾರ ಕಾಡುಗೋಡಿ ತೋಟದಲ್ಲಿ ಅತಿಕ್ರಮಣಗೊಂಡಿದ್ದ 4,000 ಕೋಟಿ ರೂ. ಮೌಲ್ಯದ 120 ಎಕರೆ ಅರಣ್ಯ ಭೂಮಿಯನ್ನು ತೆರವುಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ನಿರ್ದೇಶನದ ಮೇರೆಗೆ ಅರಣ್ಯ ಭೂಮಿ ಒತ್ತುವರಿ ತೆರವು ಕಾರ್ಯಾಚರಣೆ ಆರಂಭಿಸಲಾಗಿದೆ. ಬೆಂಗಳೂರು ಪೂರ್ವ ತಾಲೂಕು ಬಿದರಹಳ್ಳಿ ಹೋಬಳಿ, ಕಾಡುಗೋಡಿ ಪ್ಲಾಂಟೇಷನ್‌ನ 120 ಎಕರೆ ಅರಣ್ಯ ಭೂಮಿ ಒತ್ತುವರಿಯನ್ನು ಅಧಿಕಾರಿಗಳು ತೆರವುಗೊಳಿಸುತ್ತಿದ್ದಾರೆ. ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ಇಂದು ಬೆಳಗ್ಗೆಯೇ ಜೆಸಿಬಿಯೊಂದಿಗೆ ಕಾರ್ಯಾಚರಣೆಗೆ ಇಳಿದ ಬೆಂಗಳೂರು ನಗರ ಅರಣ್ಯ ಇಲಾಖೆ ಅಧಿಕಾರಿಗಳ ನೇತೃತ್ವದ ತಂಡ, ಕಾಡುಗ–ೋಡಿಯ ಪ್ಲಾಂಟೇಷನ್‌ನ ಅರಣ್ಯ ಭೂಮಿಯ ಒತ್ತುವರಿ ತೆರವು ಮಾಡಿ, ಮರು ವಶಕ್ಕೆ ಪಡೆಯಲು ಕಾರ್ಯಾಚರಣೆ ಮುಂದುವರಿಸಿದ್ದಾರೆ. ಕಾರ್ಯಾಚರಣೆ–ಯ ಸಮಯದಲ್ಲಿ, ಅಧಿಕಾರಿಗಳು ಗಡಿಗಳನ್ನು ಗುರುತಿಸಿ, ಬೇಲಿ ಹಾಕಿ, ಸ್ಥಳೀಯ ಪ್ರಭೇದದ ಸಸಿಗಳನ್ನು ನೆಡುವ ಕಾರ್ಯದಲ್ಲಿ ನಿರತರಾಗಿದ್ದರು. ಇಂದು ಮರಳಿ ಪಡೆದ ಅರಣ್ಯ ಭೂಮಿಯ ಅಂದಾಜು ಮಾರುಕಟ್ಟೆ ಮೌಲ್ಯ ಸುಮಾರು 4,000 ಕೋಟಿ ರೂ. ಗಳಷ್ಟಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಇತ್ತೀಚೆಗೆ ನಡೆದ ಪರಿಶೀಲನಾ ಸಭೆಯಲ್ಲಿ, ಬೆಂಗಳೂರು ವ್ಯಾಪಕವಾಗಿ ಬೆಳೆಯುತ್ತಿದ್ದು, ಹಸಿರು ಹೊದಿಕೆ ದಿನದಿಂದ ದಿನಕ್ಕೆ ಕ್ಷೀಣಿಸುತ್ತಿದೆ. ಹೀಗಾಗಿ ಶ್ವಾಸತಾಣಗಳ ಸಂರಕ್ಷಣೆ ಮಾಡಬೇಕು ಎಂದು ಸ್ಪಷ್ಟ ಸೂಚನೆ ನೀಡಿದ್ದರು.

ಈ ನಿಟ್ಟಿನಲ್ಲಿ, ಹಸಿರು ವಲಯಗಳನ್ನು ಪ್ರಮುಖ ಉಸಿರಾಟದ ಸ್ಥಳಗಳಾಗಿ ರಕ್ಷಿಸಲು ಸರ್ಕಾರ ಸ್ಪಷ್ಟ ಸೂಚನೆಗಳನ್ನು ನೀಡಿದೆ ಮತ್ತು ಕಾನೂನಿನ ಪ್ರಕಾರ ಅರಣ್ಯ ಭೂಮಿ ಒತ್ತುವರಿಯನ್ನು ಕಟ್ಟುನಿಟ್ಟಾಗಿ ತೆರವುಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಖಂಡ್ರೆ ಅರಣ್ಯ ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ, ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರಿನಲ್ಲಿ 128 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವುಗೊಳಿಸಲಾಗಿದೆ.

"ಇಂದು ತೆರವುಗೊಳಿಸಿದ 120 ಎಕರೆಯೊಂದಿಗೆ, ಒಟ್ಟು 248 ಎಕರೆ ಅರಣ್ಯ ಭೂಮಿಯನ್ನು ಈಗ ಮರಳಿ ಪಡೆಯಲಾಗಿದೆ. ಇದು ಅಂದಾಜು ಮಾರುಕಟ್ಟೆ ಮೌಲ್ಯ 8,000 ಕೋಟಿ ರೂ.ಗಳನ್ನು ಮೀರಿದೆ"

# ಮೌಲ್ಯಯುತ ವಿಚಾರಗಳು ಮಾನವನ ಪ್ರಗತಿಗೆ ಪೂರಕ : ಶಿವಶಾಂತವೀರ ಶರಣರು



**ಗದಗ :** ಮೌಲ್ಯಯುತ ವಿಚಾರಗಳು ಮಾನವನ ಪ್ರಗತಿಗೆ ಪೂರಕ ಎಂದು ಬಳಗಾನೂರು ಶಿವಶಾಂತವೀರ ಶರಣರು ಹೇಳಿದರು.

ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 30ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ 1008 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಪರಮ ಪೂಜ್ಯಶ್ರೀ ಶಿವಶಾಂತವೀರ ಶರಣರ ತುಲಾಬಾರ ಹಾಗೂ ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರಕ್ಕೆ ಬಳ್ಳಾರಿಯ ಬಸವಭವನದಲ್ಲಿ ಭಾನುವಾರ ಚಾಲನೆ ನೀಡಿ ಅವರು ಆಶೀರ್ವಚನ ನೀಡಿ ಮಾತನಾಡಿ, ಮಹಾತ್ಮರು, ಶರಣರು, ಸಾಧುಗಳು ಮತ್ತು ಸಂತರ ಬದುಕಿನಲ್ಲಿ – ನುಡಿಗಳಲ್ಲಿ ಮೌಲ್ಯಗಳು – ಆದರ್ಶಗಳು ಮತ್ತು ಸಂಸ್ಕಾರಗಳು ಅಡಗಿರುತ್ತವೆ. ಮುಗ್ಧವಾದ ಭಕ್ತಿ, ಶ್ರದ್ಧೆಯ ಸ್ಮರಣೆ, ವಿಶ್ವಾಸಗಳಿಂದ ಮಹಾತ್ಮರನ್ನು – ಶರಣರನ್ನು ಸ್ಮರಿಸಿದಲ್ಲಿ ಬದುಕು ಸಾರ್ಥಕತೆಯನ್ನು ಪಡೆಯುತ್ತದೆ ಎಂದರು.

ಶರಣರು ಕಾಡು ಸೇರಿ ಸಾಧನೆ ಮಾಡಿದವರಲ್ಲ. ನಾಡಿನಲ್ಲಿ, ಜನರೊಂದಿಗೆ ಇದ್ದು ಸಾಧನೆಯನ್ನು ಮಾಡಿ ಸದ್ಗತಿಯನ್ನು ಸಾಧಿಸಿದವರು. ಗುರುವಿಗೆ ಶರಣಾದೊಡೆ ಸಾಧನೆ ಮತ್ತು ಯಶಸ್ಸು ಹಿಂಬಾಲಿಸುತ್ತವೆ. ಜೀವನದ ಸಾರ್ಥಕತೆಗೆ ಮಾನವೀಯತೆ, ಸೇವೆ, ತ್ಯಾಗ, ಕಾಯಕ ಅತಿ ಅಗತ್ಯ ಎಂದರು.

ಯರನಾಳ ಹಿರೇಮಠ ಸಂಸ್ಥಾನದ ಶಿವಪ್ರಸಾದ ದೇವರು ಅವರು, ತಾಯಿಯೇ ದೇವರು. ಭೂಮಿಗಿಂತಲೂ ದೊಡ್ಡದ್ದವರು ತಾಯಿ. ತಾಯಿಯ ಸೇವೆಯನ್ನು ಮಾಡುವುದು ಸಾಕ್ಷಾತ್ ದೇವರ ಸೇವೆಯನ್ನು ಮಾಡಿದಂತೆ. ಚಿಕೇನಕೊಪ್ಪದ ಚನ್ನವೀರ ಶರಣರು ಮಾತೆಯರನ್ನು ಗೌರವಿಸಲು –ಅಭಿನಂದಿಸಲಿಕ್ಕಾಗಿಯೇ ಉಡಿ ತುಂಬುವ ಕಾರ್ಯವನ್ನು ಪ್ರಾರಂಭಿಸಿದ್ದಾರೆ.

ಇಂದಿನ ದಿನಗಳಲ್ಲಿ ವಿದ್ಯೆ ಎಲ್ಲರಿಗೂ ಸಿಕ್ಕಿದ್ದು, ವಿನಯ ಮಾಯವಾಗಿದೆ. ವಿಜ್ಞಾನ ಅಭಿವೃದ್ಧಿ ಸಾಧಿಸಿದ್ದು ಅಜ್ಞಾನ ಪರಮಾವಧಿಯನ್ನು ತಲುಪಿದೆ. ಈ ನಿಟ್ಟಿನಲ್ಲಿ ಇಂದಿನ ಯುವಶಕ್ತಿಗೆ ವಿದ್ಯೆ, ವಿಜ್ಞಾನ, ವಿನಯ ಮತ್ತು ಪರಸ್ಪರರನ್ನು ಗೌರವಿಸುವ ಸಂಸ್ಕಾರವನ್ನು ಕಲಿಸಬೇಕಿದೆ ಎಂದರು.

ಮುಖ್ಯ ಅತಿಥಿಗಳಾಗಿದ್ದ ಅಲ್ಲಂ ವೀರಭದ್ರಪ್ಪ ಅವರು, ಚಿಕೇನಕೊಪ್ಪ ಚನ್ನವೀರ ಶರಣರು ನಡೆದಾಡುವ ದೇವರು. ಅವರ ತಪಸ್ಸಿನ ಸಾಧನೆ –ದೈವೀ ಶಕ್ತಿ ನಮ್ಮನ್ನೆಲ್ಲರನ್ನೂ ಇಲ್ಲಿ ಒಗ್ಗೂಡಿಸಿದೆ ಎಂದರು.

ಈಶ್ವರಿ ಮತ್ತು ತೇಜಸ್ವಿನಿ ಅವರು ಪ್ರಾರ್ಥನೆ ಸಲ್ಲಿಸಿದರು. ಪಂಡಿತ ಶಿವಲಿಂಗಶಾಸ್ತ್ರಿಗಳು ಸ್ವಾಗತ ಕೋರಿದರು. ಉಪನ್ಯಾಸಕ ಬಸವರಾಜ ಅಮಾತಿ ಅವರು ಪ್ರಾಸ್ತಾವಿಕ ಭಾಷಣ ಮಾಡಿದರು. ಶರಣ ಕುಮಾರ್ ಕೊತ್ತಲಚಿಂತ ಮತ್ತು ಸುಧಾಕರ ಅವರು ಸಂಗೀತ ಸೇವೆ ಸಲ್ಲಿಸಿದರು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಕೆ.ಬಿ. ಸಿದ್ದಲಿಂಗಪ್ಪ ಅವರು ಕಾರ್ಯಕ್ರಮ ನಿರೂಪಿಸಿದರು.

ಶ್ರೀಗಳಿಗೆ ತುಲಾಭಾರ ಸೇವೆಯನ್ನು ಗುರು ಕಂಪ್ಯೂಟರ್ಸ್‌ನ ಪೂಜಾ – ಮೃತ್ಯುಂಜಯ ಬಾಬು ಹಾಗೂ ಕುಟುಂಬ, ಜುನ್ನಾ ಅಮೃತ – ಜುನ್ನಾ ಬಸವರೆಡ್ಡಿ ಕುಟುಂಬ, ಧರಣಿ. ಡಿ, ಶಿವರಾಂ .ಟಿ, ನಾಗರಾಜ .ಡಿ, ಹಾಗೂ ಸೋಮಶೇಖರ್.ಡಿ ಕುಟುಂಬ, ಕರಿನಾಗಶೆಟ್ರು ಸುಮಂಗಳ ಚನ್ನಪ್ಪ ಕುಟುಂಬ, ಸಿದ್ದಲಿಂಗಮ್ಮ ಹಾಗೂ ಮಕ್ಕಳಾದ ತಿಪ್ಪೇಸ್ವಾಮಿ, ಕರಿಬಸಪ್ಪ, ಲತಾ, ಪುಷ್ಪ, ಹಾಗೂ ಕುಟುಂಬ, ಶ್ರೀಧರಗಡ್ಡೆಯ ದಿವಂಗತ ಲದ್ದೆ ಸಿದ್ದರಾಮಪ್ಪ ಇವರ ಧರ್ಮಪತ್ನಿ ಲದ್ದೆ ಸಿದ್ದವೀರಮ್ಮ ಮತ್ತು ಮಕ್ಕಳು, ಜಿ. ಶಕುಂತಲಾ ಗಂಡ ದಿವಂಗತ ಜಿ. ಮಲ್ಲಿಕಾರ್ಜುನ ಹಾಗೂ ಜಿ. ಸುನೀತ, ಜಿ. ರಘುನಾಥ್ ಮತ್ತು ಮಕ್ಕಳು, ಸಂಗನಕಲ್ಲುನ ಮಂಗಳ ಮತ್ತು ನಿಜಲಿಂಗಯ್ಯ ಸ್ವಾಮಿ ಹಾಗೂ ವಿದ್ಯಾಶ್ರೀ, ಹೆಚ್. ಕಿರಣ – ಹೆಚ್.ಎನ್. ಗಿರೀಶ ಹಾಗೂ ಡಾ. ಹೆಚ್.ಎನ್. ಶಿವರರಣ, ಕೊಟ್ಟೂರು, ಕಮ್ಮರಚೇಡುನ ಜಾನಕುಂಟೆ ರಾಜಮ್ಮ ಜಾನಕುಂಟೆ ತಿಪ್ಪೇರುದ್ರಪ್ಪ ಹಾಗೂ ಕುಟುಂಬ, ಕೆ. ವಿಜಯಗಣೇಶ್ ಕುಮಾರ್ ಹಾಗೂ ಕುಟುಂಬ, ವಿದ್ಯಾಶ್ರೀ ಮತ್ತು ಶಿವಶಂಕರಗೌಡ, ಪೊಲೀಸ್ ಪಾಟೀಲ್ ಕುಟುಂಬ ಅವರು ನೆರವೇರಿಸಿದರು.

# ಶಾಲಾ–ಕಾಲೇಜು ವಿದ್ಯಾರ್ಥಿಗಳು ತಪ್ಪದೇ ಹೆಲ್ಮೆಟ್ ಧರಿಸಬೇಕು : ಡಾ.ಶೋಭಾರಾಣಿ

**ಬಳ್ಳಾರಿ :** ಜಿಲ್ಲೆಯ ಎಲ್ಲಾ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳ ಸುರಕ್ಷತೆಯ ಹಿನ್ನಲೆಯಲ್ಲಿ ದ್ವಿ–ಚಕ್ರ ವಾಹನ ಚಲಾಯಿಸುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಈ ಕುರಿತು ಆಯಾ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರು ಮತ್ತು ಶಿಕ್ಷಕರು ಜಾಗೃತಿ ನೀಡಬೇಕು ಮತ್ತು ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೋಭಾರಾಣಿ ವಿ.ಜೆ ಅವರು ಹೇಳಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಬಳ್ಳಾರಿ ನಗರ ಹಾಗೂ ಬಳ್ಳಾರಿ ಗ್ರಾಮೀಣದಲ್ಲಿರುವ ಎಲ್ಲಾ ಶಾಲೆ ಮತ್ತು ಕಾಲೇಜುಗಳ ಪ್ರಾಂಶುಪಾಲರ ಹಾಗೂ ಆಡಳಿತ ಮಂಡಳಿ ಸದಸ್ಯರ ಸಭೆಯಲ್ಲಿ ಅವರು ಮಾತನಾಡಿದರು.

ವಾಹನ ಚಾಲನೆ ಮಾಡುವ ಬೈಕ್ ಸವಾರ ಮತ್ತು ಹಿಂಬದಿ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಬಗ್ಗೆ ಕಟ್ಟುನಿಟ್ಟಿನ ಕ್ರಮಗಳನ್ನು ಪಾಲಿಸಬೇಕು ಹಾಗೂ ಶಾಲಾ ಕಾಲೇಜು ಬಸ್ ಮತ್ತು ಇತರೇ ವಾಹನಗಳು ಸಂಚಾರ ಸುರಕ್ಷತೆಯ ಬಗ್ಗೆ ಪ್ರಾಂಶುಪಾಲರು ಮತ್ತು ಶಿಕ್ಷಕರು ಮಕ್ಕಳಿಗೆ ಮಾಹಿತಿ ನೀಡಬೇಕು ಎಂದರು.

ಶಾಲಾ ಕಾಲೇಜಿನ ಎಲ್ಲಾ ಶಿಕ್ಷಕರು ಮತ್ತು ಶಿಕ್ಷಕೇತರ ಸಿಬ್ಬಂದಿಯವರು ಹಾಗೂ ಮೋಟಾರ್ ಸೈಕಲ್ ಚಲಾಯಿಸುವ ಪ್ರತಿಯೊಬ್ಬ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ತಿಳಿಸಿದರು.



ಶಾಲಾ ಕಾಲೇಜಿನ ವಾಹನಗಳ ಸಂಬಂಧಪಟ್ಟ ಚಾಲಕರು ಅತೀವೇಗ ಮತ್ತು ನಿರ್ಲಕ್ಷ್ಯತನದಿಂದ ಚಾಲನೆ ಮಾಡದಿರುವ ಬಗ್ಗೆ ಖಚಿತ ಪಡಿಸಿಕೊಳ್ಳಬೇಕು. ರಸ್ತೆ ಸುರಕ್ಷತೆಯ ಎಲ್ಲಾ ನಿಯಮಗಳನ್ನು ಪಾಲಿಸಲು ತಿಳಿಸಬೇಕು.

ಶಾಲಾ ಕಾಲೇಜಿನ ವಾಹನಗಳಿಗೆ ಎಲ್.ಇ.ಡಿ ಹೆಡ್ ಲೈಟ್‌ಗಳನ್ನು ಮತ್ತು ಡ್ರಿಲ್ / ಕರ್ಕಶ ಶಬ್ದದ ಹಾರ್ನ್‌ಗಳನ್ನು ಅಳವಡಿಸಬಾರದು. ವಾಹನಗಳಿಗೆ ರಿಫ್ಲೆಕ್ಟರ್ ಸ್ಟಿಕರ್‌ಗಳನ್ನು ಅಳವಡಿಸಬೇಕು. ಕಡ್ಡಾಯವಾಗಿ ಶಾಲಾ ಕಾಲೇಜು ವಾಹನಗಳ ಚಾಲಕರು ಖಾಕಿ ಸಮವಸ್ತ್ರ ಧರಿಸಬೇಕು ಎಂದು ಸೂಚನೆ ನೀಡಿದರು.

ಶಾಲಾ ಕಾಲೇಜಿನ ವಾಹನಗಳ ಚಾಲಕರು ಮದ್ಯಪಾನ, ಡ್ರಗ್ಸ್ ಅಥವಾ ಇತರೆ ಮಾದಕ ದ್ರವ್ಯಗಳ ಅಮಲಿನಲ್ಲಿ ವಾಹನಗಳನ್ನು ಚಾಲನೆ ಮಾಡುವುದು ಕಾನೂನು ಬಾಹಿರ. ಕಂಡು ಬಂದಲ್ಲಿ ಶಿಕ್ಷೆಗೆ ಒಳಪಡುತ್ತಾರೆ ಎಂದು ಎಚ್ಚರಿಸಿದರು.

ವಿದ್ಯಾರ್ಥಿಗಳು ಬೋರ್ಡಿಂಗ್ ಮತ್ತು ಡಿ–ಬೋರ್ಡಿಂಗ್ ವೇಳೆಯಲ್ಲಿ ಮಕ್ಕಳ ಸುರಕ್ಷತೆ ಬಗ್ಗೆ ಶಿಕ್ಷಕರು ಗಮನ ವಹಿಸಬೇಕು. ವಾಹನಗಳಿಗೆ ಕಡ್ಡಾಯವಾಗಿ ವಾಹನದ ನೋಂದಣಿ ಪತ್ರ, ಇನ್ಸೂರೆನ್ಸ್ ಪರ್ಮಿಟ್ ಇರಬೇಕು. ಒಂದು ವರ್ಷಕ್ಕಿಂತ ಮೇಲ್ಪಟ್ಟ ವಾಹನಗಳಿಗೆ ಫಿಟ್‌ನೆಸ್ ಪ್ರಮಾಣ ಪತ್ರ ಹಾಗೂ ಚಾಲಕನು ಅಧಿಕೃತ ಡಿ.ಎಲ್ ಹೊಂದಿರಬೇಕು ಎಂದು ಹೇಳಿದರು.

ಈ ನಿಯಮಗಳನ್ನು ಪಾಲಿಸದಿದ್ದಲ್ಲಿ ಮತ್ತು ಶಾಲಾ ಕಾಲೇಜಿನ ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಯಾವುದೇ ನಿರ್ಲಕ್ಷ್ಯತನ ವಹಿಸಿದಲ್ಲಿ ಅಂತ ಕಾಲೇಜಿನ ಆಡಳಿತ ಮಂಡಳಿ ಮತ್ತು ಸಂಬಂಧಪಟ್ಟವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಶಾಲಾ–ಕಾಲೇಜುಗಳ ಆಡಳಿತ ಮಂಡಳಿಯವರು ಮತ್ತು ಪೊಲೀಸ್ ಅಧಿಕಾರಿಗಳು ಇದ್ದರು.

# ದುಶ್ಚಟಗಳಿಂದ ದೂರವಿದ್ದಾಗ ಉತ್ತಮ ಆರೋಗ್ಯ ಪಡೆಯಲು ಸಾಧ್ಯ

**ಚಿತ್ರದುರ್ಗ:** ದುಶ್ಚಟಗಳಿಂದ ದೂರವಿದ್ದಾಗ ನಾವು ಉತ್ತಮ ಅರೋಗ್ಯ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಸಮಾಜ ವಿಜ್ಞಾನ ವಿಷಯ ಪರಿವೀಕ್ಷಕ ಕೆ.ಜಿ.ಪ್ರಶಾಂತ್ ಹೇಳಿದರು. ಅವರು ತಾಲೂಕಿನ ಐನಹಳ್ಳಿ ಕುರುಬರಹಟ್ಟಿ ಸರ್ಕಾರಿ ಪ್ರೌಢಶಾಲೆಯಲ್ಲಿ ಡಯಟ್ ವತಿಯಿಂದ ಎನ್.ಪಿ.ಇ.ಪಿ(ರಾಷ್ಟ್ರೀಯ ಜನಸಂಖ್ಯಾ ಶಿಕ್ಷಣ ಯೋಜನೆ) ಅಡಿಯಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಮಾದಕ ವಸ್ತುಗಳ ಬಳಕೆ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ದುಶ್ಚಟಗಳಿಂದ ದೂರವಿದ್ದಾಗ ಸಮಾಜದಲ್ಲಿ ಗೌರವ ದೊರೆಯುತ್ತದೆ. ನಾವು ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳುವುದರ ಮೂಲಕ ಉತ್ತಮ ಜೀವನ ನಡೆಸಬೇಕು ಎಂದು ತಿಳಿಸಿದರು.

ಎನ್.ಪಿ.ಇ.ಪಿ ಜಿಲ್ಲಾ ನೋಡಲ್ ಅಧಿಕಾರಿ ಎಸ್.ಬಸವರಾಜು ಮಾತನಾಡಿ, ಸ್ವಾಸ್ಥ್ಯ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಅಗತ್ಯ. ಒಮ್ಮೆ ಮಾದಕ ವಸ್ತುಗಳಿಗೆ ದಾಸರಾದರೆ ಅದರಿಂದ ಹೊರಬರುವುದು ಕಷ್ಟವಾಗುತ್ತದೆ. ಇದರಿಂದ ನಮ್ಮ ವೈಯಕ್ತಿಕ ಆರೋಗ್ಯಕ್ಕೆ ಹಾನಿಯಾಗುವುದರ ಜತೆಗೆ ಕುಟುಂಬದ ನೆಮ್ಮದಿ ಹಾಳಾಗುತ್ತದೆ. ಮಾದಕ ವಸ್ತುಗಳಿಗೆ ಕಡಿವಾಣದಿಂದ ನೆಮ್ಮದಿಯಿಂದ ಸುಖ ಜೀವನ ನಡೆಸಲು ಅನುಕೂಲವಾಗುತ್ತದೆ ಎಂದರು.

ಆಂಗ್ಲಭಾಷೆ ವಿಷಯ ಪರಿವೀಕ್ಷಕ ಹೆಚ್.ಟಿ ಚಂದ್ರಣ್ಣ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಶಿಕ್ಷಕರು ಶಾಲೆಗಳಲ್ಲಿ ಸಾಹಿತ್ಯ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳನ್ನು ತೊಡಗಿಸಿಸುವುದರ ಮೂಲಕ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು ಎಂದರು.

ದೊಡ್ಡತಾಂಡೆ: ಡೆಂಗ್ಯೂ ವಿರೋಧಿ ಮಾಸಾಚರಣೆ ಅಡ್ವೋಕೇಸಿ ಸಭೆ

# ಡೆಂಗೀ ಸೋಲಿಸಲು ನೀರಿನ ಪರಿಕರಗಳನ್ನು "ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ" ಸಿದ್ದಪ್ಪ ಲಿಂಗದಾಳ



**ಗದಗ :** ಡೆಂಗ್ಯೂ, ಚಿಕುಂಗುನ್ಯ ರೋಗವು ಈಡಿಸ್ ಇಜಿಪ್ಟೆ ಸೊಳ್ಳೆಯು ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ , ಬ್ಯಾರಲ್ ಡ್ರಂಮ್ ಸಿಮೇಂಟ್‌ಡೋಣಿಯಲ್ಲಿ ಸಂಗ್ರಹಿಸಿದ ನೀರನ ತೊಟ್ಟಿಯಲ್ಲಿ ಟೀ–ಕಾಫಿ ಇತರೆ ಘನ ತ್ಯಾಜ್ಯದಲ್ಲಿ ಲಾರ್ವಾ (ಸೊಳ್ಳೆ) ಬೆಳೆಯುತ್ತವೆ ಆದ್ದರಿಂದ ಡೆಂಗೀ ಸೊಲಿಸಲು

ಹೆಜ್ಜೆಗಳು "ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ" ಎಂಬ ಈ ವರ್ಷದ ಘೋಷವಾಕ್ಯವನ್ನು ಆರೋಗ್ಯ ಇಲಖೆಯ ಮಾಹಿತಿಯ ಸದುಉಪಯೋಗವನ್ನು ಪಡೆದು ಡೆಂಗೀ ತಡೆಗಟ್ಟಬೇಕೆಂದು ಆರೋಗ್ಯ ನಿರೀಕ್ಷಣಾಧಿಕಾರಿಗಳದ ಸಿದ್ದಪ್ಪ ಎನ್ ಲಿಂಗದಾಳ ಹೇಳಿದರು.

ಅವರು ಕರ್ನಾಟಕ ಸರ್ಕಾರ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಮತ್ತು ತಾಲುಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಗದಗ, ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ ಆಯುಷ್ಮಾನ್ ಆರೋಗ್ಯ ಮಂದಿರ ಅಡವಿಸೋಮಾಪೂರ ಇವರುಗಳ ಸಂಯುಕ್ತಾಶ್ರಯದಲ್ಲಿ ದೊಡ್ಡತಾಂಡೆ(ಜಲಶಂಕರ ನಗರ2)ಶ್ರೀಬಲಾಜಿ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದ್ದ ಡೆಂಗ್ಯೂ ವಿರೋಧಿ ಮಾಸಾಚರಣೆ ಅಡ್ವೋಕೇಸಿ ಸಭೆ ಕಾರ್ಯಕ್ರಮದಲ್ಲಿ ಮಾತನಾಡಿದರು

ಯಾವುದೇ ಜ್ವರ ಸಮಸ್ಯೆ ಇದ್ದರೆ ರಕ್ತಪರೀಕ್ಷೆ ಮಾಡಿಕೊಂಡು ಚಿಕಿತ್ಸೆಯನ್ನು ಪಡೆಯಿರಿ ನಿಮ್ಮ ಮನೆಯಲ್ಲಿ ನೀರು ತುಂಬಿರುವ

ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛವಾಗಿ ತೊಳೆದು ಒಣಗಿಸಬೇಕು, ನೀರಿನ ಪರಿಕರಗಳನ್ನು ಮುಚ್ಚಬೇಕು. ಮನೆಯ ಕಿಡಕಿಗಳಿಗೆ ಜಾಲರಿಗಳನ್ನು ಬಳಸಬೇಕು ಮತ್ತು ಮಲಗುವಾಗ ಸೊಳ್ಳೆ ಪರದೇಗಳನ್ನು ಬಳಸಬೇಕು,

ಲಾರ್ವಾ ನಾಶ ಪಡಿಸಿ ಸೊಳ್ಳೆಗಳ ಉತ್ಪತ್ತಿಯನ್ನು ನಿಯಂತಣ ಮಾಡಬೇಕು ಡೆಂಗ್ಯೂ ಭಯಬೇಡ ಮತ್ತು ಸಾಯಂಕಾಲ ಬೇವಿನಸೊಪ್ಪಿನ ದೂಮೀಕರಣ ಮಾಡಬೇಕು ಎಂದು ಹೇಳಿದರು

ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮುತ್ತಪ್ಪ ಹಟ್ಟಿಮನಿ ಮಾತನಾಡಿ ಡೆಂಗ್ಯೂ ಜ್ವರದಲ್ಲಿ 3 ವಿಧಗಳು ಇವೆ 1.ಡೆಂಗ್ಯೂ ಜ್ವರ 2.ಡೆಂಗ್ಯೂ ರಕ್ತ ಸ್ರಾವ 3.ಡೆಂಗ್ಯೂ ಶಾಕ ಸಿಡ್ರೋಮ್ ಈ ರೋಗಕ್ಕೆ ನಿಖರವಾದ ಚಿಕಿತ್ಸೆ ಇರುವುದಿಲ್ಲಾ ರೋಗದ ಲಕ್ಷಣಗಳ ಆಧಾರದ ಮೇಲೆ ಚಿಕಿತ್ಸೆ ನೀಡಲಾಗುವುದು ಅದಕ್ಕಾಗಿ ಈ ಒಂದು ರೋಗದ ಬಗ್ಗೆ ಜನರಿಗೆ ಹೆಚ್ಚಿಗೆ ಅರಿವನ್ನು ಮೂಡಿಸವ ಕಾರ್ಯವನ್ನು ನಿರಂತರವಾಗಿ ಮಾಡಲಾಗುತ್ತಿದ್ದು ಯಾವುದೇ ಜ್ವರ ಸಮಸ್ಯೆ ಇರಲಿ ನಿಮ್ಮ ಮನೆ ಬಾಗಿಲುಗೆ ಬರುವ ಆರೋಗ್ಯ ಸಿಬ್ಬಂದಿಗಳಲ್ಲಿ ಅಥವಾ ಆಶಾ ಕಾರ್ಯಕರ್ತೇಯರಲ್ಲಿ ರಕ್ತ ಪರೀಕ್ಷೆ ಮಾಡಿಸಿಕೋಳ್ಳಿರಿ ಎಂದು ಹೇಳಿದರು

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವಾಯ್ ಎನ್ ಕಡೇಮನಿ ಮಾತನಾಡಿ ಡೆಂಗ್ಯೂ ರೋಗ ಬರದ ಹಾಗೇ ಮುನ್ನೇಚರಿಕೆ ಕ್ರಮಗಳೆಂದರೆ 1. ಮನೆಯ ಸುತ್ತ ಮುತ್ತ ನೀರು ನಿಲ್ಲದ ಹಾಗೆ ಸ್ವಚ್ಛವಾಗಿ ಇಡಬೇಕು ಮತ್ತು ಮನೆಯ ಒಳಗೆ ನೀರು ತುಂಬುವ ಪಾತ್ರೆಗಳನ್ನು ವಾರಕ್ಕೊಮ್ಮೆ

ಸ್ವಚ್ಛವಾಗಿ ತೊಳೆದು ಒಣಗಿಸಿ ನೀರು ತುಂಬಿ ಮೇಲಗಡೆ ಮುಚ್ಚಬೇಕು. ಸೊಳ್ಳೆ ಪರದೇಗಳನ್ನು ಬಳಸಬೇಕು 2. ರಾಸಾಯನಿಕ ವಿಧಾನ ಧೂಮೀಕರಣ ಮಾಡುವುದು: 3. ಜೈವಿಕ ನಿಯಂತ್ರಣ ಲಾರ್ವಾಹಾರಿ ಮೀನುಗಳನ್ನು ಸಾಕಾಣೆ ಮಾಡಿ ಲಾರ್ವಾ ನಾಶ ಪಡಿಸುವಂತಹ ಮಹತ್ವದ ಕಾರ್ಯವನ್ನು ಮಾಡಬೇಕೆಂದು ತೀಳಿಸಿದರು

ಪ್ರಾಸ್ಥಾವಿಕವಾಗಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಸವಿತಾ ಪವಾರ ಮಾತನಾಡಿದರು ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಮಾಜಿ ಉಪಾಧ್ಯಕ್ಷರಾದ ಅನಿಲ ಕಾರಬಾರಿ ಮತ್ತು ತಾಂಡೆಯ ಹಿರಿಯರು ಮತ್ತು ಆಶಾ ಕಾರ್ಯಕರ್ತೆಯರುಗಳು ಉಪಸ್ಥಿತರಿದ್ದರು ಕಾರ್ಯಕ್ರಮವನ್ನು ಲಕ್ಷ್ಮೀ ಪೂಜಾರ ನಿರೂಪಿಸಿದರು,ಲಲಿತಾ ಅಂಗಡಿ ಸ್ವಾಗತಿಸಿದರು ಕೋನೆಯಲ್ಲಿ ಮಂಜುಳಾ ಆರಿ ವಂದಿಸಿದರು.

ಶಿರಹಟ್ಟಿ ತಾಲೂಕಿನ ವಿವಿಧ ಗ್ರಾಮಗಳಿಗೆ ಸಿಇಒ ಭರತ್ ಎಸ್ ಭೇಟಿ

# ವಿವಿಧೆಡೆ ಜೆಜೆಎಂ ಕಾಮಗಾರಿಗಳು ಹಾಗೂ ನೀರಿನ ಗುಣಮಟ್ಟ ಪರಿಶೀಲನೆ



ಶಿರಹಟ್ಟಿ: ಕಳೆದ ಮೂರು–ನಾಲ್ಕು ದಿನಗಳಿಂದ ಜಿಲ್ಲಾದ್ಯಂತ ಬಿಡುವಿಲ್ಲದ ಸಂಚಾರ ನಡೆಸಿರುವ ಜಿಲ್ಲಾ ಪಂಚಾಯಿತಿ ಸಿಇಒ ಭರತ್ ಎಸ್ ಸರ್ಕಾರದ ವಿವಿಧ ಕಾಮಗಾರಿಗಳು, ಯೋಜನೆಗಳ ಅನುಷ್ಠಾನ ಹಾಗೂ ಮೂಲ ಸೌಕರ್ಯಗಳಿಗೆ ಸಂಬಂಧಿಸಿದಂತೆ ಪರಿಶೀಲನೆ ನೆಡೆಸಿದರು.

ಗುರುವಾರ ಅವರು ಶಿರಹಟ್ಟಿ ತಾಲೂಕು ಮಜ್ಜುರ ಹಾಗೂ ಮಾಚೇನಹಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಪೂರ್ಣಗೊಂಡ ಕಾಮಗಾರಿಗಳನ್ನು ಪರಿಶೀಲಿಸಿ ನೆಡೆಸಿದರು. ಈ ಹಿನ್ನೆಲೆಯಲ್ಲಿ ಮಜ್ಜುರ, ಶಿವಾಜಿ ತಾಂಡಾ, ಮಾಚೇನಹಳ್ಳಿ, ತೆಗ್ಗಿನ ಭಾವನೂರ, ನವೆಭಾವನೂರ ಗ್ರಾಮಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಜೆಜೆಎಂ ಕಾಮಗಾರಿಗಳು,ಸಂಪರ್ಕಗಳ ಗುಣಮಟ್ಟ, ಮೀಟರ್ ಅಳವಡಿಕೆ, ರಸ್ತೆ ಪುನಶ್ಚೇತನ, ನೀರಿನ ಗುಣಮಟ್ಟ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಕಾರ್ಯ ನಿರ್ವಹಣೆ ಕುರಿತು ವಿವರವಾದ ಪರಿಶೀಲನೆ ನಡೆಸಿದರು. ಇದೆ ಸಂದರ್ಭದಲ್ಲಿ ಮನೆ ಮನೆಗಳಿಗೆ ಅಳವಡಿಸಲಾಗಿರುವ ನಳಗಳ ಸಂಪರ್ಕ ಬಗ್ಗೆ ಫಲಾನುಭವಿಗಳೊಂದಿಗೆ ಚರ್ಚೆ ಮಾಡಿದರು.

ಗ್ರಾಮಗಳ ಭೇಟಿ ವೇಳೆ , ಗುಣಮಟ್ಟದ ಕಾಮಗಾರಿ ಕೈಗೊಳ್ಳುವಲ್ಲಿ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಜವಾಬ್ದಾರಿ ಎಷ್ಟಿದೆಯೋ ಕಾಮಗಾರಿ ಗುಣಮಟ್ಟ ಕಾಪಾಡಿಕೊಳ್ಳುವುದು, ಸದುಪಯೋಗ ಪಡೆದುಕೊಳ್ಳುವ ಜವಾಬ್ದಾರಿ ಸಾರ್ವಜನಿಕರ ಮೇಲೂ ಇದೆ. ಹೀಗಾಗಿ ಸಾರ್ವಜನಿಕರು ಸರ್ಕಾರದ ಭಾಗವಾಗಿ ಜವಾಬ್ದಾರಿಗಳನ್ನು ನಿಭಾಯಿಸಬೇಕು ಕಾಮಗಾರಿಗಳು ಗುಣನುಟ್ಟದಿಂದ ಆಗುವಂತೆ ನೋಡಿಕೊಳ್ಳಬೇಕಲ್ಲದೇ ಪೂರ್ಣಗೊಂಡಿರುವ ಕಾಮಗಾರಿಗಳಿಂದ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಈ ಭೇಟಿಯಲ್ಲಿ ಶಿರಹಟ್ಟಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ರಾಘವೇಂದ್ರ ದೊಡ್ಡಮನಿ, ಸಹಾಯಕ ಎಂಜಿನಿಯರ್ ಮಲ್ಲಿಕಾರ್ಜುನ ಪಾಟೀಲ, ವಿಭಾಗೀಯ ಅಧಿಕಾರಿ ಮುನ್ನಿ ಹರಕುನಿ, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ನವೋದಯ 6ನೇ ತರಗತಿ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಅವಧಿ ವಿಸ್ತರಣೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯ ಗಾಜನೂರಿನ ನವೋದಯ ವಿದ್ಯಾಲಯದ 2026–27 ನೇ ಸಾಲಿಗೆ ಆರನೇ ತರಗತಿ ಪ್ರವೇಶ ಪರೀಕ್ಷೆಯ ಆನ್‌ಲೈನ್ ಅರ್ಜಿ ಅವಧಿಯನ್ನು ಆ.13 ರವರೆಗೆ ವಿಸ್ತರಿಸಲಾಗಿದೆ.

ಈಗಾಗಲೇ 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಆನ್‌ಲೈನ್ ವಿಳಾಸ cbseitms.rcil.gov.in.nvs ಇಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಶಿವಮೊಗ್ಗ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ–ಪೌತಿ ಆಂದೋಲನದ ಮೂಲಕ ಉಚಿತವಾಗಿ ಪಹಣಿ ಪತ್ರ ಪಡೆಯಿರಿ : ತಹಶೀಲ್ದಾರ್

**ಶಿವಮೊಗ್ಗ :** ಕೃಷಿ ಜಮೀನುಗಳ ಮಾಲೀಕರು ಮೃತರಾದಲ್ಲಿ ಸದರಿ ಜಮೀನನ್ನು ವಾರಸುದಾರರು ತಮ್ಮ ಹೆಸರಿಗೆ ಹಕ್ಕು ಬದಲಾವಣೆ ಮಾಡಿಕೊಳ್ಳಬೇಕಾಗಿರುತ್ತದೆ. ಪ್ರಸ್ತುತ ಸರಕಾರದಿಂದ ಇ–ಪೌತಿ ಆಂದೋಲನದ ಮೂಲಕ ಶಿವಮೊಗ್ಗ ತಾಲ್ಲೂಕಿನ ಜಮೀನುಗಳನ್ನು ಉಚಿತವಾಗಿ ವಾರಸತ್ವದ ವಂಶಾವಳಿ ಪ್ರಕಾರ ಪಹಣಿ ಪತ್ರಿಕೆ ಮಾಡಿಕೊಡಲಾಗುತ್ತಿದೆ.

ಈ ರೀತಿಯ ಜಮೀನುಗಳನ್ನು ವಾರಸುದಾರರು ಕೂಡಲೇ ಮೃತರ ಮರಣ ಪ್ರಮಾಣ ಪತ್ರ, ವಂಶವೃಕ್ಷ, ವಾರಸುದಾರರ ಆಧಾರ್ ಕಾರ್ಡ್ ಇತ್ಯಾದಿ ಪೂರಕ ಎಲ್ಲಾ ದಾಖಲೆಗಳನ್ನು ತಮ್ಮ ಗ್ರಾಮಕ್ಕೆ ಸಂಬಂಧಿಸಿದ ಗ್ರಾಮ ಆಡಳಿತಾಧಿಕಾರಿಗಳ ಹತ್ತಿರ ಸಲ್ಲಿಸಿ ಭೂ ಮಾಲೀಕರು ಮೃತರಾಗಿರುವ ಜಮೀನುಗಳ ವಾರಸುದಾರರಿಗೆ ಖಾತೆಯನ್ನು ಉಚಿತವಾಗಿ ಇ–ಪೌತಿ ಆಂದೋಲನದ ಮೂಲಕ ಪಹಣಿ ಮಾಡಿಸಿಕೊಳ್ಳಬಹುದಾಗಿರುತ್ತದೆ.

ಸಾರ್ವಜನಿಕರು ಈ ಬಗ್ಗೆ ಮದ್ಯವರ್ತಿಗಳಿಗೆ ಅವಕಾಶ ಕೊಡದೇ ನೇರವಾಗಿ ಆಯಾ ಗ್ರಾಮದ ಗ್ರಾಮ ಆಡಳಿತಾಧಿಕಾರಿಗಳನ್ನು ಹಾಗೂ ರಾಜಸ್ವ ನಿರೀಕ್ಷಕರನ್ನು ಭೇಟಿ ಮಾಡಿ ಉಚಿತವಾಗಿ ನಿಮ್ಮ ಜಮೀನಿನ ಖಾತೆಯನ್ನು ಬದಲಾಯಿಸಿಕೊಳ್ಳಲು ತಿಳಿಸಿದೆ. ಇ–ಪೌತಿ ಆಂದೋಲನ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು ಶಿವಮೊಗ್ಗ ತಾಲ್ಲೂಕಿನ ಎಲ್ಲಾ ಗ್ರಾಮಗಳ ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಲು ಹಾಗೂ ಇ–ಪೌತಿ ಆಂದೋಲನವನ್ನು ಯಶಸ್ವಿಗೊಳಿಸುವಂತೆ ಶಿವಮೊಗ್ಗ ತಾಲ್ಲೂಕು ತಹಶೀಲ್ದಾರ್ ರಾಜೀವ್ ವಿ ಎಸ್ ತಿಳಿಸಿದ್ದಾರೆ. ಮೆಟ್ರಿಕ್ ನಂತರದ

## ವಿದ್ಯಾರ್ಥಿವೇತನ–ಸಹಾಯ ಯೋಜನೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** 2025–26 ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ಅಲೆಮಾರಿ/ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ/ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ ನೀಡಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆ.30 ಕೊನೆಯ ದಿನಾಂಕವಾಗಿದೆ. ವೆಬ್‌ಸೈಟ್ https://ssp.postmatric.karnataka.gov.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ

ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್‌ಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ: 8050770005, ಇ–ಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್ postmatrichelp@karnataka.gov.in ಅಥವಾ ದೂ.ಸಂ: 1902 ಗೆ ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ತಂಬಾಕು ದಾಳಿ : ದಂಡ ಸಂಗ್ರಹ

**ಶಿವಮೊಗ್ಗ** : ತಂಬಾಕು ನಿಯಂತ್ರಣ ಕೋಶದ ವತಿಯಿಂದ

ದಿನಾಂಕ 30–07–2025 ರಂದು ಶಿವಮೊಗ್ಗ ನಗರದ ಗಾಡಿಕೊಪ್ಪ ಹಾಗೂ ಆಲ್ಕೊಳ ವ್ಯಾಪ್ತಿಯಲ್ಲಿ ತಂಬಾಕು ನಿಯಂತ್ರಣ ಕಾನೂನು ಉಲ್ಲಂಘಿಸುವವರ ವಿರುದ್ಧ ದಾಳಿಗಳನ್ನು ಹಮ್ಮಿಕೊಳ್ಳಲಾಯಿತು. ಒಟ್ಟು 23 ಪ್ರಕರಣಗಳನ್ನು ದಾಖಲಿಸಿ, ಸ್ಥಳದಲ್ಲೇ ರೂ. 3500 ದಂಡವನ್ನು ಸಂಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ತಂಬಾಕು ಮಾರಾಟಗಾರರಿಗೆ ಹಾಗು ಸಾರ್ವಜನಿಕರಿಗೆ ತಂಬಾಕು ದುಷ್ಪರಿಣಾಮಗಳು ಹಾಗೂ ಕೋಟ್ಪಾ ಕಾಯ್ದೆ ಕುರಿತು ಅರಿವು ಮೂಡಿಸಲಾಯಿತು.

ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಹೇಮಂತರಾಜ್ ಅರಸ್, ಸಾಮಾಜಿಕ ಕಾರ್ಯಕರ್ತರಾದ ರವಿರಾಜ್ ಜಿ ಕೆ, ಡಿಇಓ ಪ್ರವೀಣ್ ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು.




# 'ವ್ಯಸನಮುಕ್ತ'ರಾದರೆ ಮಾತ್ರ 'ಆರೋಗ್ಯ ವೃದಿ'

ಮಾದಕ ವ್ಯಸನಗಳಿಗೆ ಯುವಜನತೆಯೇ ಹೆಚ್ಚು ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ವ್ಯಸನಮುಕ್ತ ಸಮಾಜ ನಿರ್ಮಿಸಲು ಸರ್ಕಾರ ಹಲವಾರು ಬಗೆಯಲ್ಲಿ ಪ್ರಯತ್ನಿಸುತ್ತಿದ್ದು ವ್ಯಸನಮುಕ್ತಗೊಳಿಸಲು ಶ್ರಮಿಸಿದ ಡಾ.ಮಹಾಂತ ಶಿವಯೋಗಿರವರ ಜನ್ಮ ದಿನಾಚರಣೆ ಆ.01 ನ್ನು ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಿದೆ.

ರಾಜ್ಯ ಸರ್ಕಾರವು ರಾಜ್ಯದ ಎಲ್ಲ ಜಿಲ್ಲೆಗಳು ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಆ.01 ರಂದು ವ್ಯಸನ ಮುಕ್ತ ದಿನಾಚರಣೆ ಮಾಡಲು ಆದೇಶಿಸಿದೆ. ವಿಶೇಷವಾಗಿ ಯುವ ಸಮೂಹದಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಮುಂದಾಗಿದ್ದು ಆರೋಗ್ಯ ಇಲಾಖೆ, ಮಾನಸಿಕ ಆರೋಗ್ಯ ಕಾರ್ಯಕ್ರಮಗಳ ಮೂಲಕ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ.

ಡಾ.ಮಹಾಂತ ಶಿವಯೋಗಿ ಸ್ವಾಮೀಜಿಗಳು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ 'ಜೋಳಿಗೆ' ಕಾರ್ಯಕ್ರಮದ ಮೂಲಕ 42 ವರ್ಷಗಳ ಕಾಲ ದೇಶ, ವಿದೇಶಗಳಲ್ಲಿ ದುಶ್ಚಟಗಳ ವಿರುದ್ದ ಜಾಗೃತಿ ಮೂಡಿಸಿದ ಸಮಾಜ ಸುಧಾರಕ. ಜನರ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಪಡೆದು, ಗಣ್ಯ ವ್ಯಕ್ತಿಗಳನ್ನು ಕರೆಸಿ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದರು.

ಜೂ.26 ರಂದು ವಿಶ್ವ ಮಟ್ಟದಲ್ಲೂ ಅಂತರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನವನ್ನು ಕೂಡ ನಡೆಸಲಾಗುತ್ತದೆ. ಆ ದಿನದಂದು ಹಲವಾರು ವ್ಯಕ್ತಿಗಳು, ಸಮುದಾಯಗಳು ಮತ್ತು ಪ್ರಪಂಚದಾದ್ಯಂತ ವಿವಿಧ ಸಂಸ್ಥೆಗಳು, ಈ ಜಾಗತಿಕ ಆಚರಣೆಯನ್ನು ಬೆಂಬಲಿಸುತ್ತದೆ.

ಭಾರತದಲ್ಲಿ ಮಾದಕ ದ್ರವ್ಯಗಳನ್ನು ಮೂರು ವಿಧದಲ್ಲಿ ವಿಂಗಡಿಸಬಹುದು : ಕಾನೂನು ಬದ್ಧ ಮಾದಕವಸ್ತುಗಳು □ ಮದ್ಯ ಮತ್ತು ತಂಬಾಕು /ಸಿಗರೇಟ್. ಅಕ್ರಮ ಮಾದಕ ವಸ್ತುಗಳು ಮತ್ತು ವಿನೋದ ಉಂಟುಮಾಡುವ ಡ್ರಗ್ಸ್ ಹಾಗೂ ಅಂಗಡಿಗಳಲ್ಲಿ ದೊರೆಯುವ ಅಥವಾ ವೈದ್ಯರು ಸೂಚಿಸಿದ ಔಷಧಗಳು.


ಮಾದಕ ವಸ್ತುಗಳ ಬಳಕೆ: ಮಾದಕ ವಸ್ತುಗಳಲ್ಲಿ ನಾನಾ ಬಗೆಗಳಿದ್ದು, ಅವುಗಳು ಸದಾ ಮನುಷ್ಯನನ್ನು ಚಟಕ್ಕೀಡು ಮಾಡುತ್ತಿರುತ್ತವೆ. ಧೂಮಪಾನ, ಗಾಂಜಾದಂತಹ ಮಾದಕಗಳನ್ನು ಸೇದುವುದು, ಚುಚ್ಚಿಕೊಳ್ಳುವುದು ಸೇರಿದಂತೆ ಮುಂತಾದ ಅನೇಕ ಮಾದಕ ದ್ರವ್ಯಗಳನ್ನು ಬಳಸಲಾಗುತ್ತದೆ. ಇನ್ನೂ ಡ್ರಗ್ಸ್ನಂತಹ ಮಾದಕ ದ್ರವ್ಯಗಳು ಮೆದುಳಿನ ಕ್ರಿಯೆಗಳಾದ ಕಲಿಕೆ, ತೀರ್ಪು, ನಿರ್ಧಾರ, ವರ್ತನೆ ಮೇಲೆ ದುಷ್ಪರಿಣಾಮ ಬೀರುತ್ತದೆ. ಇದರೊಂದಿಗೆ ವ್ಯಕ್ತಿಗಳು ಕಾಲಕ್ರಮೇಣ ದುರ್ಬಲರಾಗಿ ಖಿನ್ನತೆ ಮತ್ತು ಬೇರೆ ರೀತಿಯ ಮಾನಸಿಕ ಅಸ್ವಸ್ಥತೆಗಳಿಗೆ ಒಳಗಾಗಬಹುದು.

ಬರಬರುತ್ತಾ ವ್ಯಸನಿಗಳು ಇದನ್ನು ಸೇವಿಸಿದರೆ ಮಾತ್ರ ಸ್ವಾಭಾವಿಕವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ಭಾವಿಸಿದ್ದಾರೆ. ಇದಿಲ್ಲದಿದ್ದರೆ ಬದುಕಲು ಸಾಧ್ಯವೇ ಇಲ್ಲ ಎಂಬಷ್ಟು ಮಟ್ಟಿಗೆ ಈ ಚಟಕ್ಕೆ ಅವಲಂಬಿತರಾಗುತ್ತಾರೆ.

### ಮಾದಕ ವ್ಯಸನಿಗಳಲ್ಲಿ ಯುವಜನರೇ ಹೆಚ್ಚು:

ದೇಶದಲ್ಲಿ ಇಂತಹ ಮಾದಕ ವ್ಯಸನಗಳಿಗೆ 18 +





ಯುವಕರೇ ಹೆಚ್ಚು ದಾಸರಾಗುತ್ತಿದ್ದಾರೆ ಎಂದು ಡಬ್ಲ್ಯೂ ಎಚ್‌ಓ ನ ಸಂಶೋಧನೆಯ ಮೂಲಕ ತಿಳಿದು ಬಂದಿದೆ. ದೇಶದಲ್ಲಿ ಶೇ.14.6 ರಷ್ಟು ಜನ ಮದ್ಯಪಾನದ ವ್ಯಸನಕ್ಕೆ ಒಳಗಾಗಿದ್ದು, ಶೇ.5.2 ಜನ ತಮ್ಮ ವೈಯಕ್ತಿಕ ಸಮಸ್ಯೆಗಳಿಗಾಗಿ ಹಾಗೂ ಶೇ.2.7 ಜನ ಚಟಕ್ಕೆ ಅವಲಂಬಿತವಾಗಿ ಸೇವನೆ ಮಾಡುತ್ತಿದ್ದಾರೆ. ಇದರಲ್ಲಿ ಶೇ.27.3 ರಷ್ಟು ಪುರುಷರು, 1.6 ರಷ್ಟು ಮಹಿಳೆಯರು, 1.3 ರಷ್ಟು 10 ರಿಂದ 17 ವಯಸ್ಸಿನವರು ಹಾಗೂ 17.1 ರಷ್ಟು 18 ವರ್ಷದ ಮೇಲ್ಪಟ್ಟ ಯುವಕರು ವ್ಯಸನಕ್ಕೆ ಒಳಾಗಿದ್ದಾರೆ.

2018 ರ ವರದಿ ಪ್ರಕಾರ ಕರ್ನಾಟಕದಲ್ಲಿ ಮದ್ಯಪಾನ ಸಮಸ್ಯೆಯಿಂದ ಬಳಲುತ್ತಿರುವ 20 ಲಕ್ಷ ಜನರು ಈ ಸಮಸ್ಯೆಯಿಂದ ಮುಕ್ತಿ ಹೊಂದಲು ಬಯಸಿದ್ದಾರೆ.

ಸೇದುವ ಮಾದಕ ದ್ರವ್ಯ: ದೇಶದಲ್ಲಿ ಶೇ.0.7 ಜನ ಒಳಸೇದುವ(ಇನ್ಹಲೆಂಟ್) ಮಾದಕ ದ್ರವ್ಯಗಳ ವ್ಯಸನಿಗಳಾಗಿದ್ದು ಶೇ. 0.21 ಜನ ತಮ್ಮ ವೈಯಕ್ತಿಕ ಸಮಸ್ಯೆಗಾಗಿ ಹಾಗೂ ಶೇ. 0.09 ಜನ ವ್ಯಸನಕ್ಕೆ ಅವಲಂಬಿತರಾಗಿದ್ದರೆ.

ಗಾಂಜಾ: ದೇಶದಲ್ಲಿ ಶೇ.2.8 ಜನ ಗಾಂಜಾದ ವ್ಯಸನಕ್ಕೆ ಒಳಗಾಗಿದ್ದು, ಶೇ.0.66 ತಮ್ಮ ವೈಯಕ್ತಿಕ ಸಮಸ್ಯೆಗೆ ಹಾಗೂ ಶೇ.0.25 ಜನ ಚಟಕ್ಕೆ ಅವಲಂಬಿತರಾಗಿದ್ದಾರೆ. ಇದರಲ್ಲಿ 40 ಲಕ್ಷ ಜನ ಭಂಗಿ ಹಾಗೂ 50 ಲಕ್ಷ ಜನ ಗಾಂಜಾಕ್ಕೆ ದಾಸರಾಗಿದ್ದಾರೆ. ಶೇ.5.0 ಪುರುಷರು, ಶೇ.0.6 ಮಹಿಳೆಯರು, ಶೇ.0.9 10 ರಿಂದ 17 ವಯಸ್ಸಿ ಯುವಕರು ಹಾಗೂ ಶೇ.3.3 18 ವರ್ಷದ ಮೇಲ್ಪಟ್ಟ ಯುವಕರು ದಾಸರಾಗಿದ್ದಾರೆ.

ಒಪಿಯಾಡ್(ಔಋಉಜ) : ದೇಶದಲ್ಲಿ ಶೇ.2.1 ಜನ ಒಪಿಯಾಡ್ ವ್ಯಸನಕ್ಕೆ ಒಳಗಾಗಿದ್ದು, ಶೇ.0.70 ವೈಯಕ್ತಿಕ ಸಮಸ್ಯೆಗಳಿಗೆ ಹಾಗೂ ಶೇ.0.26 ಜನ ಇದರ ಚಟಕ್ಕೆ ಅವಲಂಬಿತರಾಗಿದ್ದಾರೆ. ಇದರಲ್ಲಿ ಓಪಿಯಮ್‌ಗೆ 11 ಲಕ್ಷ, ಹೆರಾಯಿನ್‌ಗೆ 63 ಲಕ್ಷ ಹಾಗೂ ಫಾರ್ಮ್ ಓಪಿಯಾಡ್‌ಗೆ 25 ಲಕ್ಷ ಜನ ದಾಸರಾಗಿದ್ದಾರೆ.

ಮದ್ಯ– ವ್ಯಸನದ ಕುರಿತಾದ ಕೆಲವು ವಾಸ್ತವಾಂಶಗಳು: ಮದ್ಯ ಸೇವಿಸುವ ಪ್ರತಿ ಇಬ್ಬರಲ್ಲಿ ಒಬ್ಬನು ತೀವ್ರವಾಗಿ ಈ ವ್ಯಸನಕ್ಕೆ ಬಲಿಯಾಗುವ ಸಾಧ್ಯತೆ ಇದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಅಂದಾಜಿಸಿದೆ. ಮದ್ಯ ಸೇವಿಸುವ ವ್ಯಕ್ತಿಗಳು ಮದ್ಯ ಸೇವಿಸದ ವ್ಯಕ್ತಿಗಳಿಗಿಂತ ಮೂರು ಪಟ್ಟು ಹೆಚ್ಚು ಗಂಭೀರ ಅನಾರೋಗ್ಯಕ್ಕೊಳಗಾಗುವ ಸಾಧ್ಯತೆಯಿದೆ.

ಭಾರತದ ಆಸ್ಪತ್ರೆಗಳಲ್ಲಿ ದಾಖಲಾಗುವ ಪ್ರತಿ ಐದು ರೋಗಿಗಳಲ್ಲಿ ಒಬ್ಬರು ನೇರವಾಗಿ ಮದ್ಯವ್ಯಸನಕ್ಕೆ ಸಂಬಂಧಿಸಿದವರಾಗಿರುತ್ತಾರೆ.

ಮದ್ಯ ಸೇವನೆ ಮತ್ತು ಮಾದಕ ವ್ಯಸನಿಗಳು ಹಿಂಸೆಗಳಲ್ಲಿ ತೊಡಗುವ ಸಾಧ್ಯತೆ ಹೆಚ್ಚು. ಅದರಲ್ಲೂ ಅವರ ಸಂಗಾತಿಗಳೊಂದಿಗೆ ಈ ಸಾಧ್ಯತೆ ಅಧಿಕ. ಈ ರೀತಿಯ ಹಿಂಸೆಯು ದೈಹಿಕವಾಗಿ, ಮಾನಸಿಕವಾಗಿ, ಲೈಂಗಿಕವಾಗಿ ಅಥವಾ ಆರ್ಥಿಕವಾಗಿಯೂ ಕೂಡ ನಡೆಯಬಹುದು.

ಮದ್ಯಪಾನ ವ್ಯಸನಕ್ಕೆ ದಾಸರಾದವರು ಆತ್ಮಹತ್ಯೆ ಪ್ರಯತ್ನ ಮಾಡಬಹುದು ಅಥವಾ ಅಪಾಯಕಾರಿಯಾದ ಲೈಂಗಿಕ ವರ್ತನೆ ತೋರಬಹುದು. ಅಥವಾ ಹೆಚ್‌ಐವಿ ಸೋಂಕು, ಕ್ಷಯ, ಅನ್ನನಾಳದ ಕ್ಯಾನ್ಸರ್, ಲಿವರ್ ಸಮಸ್ಯೆ ಮತ್ತು ಇನ್ನಿತರ ಕಾಯಿಲೆಗಳಿಂದ ಕರುಳಿನ ಹುಣ್ಣು ಉಂಟಾಗಬಹುದು.

ಮದ್ಯವು ಮಾನವನ ಆರೋಗ್ಯದ ಮೇಲೆ ಹೇಗೆ ಪರಿಣಾಮ ಬೀರುತ್ತದೆ?

ಮದ್ಯಪಾನದಿಂದ ಲಿವರ್ ಸಮಸ್ಯೆ, ಭ್ರೂಣಕ್ಕೆ ತೊಂದರೆ, ಮೆದುಳಿನ ಜೀವಕೋಶಗಳ ಕುಗ್ಗುವಿಕೆ, ಕ್ಯಾನ್ಸರ್‌ನ ಅಪಾಯದ ಹೆಚ್ಚಳ, ಖಿನ್ನತೆ, ಹೃದಯ ಸ್ನಾಯುಗಳ ದೌರ್ಬಲ್ಯ ಮತ್ತು ಕಿರಿಕಿರಿ ಅಥವಾ ಮನಸ್ಥಿತಿ ಬದಲಾಣೆ, ಪಾರ್ಶ್ವವಾಯುವಿನ ತೊಂದರೆ, ಅಧಿಕ ರಕ್ತದೊತ್ತಡ, ಅಜೀರ್ಣ ತೊಂದರೆಗಳು, ಲೈಂಗಿಕ ದೌರ್ಬಲ್ಯ, ಅಕಾಲಿಕ ಮುಪ್ಪು ಸಂಭವಿಸಬಹುದು.

### ದೀರ್ಘಕಾಲದ ಮದ್ಯ ಸೇವನೆಯಿಂದಾಗುವ ಸಮಸ್ಯೆಗಳು:–

ವ್ಯಕ್ತಿಯು ಮಾದಕ ವಸ್ತುವಿನ ಬಗ್ಗೆ ಯಾವಾಗಲೂ ಯೋಚಿಸುವುದು(ನಾನು ಮತ್ತೆ ಯಾವಾಗ ಕುಡಿಯುತ್ತೇನೆ /ಧೂಮಪಾನ ಮಾಡುತ್ತೇನೆ, ಇದರ ಬದಲಿಗೆ ಏನನ್ನು ತೆಗೆದುಕೊಳ್ಳಲಿ, ಅದನ್ನು ಎಲ್ಲಿಂದ ಪಡೆಯಲಿ? ಹೇಗೆ ಪಡೆಯಲಿ? ಇತ್ಯಾದದಿ ಚಿಂತನೆಗಳು.)

ವಿತ್‌ಡ್ರಾವಲ್ ಲಕ್ಷಣಗಳು□ ವ್ಯಕ್ತಿಯು ಒಂದಷ್ಟು ದಿನ ಮಾದಕ ವಸ್ತುಗಳನ್ನು ಸೇವಿಸದೇ ಇದ್ದಾಗ ಅವರಲ್ಲಿ ನಡುಕ, ಕಿರಿಕಿರಿ, ತೀವ್ರ ಬಯಕೆ ಉಂಟಾಗಿ, ಮಾನಸಿಕ ಹಾಗೂ ಭಾವನಾತ್ಮಕ ಅಂಶಗಳ ಮೇಲೆ ಪರಿಣಾಮ.

ನಿಯಂತ್ರಣದ ಕೊರತೆ□ ಇಡೀ ದಿನ ಮಾದಕ ವಸ್ತುಗಳನ್ನು ತೆಗೆದುಕೊಳ್ಳದೆ ಇರಬೇಕೆಂದು ನಿರ್ಧರಿಸಿ, ಅದಕ್ಕೆ ಬದ್ದರಾಗದೆ ವಿಫಲರಾಗುವುದು . ಬಯಕೆ–ಮಾದಕ ವಸ್ತುಗಳನ್ನು ತೆಗೆದುಕೊಳ್ಳುವ ತೀವ್ರವಾದ ಬಯಕೆ. ನಿರಂತರ ಸೇವೆಯಿಂದ ತನಗೆ ಹಾಗೂ ಸುತ್ತ–ಮುತ್ತಲಿನವರಿಗೆ ತೊಂದರೆಯಾಗುವುದನ್ನು ತಿಳಿದಿದ್ದೂ ಅದನ್ನು ಮುಂದುವರಿಸುವುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರ/ಸಮುದಾಯ ಆರೋಗ್ಯ ಕೇಂದ್ರ/ ತಾಲ್ಲೂಕು ಆಸ್ಪತ್ರೆ/ಜಿಲ್ಲಾ ಮಾನಸಿಕ ಆರೋಗ್ಯ ಕೇಂದ್ರಗಳನ್ನು ಸಂಪರ್ಕಿಸಿ ಅಥವಾ ಆರೋಗ್ಯ ಸಹಾಯವಾಣಿ '104'ಗೆ ಕರೆ ಮಾಡಬಹುದು.

### ಆರೋಗ್ಯ ಇಲಾಖೆಯಿಂದ ವ್ಯಸನಮುಕ್ತಿಗೆ ಆಪ್ತಸಮಾಲೋಚನೆ–ಚಿಕಿತ್ಸೆ:

**ಮಾದಕ ವ್ಯಸನಗಳಿಂದ ಬಳಲುತ್ತಿರುವವರು ಹಾಗೂ ಅದರಿಂದ ಆಚೆ ಬರಲು ಹಂಬಲಿಸುತ್ತಿವವರಿಗೆ ಆಪ್ತ–ಸಮಾಲೋಚನೆ ಹೆಚ್ಚು ಸಹಕಾರಿಯಾಗತ್ತದೆ. ಅದರಂತೆ ಶಿವಮೊಗ್ಗ ಜಿಲ್ಲೆ ಒಳಗೊಂಡಂತೆ ರಾಜ್ಯಾದ್ಯಂತ ಎಲ್ಲ ಸರ್ಕಾರಿ ಜಿಲ್ಲಾ, ತಾಲ್ಲೂಕು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವ್ಯಸನಕ್ಕೆ ತುತ್ತಾದಾವರಿಗೆ ಮನೋಚೈತನ್ಯ ಕಾರ್ಯಕ್ರಮದ ಮೂಲಕ ಸ್ವ ಇಚ್ಛೆಯಿಂದ ಮಧ್ಯಪಾನ ತ್ಯಜಿಸಲು ಬಯಸುವವರಿಗೆ ಔಷಧೋಪಚಾರ ಹಾಗೂ ಆಪ್ತಸಮಾಲೋಚನೆ ಮುಖಾಂತರ ಸಹಾಯ ಹಸ್ತ ನೀಡಲಾಗುತ್ತದೆ. ಮದ್ಯ ಅಥವಾ ಯಾವುದೇ ವ್ಯಸನ ತ್ಯಜಿಸಲು ಇಚ್ಛಿಸುವವರು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಮನೋವೈದ್ಯರ ತಂಡದ ಸಹಾಯ ಪಡೆಯಬಹುದು.**

**ಆಕಾಶ್.ಆರ್.ಎಸ್,**
**ಪ್ರಶಿಕ್ಷಣಾರ್ಥಿ, ವಾರ್ತಾ ಇಲಾಖೆ**

## ಯೆಮನ್‌ನಲ್ಲಿ ನಿಮಿಷಾ ಪ್ರಿಯಾ ಪುತ್ರಿ ಮಿಶೆಲ್ ಭೇಟಿ – ತಾಯಿಯ ಬಿಡುಗಡೆಗೆ ಮನವಿ ಸಲ್ಲಿಕೆ ಸಾಧ್ಯತೆ



**ಸನಾ:** ಯಮನ್ ದೇಶದಲ್ಲಿ ಗಲ್ಲು ಶಿಕ್ಷೆಗೊಳಗಾಗಿರುವ ಭಾರತದ ನಿಮಿಷಾ ಪ್ರಿಯಾ ಅವರೀಗ ಶಿಕ್ಷೆಯಿಂದ ತಾತ್ಕಾಲಿಕವಾಗಿ ಪಾರಾಗಿದ್ದಾರೆ. ಇದರ ಬೆನ್ನಲ್ಲೇ ಯೆಮನ್ ಗೆ ತಲುಪಿರುವ ಅವರ ಪುತ್ರಿ ಮಿಶೆಲ್ (19 ವರ್ಷ) ಅವರು ಯೆಮನ್ ದೇಶದ ರಾಜಧಾನಿಯಾದ ಸನಾ ನಗರವನ್ನು ತಲುಪಿದ್ದು ಅಲ್ಲಿ ತಮ್ಮ ತಾಯಿಯನ್ನು ಬಿಡುಗಡೆ ಮಾಡಬೇಕೆಂದು ಯೆಮನ್ ಸರ್ಕಾರವನ್ನು ಕೋರಿದ್ದಾರೆ.

ಭಾರತದ ಕ್ರೈಸ್ತಧರ್ಮೀಯ ಬೋಧಕರಾದ (ಇತಚಿಟಿರಜಟ್ಟುಣ) ಕೆ.ಎ.ಪಾಲ್ ಎಂಬುವರ ಜೊತೆಗೆ ಸನಾ ನಗರಕ್ಕೆ ತೆರಳಿರುವ ಮಿಶೆಲ್, ಅಲ್ಲಿ ಸರ್ಕಾರ–ಕ್ಕೆ ಮನವಿ ಸಲ್ಲಿಸಿದ್ದಾರೆ. ಕೆ.ಎಲ್. ಪಾಲ್ ಅವರ ಪೂರ್ಣ ಹೆಸರು ಕಿಲಾರಿ ಆನಂದ್ ಪಾಲ್ ಎಂದಾಗಿದ್ದು ಇವರು ಮೂಲತಃ ಆಂಧ್ರಪ್ರದೇಶದವರು. ಅಮೆರಿಕದಲ್ಲಿ ಅವರು ಗ್ಲೋಬಲ್ ಪೀಸ್ ಇನಿಷಿಯೇಟಿವ್ ಎಂಬ ಸಂಸ್ಥೆಯನ್ನು ಕಟ್ಟಿದ್ದಾರೆ.

ಈಗ, ಇದೇ ಸಂಸ್ಥೆಯ ವತಿಯಿಂದ ಯೆಮನ್ ಸರ್ಕಾರಕ್ಕೆ ಪ್ರಿಯಾ ಅವರನ್ನು ಕ್ಷಮಿಸುವಂತೆ ಬೇಡಿಕೆಯನ್ನಿಟ್ಟಿದ್ದಾರೆ. ಆದರೂ, ಭಾರತ ಸರ್ಕಾರದ ಸತತ ಪ್ರಯತ್ನದ ನಂತರ, ಯೆಮನ್ ನಲ್ಲಿರುವ ಸರ್ಕಾರ, ಜು. 16ರಂದು ಗಲ್ಲಿಗೇರಿಸಬೇಕಿದ್ದ ಪ್ರಿಯಾ ಅವರ ಶಿಕ್ಷೆಯನ್ನು ಸದ್ಯದ ಮಟ್ಟಿಗೆ ಅಮಾನತು ಮಾಡಿದೆ.

ಈಗ, ಇದೇ ಸಂಸ್ಥೆಯ ವತಿಯಿಂದ ಯೆಮನ್ ಸರ್ಕಾರಕ್ಕೆ ಪ್ರಿಯಾ ಅವರನ್ನು ಕ್ಷಮಿಸುವಂತೆ ಬೇಡಿಕೆಯನ್ನಿಟ್ಟಿದ್ದಾರೆ. ಆದರೂ, ಭಾರತ ಸರ್ಕಾರದ ಸತತ ಪ್ರಯತ್ನದ ನಂತರ, ಯೆಮನ್ ನಲ್ಲಿರುವ ಸರ್ಕಾರ, ಜು. 16ರಂದು ಗಲ್ಲಿಗೇರಿಸಬೇಕಿದ್ದ ಪ್ರಿಯಾ ಅವರ ಶಿಕ್ಷೆಯನ್ನು ಸದ್ಯದ ಮಟ್ಟಿಗೆ ಅಮಾನತು ಮಾಡಿದೆ.

# ರೈತರಿಗೆ ಯೂರಿಯಾ ಗೊಬ್ಬರ ಕೊರತೆ ವಿರೋಧಿಸಿ ನಗರದಲ್ಲಿ ಬೃಹತ್ ಪ್ರತಿಭಟನೆ



**ಚಿತ್ರದುರ್ಗ:** ರಾಜ್ಯದಲ್ಲಿ ರೈತರಿಗೆ ಯೂರಿಯಾ ಗೊಬ್ಬರ ಕೊರತೆಯುಂಟಾಗಿರುವುದನ್ನು ವಿರೋಧಿಸಿ ಬಿಜೆಪಿ. ರೈತ ಮೋರ್ಚಾದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಲಾಯಿತು.

ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಎತ್ತಿನಬಂಡಿ ಹಾಗೂ ಕತ್ತೆಗಳ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ವಿರುದ್ದ ಧಿಕ್ಕಾರಗಳನ್ನು ಕೂಗಿ ವಿನೂತನವಾಗಿ ಪ್ರತಿಭಟಿಸಿದರು.

ಬಿಜೆಪಿ. ರೈತ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ನವೀನ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಪ್ರತಿಯೊಂದಕ್ಕೂ ಕೇಂದ್ರದ ಕಡೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಕೈ ತೋರಿಸುತ್ತಿರುವುದರಿಂದ ದೇಶಕ್ಕೆ ಅನ್ನ ನೀಡುವ ರೈತ ಮಣ್ಣು ತಿನ್ನುವ ಪರಿಸ್ಥಿತಿಗೆ ತಲುಪಿದ್ದಾನೆ. ಸಣ್ಣ ಹಿಡುವಳಿದಾರಿಗೆ ಗೊಬ್ಬರ ಕೊಡಬೇಕೆಂಬ ಸಾಮಾನ್ಯ ಜ್ಞಾನವೂ ರಾಜ್ಯ ಸರ್ಕಾರಕ್ಕೆ ಇದ್ದಂತಿಲ್ಲ. ಶಿವಾನಂದ ಪಾಟೀಲ್, ಕೃಷಿ ಸಚಿವ ಚೆಲುವರಾಯಸ್ವಾಮಿ, ಗೃಹ ಸಚಿವ ಡಾ.ಜಿ.ಪರಮೇಶ್ವರ, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಇವರುಗಳು ಒಂದೊಂದು ವಿಭಿನ್ನ ಹೇಳಿಕೆಗಳನ್ನು ನೀಡುತ್ತಿದ್ದಾ–ರೆ. ಕೇಂದ್ರ ಸರ್ಕಾರ ರೈತರಿಗೆ ಅಗತ್ಯವಿರುವಷ್ಟು ಗೊಬ್ಬರ ಪೂರೈಕೆ ಮಾಡುತ್ತಿರುವುದನ್ನು ಕಾಳ ಸಂತೆಕೋರರಿಗೆ ಮಾರಾಟ ಮಾಡುತ್ತಿರುವ ರಾಜ್ಯ ಸರ್ಕಾರದ ಬೇಜವಾಬ್ದಾರಿತನದಿಂದ ಗೊಬ್ಬರಕ್ಕೆ ಅಭಾವ ಸೃಷ್ಟಿಯಾಗಿದೆ ಎಂದು ಕಿಡಿ ಕಾರಿದರು.

ರೈತರ ಕೃಷಿಗೆ ತೊಂದರೆಯಾಗಬಾರದೆಂದು ಕೇಂದ್ರ ಸರ್ಕಾರ ಮುಚ್ಚಿ ಹೋಗಿರುವ ಗೊಬ್ಬರ ಫ್ಯಾಕ್ಟರಿಗಳನ್ನು ಮತ್ತೆ ಆರಂಭಿಸಿದೆ. ಬಡ ರೈತನಿಗೆ ಅನ್ಯಾಯ ಮಾಡಿದರೆ ಸುಮ್ಮನಿರುವುದಿಲ್ಲ. ಸದನದ ಒಳಗೆ ಮತ್ತು ಹೊರಗೆ ಪ್ರತಿಭಟಿಸುತ್ತೇವೆ. ರಾಜ್ಯ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಕೇಂದ್ರ ಸರ್ಕಾರ

ಸಾವಿರಾರು ಕೋಟಿ ರೂ.ಗಳ ಸಬ್ಸಿಡಿ ಕೊಡುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಉಡಾಫೆ ಉತ್ತರ ನೀಡುವುದನ್ನು ನಿಲ್ಲಿಸಬೇಕೆಂದು ಎಚ್ಚರಿಸಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ಕಳೆದ ಹತ್ತು ವರ್ಷಗಳಿಗಿಂತಲೂ ಈ ಬಾರಿ ಅಧಿಕ ಮಳೆಯಾಗಿರುವುದರಿಂದ ಜಿಲ್ಲೆಯಲ್ಲಿ ರೈತರು ಬಿತ್ತನೆಗೆ ತಯಾರಾಗಿದ್ದಾರೆ. ಕೆಲವು ಕಡೆ ಬಿತ್ತನೆಯಾಗಿದೆ. ಯೂರಿಯಾ ಗೊಬ್ಬರಕ್ಕೆ ಕೊರೆಯಾಗಿದ್ದರೂ ಜಿಲ್ಲೆಗೆ ಎಷ್ಟು ಮೆ.ಟನ್ ಗೊಬ್ಬರ ಬೇಕೆಂಬುದರ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಒಮ್ಮೆಯೂ ಜಿಲ್ಲಾಧಿಕಾರಿ ಜೊತೆ ಸಭೆ ನಡೆಸಿ ಮಾಹಿತಿ ಪಡೆದುಕೊಂಡಿಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದರು.

ಮೊಳಕಾಲ್ಮುರು, ಚಳ್ಳಕೆರೆ, ಹಿರಿಯೂರು ತಾಲ್ಲೂಕಿನಲ್ಲಿ ಮಳೆ ಕಡಿಮೆಯಾಗಿದೆ. ಹೊಳಲ್ಕೆರೆ, ಹೊಸದುರ್ಗ, ಚಿತ್ರದುರ್ಗ ತಾಲ್ಲೂಕಿನಲ್ಲಿ ಮೆಕ್ಕೆಜೋಳ ಬಿತ್ತನೆಯಾಗಿದೆ. ರೈತರನ್ನು ರಾಜ್ಯ ಸರ್ಕಾರ ಸಂಕಷ್ಟದಲ್ಲಿ ಸಿಲುಕಿಸಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಬೇಜವಾಬ್ದಾರಿಯಿಂದ ರೈತನಿಗೆ ಗೊಬ್ಬರದ ಅಭಾವ ಕಾಡುತ್ತಿದೆ ಎಂದರು.

ಬಿಜೆಪಿ. ರೈತ ಮೋರ್ಚಾ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್ ಮಾತನಾಡುತ್ತ ಕೇಂದ್ರ ಸರ್ಕಾರ ಎಂಟು ಲಕ್ಷ ಮೆ.ಟನ್ ರಸ ಗೊಬ್ಬರನ್ನು ರಾಜ್ಯ–ಕ್ಕೆ ಪೂರೈಕೆ ಮಾಡಿದೆ. ಇದರಲ್ಲಿ ಎರಡು ಲಕ್ಷ ಐವತ್ತು ಸಾವಿರ ಮೆ.ಟನ್ ಗೊಬ್ಬರವನ್ನು ರಾಜ್ಯ ಸರ್ಕಾರ ಕಾಳ ಸಂತೆಯಲ್ಲಿ ಮಾರಾಟ ಮಾಡಿರುವುದರಿಂದ ರೈತ ಗೊಬ್ಬರಕ್ಕೆ ಪರದಾಡುವಂತಾಗಿದೆ. ಅನ್ನದಾತ ರೈತ ಬೆಳಿಗ್ಗೆಯಿಂದ ಗೊಬ್ಬರದಂಗಡಿಗಳ ಮುಂದೆ ಸಾಲುಗಟ್ಟಿ ನಿಲ್ಲುವಂತಾಗಿದೆ. ಮುನ್ನೂರು ರೂ.ಗೆ ಸಿಗಬೇಕಾದ ಗೊಬ್ಬರವನ್ನು ಐದು ನೂರು ರೂ.ಗಳಿಗೆ ಮಾರಾಟ ಮಾಡುತ್ತಿದ್ದಾರೆ. ಮಂತ್ರಿಗಳಿಗೆ, ಅಧಿಕಾರಿಗಳಿಗೆ ರೈತರ ಬಗ್ಗೆ ಕಾಳಜಿಯಿಲ್ಲದಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಎಸ್.ಕೆ.ಬಸವರಾಜನ್ ಮಾತನಾಡಿ ರಾಜ್ಯಕ್ಕೆ ಅಗತ್ಯವಿರುವಷ್ಟು ಗೊಬ್ಬರವನ್ನು ಕೇಂದ್ರ ಸರ್ಕಾರ ಪೂರೈಕೆ ಮಾಡಿರುವುದನ್ನು ಕಾಳಸಂತೆಕೋರರಿಗೆ ಮಾರಾಟ ಮಾಡುತ್ತಿರುವುದರಿಂದ ರೈತರು ಯೂರಿಯಾ ಗೊಬ್ಬರಕ್ಕೆ ತೊಂದರೆ ಅನುಭವಿಸುವಂತಾಗಿದೆ. ಬರ ಪೀಡಿತ ಪ್ರದೇಶ ಚಿತ್ರದುರ್ಗ ಜಿಲ್ಲೆಯ ರೈತರು ಮಳೆಯನ್ನೇ ನಂಬಿಕೊಂಡು ಕೃಷಿಯಲ್ಲಿ ತೊಡಗಿದ್ದಾರೆ. ಗೋಹತ್ಯೆ ಜಾಸ್ತಿಯಾಗುತ್ತಿರುವುದರಿಂದ ಜಾನುವಾರುಗಳ ಸಂಖ್ಯೆ ಕ್ಷೀಣಿಸುತ್ತಿದ್ದು, ಕೊಟ್ಟಿಗೆ ಗೊಬ್ಬರವೂ ಸಿಗದಂತಾಗಿದೆ ಎಂದರು.

# ರಾಹುಲ್ ಪಾದಯಾತ್ರೆಗೆ ಅವಕಾಶ ಕೊಟ್ಟರೆ ಹೋರಾಟ

**ಬೆಂಗಳೂರು:** ಲೋಕಸಭಾ ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿ ಕಾಂಗ್ರೆಸ್‌ನ



ರಾಹುಲ್‌ಗಾಂಧಿ ಅವರು ಬೆಂಗಳೂರಿನ ಮಹದೇವಪುರದಿಂದ ಚುನಾವಣಾ ಆಯೋಗದ ಕಚೇರಿವರೆಗೂ ನಡೆಸಲು ಉದ್ದೇಶಿಸಿರುವ ಪಾದಯಾತ್ರೆಗೆ ಯಾವುದೇ ಕಾರಣಕ್ಕೂ ಆವಕಾಶ ಕೊಡಬಾರದು, ಪಾದಯಾತ್ರೆಗೆ ಅವಕಾಶ ನೀಡಿದರೆ ಬಿಜೆಪಿ ಬೀದಿಗಿಳಿದು ಹೋರಾಟ ನಡೆಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರ್‍ಯಾಲಿ ಅಥವಾ ಸಿಎಂ ಮನೆಗೆ ಮುತ್ತಿಗೆ ಹಾಕುತ್ತೇವೆ ಎಂದರೆ ಪೊಲೀಸರು ಹೈಕೋರ್ಟ್ ಆದೇಶ ತೋರಿಸುತ್ತಾರೆ. ಇದೇ ಕಾನೂನು ಕಾಂಗ್ರೆಸ್‌ಗೂ ಅನ್ವಯವಾಗಬೇಕು. ನಮಗೊಂದು, ಅವರಿಗೊಂದು ಕಾನೂನು ಇಲ್ಲ ಎಂದು ಗುಡುಗಿದರು.

# ಮೀರಾಸಾಬಿಹಳ್ಳಿಯಲ್ಲಿ ರಕ್ತದಾನ ಶಿಬಿರ ಆಯೋಜನೆ



**ಚಿತ್ರದುರ್ಗ :** ಚಳ್ಳಕೆರೆ ತಾಲ್ಲೂಕಿನ ಮೀರಾಸಾಬಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ನಡೆಯಿತು.

ಮೀರಾಸಾಬಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಗ್ರಾಮ ಪಂಚಾಯಿತಿ ಮತ್ತು ಪರಶುರಾಂಪುರ ಸಮುದಾಯ ಆರೋಗ್ಯ ಕೇಂದ್ರ ಐಸಿಟಿಸಿ ವಿಭಾಗ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಬಿರಕ್ಕೆ ಜಿಲ್ಲಾ ರಕ್ತ ನಿಧಿ ಕೇಂದ್ರ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಆಗಮಿಸಿ 33 ಯೂನಿಟ್ ಸ್ವಯಂ ಪ್ರೇರಿತವಾಗಿ ರಕ್ತ ದಾನಿಗಳಿಂದ ರಕ್ತವನ್ನು ಸ್ವೀಕರಿಸಿದರು.

## ಆನೆ ದೊಡ್ಡಿ ನಿರ್ಮಾಣಕ್ಕೆ ಕೇಂದ್ರ ಸಚಿವರಿಗೆ ಸಂಸದರ ಮನವಿ

**ಚಿಕ್ಕಮಗಳೂರು, ಜು 30:** ಜಿಲ್ಲೆಯಲ್ಲಿ ಇತ್ತೀಚೆಗೆ ಐವರಿಗೂ ಹೆಚ್ಚು ಮಂದಿ ಸಾವನ್ನಪ್ಪಿದ್ದು ಕಳೆದ ಒಂದು ವಾರದಲ್ಲಿ ದಿನನಿತ್ಯ ಮಾನವ ಪ್ರಾಣಿ ಸಂಘರ್ಷದಿಂದ ಜನ ಜೀವನಕ್ಕೆ ಬೆದರಿಕೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ತಮ್ಮ ಲೋಕಸಭಾ ಕ್ಷೇತ್ರವಾದ ಚಿಕ್ಕಮಗಳೂರಿನಲ್ಲಿ ಕಾಡುಪ್ರಾಣಿಗಳ ಅದರಲ್ಲೂ ಆನೆದಾಳಿಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಬೇಕಾಗಿದೆ ಎಂದು ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿ ಖುದ್ದು ಮನವಿ ಸಲ್ಲಿಸಿದರು. ಆನೆಗಳ ಸಂತತಿ ವೇಗವಾಗಿ ಬೆಳೆಯುತ್ತಿದ್ದು, ಕಾಡಾನೆಗಳು ರೈತಾಪಿ ವರ್ಗದ ಬೆಳೆ ಮಾತ್ರವಲ್ಲ, ಕೃಷಿ ಕಾರ್ಯದಲ್ಲಿ ನಿರತರಾದ ರೈತರನ್ನು ಹತ್ಯೆ ಮಾಡುತ್ತಿವೆ. ಇಂತಹ ಸಂಕಷ್ಟ ಸಂದರ್ಭದಲ್ಲಿ ಕೇಂದ್ರ, ರಾಜ್ಯ ಸರ್ಕಾರಗಳು ಒಟ್ಟಾಗಿ ಆನೆಗಳ ನಿಯಂತ್ರಣ ಮತ್ತು ಆನೆ ದೊಡ್ಡಿಗಳ ನಿರ್ಮಾಣದ ಶಾಶ್ವತ ಪರಿಹಾರದ ಯೋಜನೆ ರೂಪಿಸಬೇಕೆಂದು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

# ರಸಗೊಬ್ಬರ ಅಭಾವಕ್ಕೆ ಕೇಂದ್ರದ ಬಿಜೆಪಿ ಸರ್ಕಾರ ಕಾರಣ: ದೇವರಾಜ್

**ಚಿಕ್ಕಮಗಳೂರು:** ಕೇಂದ್ರ ಸರಕಾರದ ಮಲತಾಯಿ ಧೋರಣೆಯಿಂದ ರಾಜ್ಯದಲ್ಲಿ ರಸಗೊಬ್ಬರ ಅಭಾವಕ್ಕೆ ಕಾರಣ, ರಾಜ್ಯ ಸರಕಾರದ ಮೇಲೆ ಬಿಜೆಪಿ ಮುಖಂಡರು ಗೂಬೆ ಕೂರಿಸುತ್ತಿರುವುದನ್ನು ಕಾಂಗ್ರೆಸ್ ಖಂಡಿಸುತ್ತದೆ ಎಂದು ಕೆಪಿಸಿಸಿ ವಕ್ತಾರ ಎಚ್.ಎಚ್. ದೇವರಾಜ್ ಹೇಳಿದರು.



ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯ ಸರಕಾರ ರಸಗೊಬ್ಬರ ವಿತರಣೆ ಮಾಡುತ್ತಿಲ್ಲ, ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆರೋಪಿಸುತ್ತ, ರಸಗೊಬ್ಬರದಲ್ಲಿ ರಾಜಕಾರಣ ಮಾಡುತ್ತಿದ್ದಾರೆ. ರಸಗೊಬ್ಬರ ಅಭಾವಕ್ಕೆ ಕಾರಣರು ಯಾ–ರೆಂದು ಬಿಜೆಪಿ ಮುಖಂಡರು ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು.

ಪಾರ್ಲಿಮೆಂಟ್ ಸದಸ್ಯರು ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರನ್ನು ಭೇಟಿ ಮಾಡಿದ್ದಾರೆ. 1.35 ಲಕ್ಷ ಟನ್ ರಸಗೊಬ್ಬರ 15 ದಿನಗಳ ಒಳಗೆ ರಾಜ್ಯಕ್ಕೆ ವಿತರಣೆ ಮಾಡುತ್ತೇವೆ ಎಂದು ಹೇಳಿದ್ದು, ಪಾರ್ಲಿಮೆಂಟ್ ಸದಸ್ಯರು ಕೇಂದ್ರ ಸರಕಾರವನ್ನು ಭೇಟಿ ಮಾಡಿದ ಕೂಡಲೇ ಹೇಗೆ ರಸಗೊಬ್ಬರ ಸರಬರಾಜಾಗುತ್ತದೆ ಎಂದು ಪ್ರಶ್ನಿಸಿದ ಅವರು, ಬಿಜೆಪಿ ನಾಯಕರು ಉತ್ತರಿಸಬೇಕು ಎಂದು ಹೇಳಿದರು.

ರಸಗೊಬ್ಬರ ರಾಜ್ಯ ಸರಕಾರದ ವ್ಯಾಪ್ತಿಗೆ ಬರುವುದಿಲ್ಲ, ಕೇಂದ್ರ ಸರಕಾರದ ನಿಯಂತ್ರಣದಲ್ಲಿದೆ. ಕೇಂದ್ರ ಸರಕಾರ ರೈತ ವಿರೋಧಿ ನೀತಿಯನ್ನು ಅನುಸರಿಸುತ್ತಿದ್ದು, ಸುಮ್ಮನೆ ಕಾಂಗ್ರೆಸ್ ಸರಕಾರದ ಮೇಲೆ ಆರೋಪ ಮಾಡುತ್ತಿದ್ದು, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ಮಾನವ ಮತ್ತು ವನ್ಯಜೀವಿ ಸಂಘರ್ಷ ಹೆಚ್ಚಾಗಿದೆ. ಒಂದು ವಾರದಲ್ಲಿ ಕಾಡಾನೆ ದಾಳಿಗೆ ಇಬ್ಬರು ಬಲಿಯಾಗಿದ್ದಾ–ರೆ. ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಜನಪ್ರತಿನಿಧಿಗಳು, ಸಂಘ–ಸಂಸ್ಥೆಗಳ ಮುಖಂಡರು, ರೈತರು ಬೆಳೆಗಾರರು ಒಗ್ಗೂಡಿಸಿ ಸಭೆ ನಡೆಸಿ ಅವರಿಂದ ಸಲಹೆ ಸೂಚನೆಗಳನ್ನು ಪಡೆದು ಸರಕಾರದ ಮೇಲೆ ಒತ್ತಡ ಹೇರಬೇಕು ಎಂದ ಅವರು, ಸಂತ್ರಸ್ಥ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ನಿರಂತರ ಭಾರಿ ಮಳೆಯಾಗಿದ್ದು, ಅಪಾರ ಪ್ರಮಾಣದ ನಷ್ಟ ಸಂಭವಿಸಿದೆ. ನಷ್ಟ ಪರಿಹಾರವನ್ನು ನೀಡಬೇಕು. ಭಾರಿ ಪ್ರಮಾಣದಲ್ಲಿ ಬೀಸಿದ ಗಾಳಿಗೆ ಸಾವಿರಾರು ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ಕುಗ್ರಾಮಗಳು ಸೇರಿದಂತೆ ಬಹುತೇಕ ಗ್ರಾಮಗಳ ಜನರು ಕತ್ತಲೆಯಲ್ಲಿ ದಿನದೂಡುತ್ತಿದ್ದಾರೆ. ವಿದ್ಯುತ್ ಕಂಬ ದುರಸ್ಥಿಗೆ ಹೆಚ್ಚುವರಿ ಸಿಬ್ಬಂದಿ ನೇಮಿಸಿ ಶೀಘ್ರವೇ ದುರಸ್ಥಿ ಕಾರ್ಯ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡ ರಾಜೇಶ್, ಶ್ರೀನಿವಾಸ್, ಹಿರೇಮಗಳೂರು ರಾಮಚಂದ್ರ ಇದ್ದರು.

### ಶ್ರಾವಣ ಸಾಹಿತ್ಯ ಸಂಭ್ರಮದಲ್ಲಿ ಶ್ರೀನಿವಾಸ್ ಅಭಿಮತ

# ಜೀವನದಲ್ಲಿ ಯಶಸ್ಸು ಸಾಧಿಸಲು ದೊಡ್ಡ ಗುರಿ ಇರಬೇಕು

**ತರೀಕೆರೆ :** ಮನುಷ್ಯನಿಗೆ ಜೀವನದಲ್ಲಿ ಯಶಸ್ಸು ಸಾಧಿಸಲು ಛಲ, ಗುರಿ, ಮಾರ್ಗದರ್ಶನದೊಂದಿಗೆ ಇದ್ದರೆ ಎಂತಹ ದೊಡ್ಡ ಗುರಿಯನ್ನು ಸಾಧಿಸಬಹುದು ಎಂದು ಶಾಸಕ ಜಿ.ಎಚ್. ಶ್ರೀನಿವಾಸ್ ಹೇಳಿದರು.

ಅವರು ತಾಲೂಕು ಕಸಾಪ ತರೀಕೆರೆ, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಆಶ್ರಯದಲ್ಲಿ ನಡೆದ ಶ್ರಾವಣ ಸಾಹಿತ್ಯ ಸಂಭ್ರಮ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ತಾಲೂಕು ಕಸಾಪ ಕಾರ್ಯಕ್ರಮಗಳಿಗೆ ನನ್ನ ಸಹಕಾರ ಇದೆ. 20ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನಡೆದಿದೆ. ತಿಂಗಳ ಪೂರ್ತಿ ಶ್ರಾವಣ ಸಾಹಿತ್ಯ ಸಂಭ್ರಮ ಆಯೋಜಿಸಲಾಗಿದೆ ಎಂದರು. ಪಟ್ಟಣದಲ್ಲಿ 3 ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳಾಗಿ ಮಾಡಲಾಗುವುದು. ಕೆಪಿಎಸ್ ಶಾಲೆಗೆ ಸರ್ಕಾರದಿಂದ ಹೆಚ್ಚು ಅನುದಾನ ದೊರೆ–ಯುತ್ತದೆ. ಎಕೆಜಿಯಿಂದ ಇಂಗ್ಲಿಷ್ ಮೀಡಿಯಂ ಪ್ರಾರಂಭಿಸಲಾಗುತ್ತದೆ. ಶಾಲೆಗೆ ಒಳ್ಳೆಯ ಹೆಸರು ತರಬೇಕು ಎಂದು ಹೇಳಿದರು.



ಕಸಾಪ ತಾಲೂಕು ಅಧ್ಯಕ್ಷ ರವಿ ದಳವಾಯಿ ಮಾತನಾಡಿ, ಶ್ರಾವಣ ಸಾಹಿತ್ಯ ಸಂಭ್ರಮದಲ್ಲಿ ವಿವಿಧ ಕ್ಷೇತ್ರದ ಪರಿಣಿತರನ್ನು ಆಹ್ವಾನಿಸಿ, ಈ ತಿಂಗಳ ಅಂತ್ಯದವರೆಗೂ ನಿರಂತರ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಶ್ರಾವಣದ ಶುಭಘಳಿಗೆಯಲ್ಲಿ ಈ ಕಾರ್ಯಕ್ರಮ ಪ್ರಾರಂಭಿಸಲಾಗಿದೆ. ಕನ್ನಡ ಭಾಷೆ ಉಳಿಸಿ ಬೆಳೆಸಬೇಕು. ಮೌಲ್ಯಗಳನ್ನು ಉಳಿಸಬೇಕು ಎಂದು ಹೇಳಿದರು.

ಚಿಕ್ಕಮಗಳೂರು ರಚನಾ ಬಿಲ್ಡರ್ಸ್ ಇಂಜಿನಿಯರ್ ಎಂ.ಎ. ನಾಗೇಂದ್ರ ಮಾತನಾಡಿ, ವಿದ್ಯಾರ್ಥಿಗಳಿಗೆ ಸಾಹಿತ್ಯದ ನಂಟು ಅಗತ್ಯ. ಬದುಕಿನಲ್ಲಿ ಉನ್ನತ ಹೆಜ್ಜೆ ಇಟ್ಟವರ ಆತ್ಮಚರಿತ್ರೆ ಓದಬೇಕು. ಕಾಲ ಮತ್ತು ಪರಿಸ್ಥಿತಿಯಲ್ಲಿ ಬದಲಾವಣೆ ಆಗುತ್ತಿದೆ. ಸಾಮಾನ್ಯ ಜ್ಞಾನ ಹೆಚ್ಚಿಸಿಕೊಳ್ಳಬೇಕು. ಅವಕಾಶಗಳು ಎಲ್ಲರಿಗೂ ಇರುತ್ತದೆ. ಅದನ್ನು ಉಪಯೋಗಿಸಿಕೊಳ್ಳಬೇಕು. ನಿಮ್ಮನ್ನು ನೀವು ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಶಿವಮೊಗ್ಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಹಿರಿಯ ಉಪನ್ಯಾಸಕ ಹರಿಪ್ರಸಾದ್ ಜಿ.ವಿ. ವಿದ್ಯಾರ್ಥಿ ಜೀವನದಲ್ಲಿ ಸಾಹಿತ್ಯದ ಪ್ರಭಾವ ಮತ್ತು ಪ್ರೇರಣೆ ಕುರಿತು ಮಾತನಾಡಿ, ಸಂತೋಷದ ಹಬ್ಬ ಶ್ರಾವಣ ಮಾಸ, ಸಾಹಿತ್ಯ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುತ್ತದೆ. ವೈಜ್ಞಾನಿಕವಾಗಿ ಅಧ್ಯಯನ ಮಾಡುತ್ತೇವೆ. ಸಾಹಿತ್ಯದಲ್ಲಿ ತ್ಯಾಗ ಇರುತ್ತದೆ. ಭಾಷೆಯನ್ನು ಕಲಿಸುತ್ತದೆ ಎಂದು ಹೇಳಿದರು.

ಪ್ರಾಚಾರ್ಯ ಸಿದ್ದಪ್ಪ ಟಕ್ಕಳಿಕೆ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯೆ ರಚನಾ ಶ್ರೀನಿವಾಸ್, ಕಸಬಾ ಹೋಬಳಿ ಕಸಾಪ ಅಧ್ಯಕ್ಷ ಟಿ.ಎನ್. ಜಗದೀಶ್, ಎಚ್.ಸಿ. ಗೋಪಾಲಕೃಷ್ಣ, ತಾಲೂಕು ಕಸಾಪ ಮಹಿಳಾ ಘಟಕ ಅಧ್ಯಕ್ಷೆ ಸುನಿತಾ ಕಿರಣ್, ಉಮಾಪ್ರಕಾಶ್, ಗಾಯಿತ್ರಿ ರವಿ ದಳವಾಯಿ, ಲತಾ ಗೋಪಾಲಕೃಷ್ಣ ಭಾಗವಹಿಸಿದ್ದರು.

## ಇಂಟರ್‌ನ್ಯಾಷನಲ್ ಬುಕ್ ಆಫ್ ರೆಕಾರ್ಡ್‌ಗೆ ಪುಟಾಣಿ ಆರುಷ್ ಎ. ಅಯ್ಯರ್

**ಚಿಕ್ಕಮಗಳೂರು:** ನಗರದ 7 ವರ್ಷದ ಬಾಲಕನೋರ್ವ ಇಂಟರ್ ನ್ಯಾಷನಲ್ ಬುಕ್ ಆಫ್ ರೆಕಾರ್ಡ್‌ನಲ್ಲಿ ದಾಖಲೆ ನಿರ್ಮಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾನೆ. ನಗರದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ವಿಭಾಗೀಯ ಕಚೇರಿಯಲ್ಲಿ ನೌಕರರಾಗಿರುವ ನಾಗಮಣಿ ಅರುಣ್‌ಕುಮಾರ್ ಜಿ.ಆರ್ ದಂಪತಿಗಳ ಪುತ್ರ ಕಾಫಿನಾಡಿನ ಪುಟಾಣಿ ಆರುಷ್ ಎ. ಅಯ್ಯರ್ ಚಾರ್ಟ್‌ನಲ್ಲಿರುವ 50 ದೇಶಗಳ ಧ್ವಜಗಳನ್ನು ನೋಡಿ ಕೇವಲ 16.78 ಸೆಕೆಂಡುಗಳಲ್ಲಿ ಅವುಗಳನ್ನು ಗುರುತಿಸಿ ಹೇಳುವ ಮೂಲಕ ಇಂಡಿಯಾ ಬುಕ್ ಆಫ್ ರೆಕಾರ್ಡ್ ಹಾಗೂ ಇಂಟರ್ ನ್ಯಾಷನಲ್ ಬುಕ್ ಆಫ್ ರೆಕಾರ್ಡ್‌ನಲ್ಲಿ ವೇಗವಾಗಿ 50 ದೇಶಗಳ ಬಾವುಟಗಳ ಚಿತ್ರವನ್ನು ಗುರುತಿಸಿ ಸಾಧನೆಗೈದು ಏಷಿಯಾ ಬುಕ್ ಆಫ್ ರೆಕಾರ್ಡ್‌ನಲ್ಲಿ ಸ್ಥಾನ ಪಡೆದಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರನಾಗಿದ್ದಾನೆ.



ಈ ಕುವರನ ಈ ಸಾಧನೆಗೆ ಜಿಲ್ಲಾಧಿಕಾರಿ ಶ್ರೀಮತಿ ಮೀನಾ ನಾಗರಾಜ್ ಅವರು ಅಭಿನಂದಿಸಿದ್ದು, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದರು.

## ತರೀಕೆರೆ ತಾ.ಪಂ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರು ಸರಬರಾಜುಗೆ ಜಿ.ಪಂ ಸಿಇಓ ಸೂಚನೆ

**ತರೀಕೆರೆ :** ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪರಿಶುದ್ಧವಾದ ನೀರನ್ನೇ ಸರಬರಾಜು ಮಾಡಬೇಕೆಂದು ತಾಲ್ಲೂಕು ಪಂಚಾಯಿತಿ ಇಓ ಮತ್ತು ಗ್ರಾಮೀಣ ನೀರು ಸರಬರಾಜು ಇಲಾಖಾಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೀರ್ತನಾ ಸೂಚಿಸಿದರು.

ಅವರು ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಜಲ ಜೀವನ್ ಮಿಷನ್ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳನ್ನು ಪರಿಶೀಲನೆ ನಡೆಸುವ ಸಂದರ್ಭದಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರತಿ ಗ್ರಾಮ ಪಂಚಾತಿಯಲ್ಲಿರುವ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳು ಪ್ರತಿ ತಿಂಗಳು ಕಡ್ಡಾಯವಾಗಿ ಸಭೆಗಳನ್ನು ನಡೆಸಿ, ಕುಡಿಯುವ ನೀರಿಗೆ ಸ್ಥಳೀಯವಾಗಿ ಉಂಟಾಗುವ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಲು ಕ್ರಮವಹಿಸಬೇಕು. ಕುಡಿಯುವ ನೀರಿನ ಮೂಲಗಳನ್ನು ಯಾವಾಗಲೂ ಸ್ವಚ್ಛವಾಗಿರುವಂತೆ ನೋಡಿಕೊಂಡು ಜನರಿಗೆ ಯಾವುದೇ ತೊಂದರೆಯಾಗಿದೆ, ಸಮರ್ಪಕವಾಗಿ ನೀರೊದಗಿಸಬೇಕು ಎಂದು ಸೂಚಿಸಿದರು.



ಓವರ್ ಹೆಡ್ ಟ್ಯಾಂಕ್‌ಗಳನ್ನು ಪ್ರತಿ ಮೂರು ತಿಂಗಳಿಗೊಮ್ಮೆ ಸ್ವಚ್ಛಗೊಳಿಸಿ ನಂತರ ಮುಂದೆ ಸ್ವಚ್ಛಗೊಳಿಸುವ ದಿನಾಂಕವನ್ನು ಕಡ್ಡಾಯವಾಗಿ ಟ್ಯಾಂಕ್ ಬಳಿ ನಮೂದಿಸಬೇಕು. ಗ್ರಾಮಗಳ ಚರಂಡಿಗಳಲ್ಲಿ ಹೂಳು, ಕಸಕಟ್ಟಿ ತುಂಬಿಕೊಂಡಿರುವದನ್ನು ಗಮನಿಸಿದ ಅವರು, ಕೂಡಲೇ ಇವನ್ನೆಲ್ಲ ತೆಗೆಸಿ ಸ್ವಚ್ಛಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು

ತಾಲ್ಲೂಕಿನ ಕೆಂಚಿಕೊಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಂಚಿಕೊಪ್ಪ, ಮಾಳಿಕೊಪ್ಪ, ಬರಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುರುಪುರ ಹಾಗೂ ಬರಗೇನಹಳ್ಳಿ ಹಾಗೂ ಹಾದೀಕೆರೆ ಗ್ರಾಮ ಪಂಚಾಯಿತಿಯ ರಾಗಿ ಬಸವನಹಳ್ಳಿ ಗ್ರಾಮಗಳಲ್ಲಿ ನಡೆಯುತ್ತಿರುವ ಜಲ ಜೀವನ್ ಮಿಷನ್ ಕಾಮಗಾರಿಗಳ ಪರಿಶೀಲನೆ ನಡೆಸಿದರು. ಕಾಮಗಾರಿ ನಡೆಸುವ ಸಂದರ್ಭದಲ್ಲಿ ಯಾವುದಾದರೂ ಸಣ್ಣಪುಟ್ಟ ಸಮಸ್ಯೆಗಳು ಎದುರಾದ–ರೆ ಗ್ರಾಮೀಣ ನೀರು ಸರಬರಾಜು ಇಲಾಖೆಯ ಸಹಕಾದೊಂದಿಗೆ ಯೋಜನೆಯ ಕಾಮಗಾರಿಯನ್ನು ಸುಗಮಗೊಳಿಸಲು ತಾಲ್ಲೂಕು ಪಂಚಾಯಿತಿ ಇಓ ದೇವೇಂದ್ರಪ್ಪನವರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ವಿಶ್ವಬ್ಯಾಂಕ್‌ನ ಸಮಲೋಚನಾಧಿಕಾರಿ, ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಸಿ.ಟಿ. ಯೋಗೀಶ್, ವ್ಯವಸ್ಥಾಪಕ ವಸಂತಕುಮಾರ್ ಮತ್ತು ವಿವಿಧ ಇಲಾಖಾಧಿಕಾರಿಗಳು ಇದ್ದರು.

# ಅರಣ್ಯ ಇಲಾಖೆ ಕಾರ್ಯಾಚರಣೆ ಪುಂಡಾನೆಯೊಂದು ಸೆರೆ

**ಬಾಳೆಹೊನ್ನೂರು:** ನಾಲ್ಕು ದಿನಗಳ ಅಂತರದಲ್ಲಿ ಕಾಡಾನೆ ದಾಳಿಯಿಂದ ಇಬ್ಬರು ಮೃತಪಟ್ಟ ಬಳಿಕ ಅರಣ್ಯ ಇಲಾಖೆ ಆರಂಭಿಸಿದ್ದ ಕಾರ್ಯಾಚರಣೆಯಲ್ಲಿ ಮೊದಲ ದಿನವೇ ಪುಂಡಾನೆಯೊಂದು ಸೆರೆ ಸಿಕ್ಕಿದೆ.

ಎನ್.ಆರ್.ಪುರ ತಾಲ್ಲೂಕಿನ ಎಲೆಕಲ್ಲು ಬಳಿ ಸುಮಾರು 14 ವರ್ಷ ವಯಸ್ಸಿನ ಗಂಡಾನೆಯನ್ನು ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಯಶಸ್ವಿಯಾಗಿದ್ದಾರೆ. ನಾಲ್ಕು ಸಾಕಾನೆಗಳು ನೆರವಿನೊಂದಿಗೆ ಕಾರ್ಯಾಚರಣೆ ಆರಂಭಿಸಲಾಗಿತ್ತು.

ಅರವಳಿಕೆ ಚುಚ್ಚುಮದ್ದು ನೀಡಿದ ಬಳಿಕ ಆನೆ ಕಾಡಿನಲ್ಲಿ ಇಳಿಜಾರಿನ ಕಣಿವೆಯೊಳಗೆ ಓಡಿ ಬಿದ್ದಿತ್ತು. ಎಚ್ಚರಗೊಳ್ಳುವಷ್ಟರಲ್ಲಿ ಹಗ್ಗದಿಂದ ಬಿಗಿಯಲಾಗಿದೆ. ರಸ್ತೆಗೆ ಕರೆ ತರಲು ಸಾಕಾನೆಗಳು ಮತ್ತು ಅರಣ್ಯ ಇಲಾಖೆ ಸಿಬ್ಬಂದಿ ಹೈರಾಣಾದರು. ಚಿಕ್ಕಮಗಳೂರು ವೃತ್ತದ ಸಿಸಿಎಫ್ ಯಶಪಾಲ್ ಕ್ಷೀರಸಾಗರ ಸ್ಥಳದಲ್ಲಿದ್ದು, ಕಾರ್ಯಾಚರಣೆಯ ನೇತೃತ್ವ ವಹಿಸಿದ್ದರು. ಆನೆ ಸೆರೆ ಸಿಕ್ಕಿರುವ ಸುತ್ತಮುತ್ತಲ ಪ್ರದೇಶದಲ್ಲೇ ನಾಲ್ಕು ದಿನಗಳ ಅಂತರದಲ್ಲಿ ಇಬ್ಬರು ಆನೆ ದಾಳಿಗೆ ಮೃತಪಟ್ಟಿದ್ದರು. ಇದರಿಂದ ರೊಚ್ಚಿಗೆದ್ದಿದ್ದ ಸ್ಥಳೀಯರು ಬಾಳೆಹೊನ್ನೂರಿನಲ್ಲಿ ಬಂದ್ ನಡೆಸಿದ್ದರು. ಆನೆ ಸೆರೆ ಕಾರ್ಯಾಚರಣೆ ಆರಂಭಿಸುವ ತನಕ ಪ್ರತಿಭಟನೆ ಕೈಬಿಡುವುದಿಲ್ಲ ಎಂದು ಪಟ್ಟು ಹಿಡಿದಿದ್ದರು. ಸಕ್ರೆಬೈಲು ಆನೆ ಶಿಬಿರದಿಂದ ಸಾಕಾನೆಗಳು ಬಂದ ಬಳಿಕ ಪ್ರತಿಭಟನೆ ಕೈಬಿಟ್ಟಿದ್ದರು.

ಪಿಸಿಸಿಎಫ್ ಅವರಿಂದ ಮತ್ತೊಮ್ಮೆ ಅನುಮತಿ ಪಡೆದು ಮತ್ತೊಂದು ಪುಂಡಾನೆ ಸೆರೆ ಹಿಡಿಯುವ ಕಾರ್ಯಾಚರಣೆ ಗುರುವಾರ ಆರಂಭವಾಗಲಿದೆ.


## ಮಹಾನಗರ ಪಾಲಿಕೆ ಕಾರ್ಯಾಲಯ, ದಾವಣಗೆರೆ.

ನಂ:ದಾಮಪಾ:ಕಾಅ3:ಇ.ಟೆಂಡರ್:07:2025–26 ದಿನಾಂಕ:01.08.2025

### ಅಲ್ಪಾವಧಿ ಟೆಂಡರ್ ಪ್ರಕಟಣೆ

(ಕೆಪಿಪಿಪಿ ಪೋರ್ಟಲ್ ಮುಖಾಂತರ)

2025–26 ನೇ ಪಾಲಿಕೆ ಸಾಮಾನ್ಯ ನಿಧಿ–01 ಸಂಖ್ಯೆಯ ಅಲ್ಪಾವದಿ ಸೇವಾ ಟೆಂಡರ್ ಮತ್ತು 01 ಸಂಖ್ಯೆಯ ಅಲ್ಪಾವದಿ ವಿದ್ಯುತ್ ಕಾಮಗಾರಿ ಟೆಂಡರ್ , 2025–26 ನೇ ಪಾಲಿಕೆ ಸಾಮಾನ್ಯ ನಿಧಿ–01 ಸಂಖ್ಯೆಯ ಅಲ್ಪಾವದಿ ಮರು ಸೇವಾ ಟೆಂಡರ್, 01 ಸಂಖ್ಯೆಯ ನೀರು ಸರಬರಾಜು ರಾಸಾಯನಿಕಗಳಿಗೆ ಅಲ್ಪಾವಧಿ ದರಪಟ್ಟಿ ಪ್ರಕಟಣೆಯನ್ನು ಕೆಪಿಪಿಪಿ ಪೋರ್ಟಲ್ ಮುಖಾಂತರ ಸಿಂಗಲ್/ಡಬಲ್ ಕವರ್ ಪದ್ಧತಿಯಲ್ಲಿ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು(ವಿದ್ಯುತ್/ ನೀರುಸರಬರಾಜು) ರವರು ಅಲ್ಪಾವದಿ ಟೆಂಡರ್ ಆಹ್ವಾನಿಸಿದ್ದು, ಅರ್ಹ ಗುತ್ತಿಗೆದಾರರು/ ಏಜನ್ಸಿದಾರರು/ ಸರಬರಾಜುದಾರರು ಕೆಪಿಪಿಪಿ ಪೋರ್ಟಲ್ ವೆಬ್ ಸೈಟ್ kppp.karnataka.gov.in ನಲ್ಲಿ ಟೆಂಡರ್‌ಗಾಗಿ ಭಾಗವಹಿಸಬಹುದು. ಹೆಚ್ಚಿನ ವಿವರಗಳನ್ನು ಕಛೇರಿ ಸಮಯದಲ್ಲಿ ಮಹಾನಗರ ಪಾಲಿಕೆಯ ಕಛೇರಿಯ ವಿದ್ಯುತ್ ಶಾಖೆಗೆ ಭೇಟಿ ನೀಡಿ ಪಡೆಯಬಹುದಾಗಿದೆ. ಮಹಾನಗರ ಪಾಲಿಕೆಯ ಸಹಾಯಕ ದೂರವಾಣಿ ಸಂಖ್ಯೆ: 08192 234444 ರಿಂದ ಮಾಹಿತಿ ಪಡೆಯಬಹುದು. ಸೂಚನೆ : 1) ಈ ಮೇಲ್ಕಂಡ ಕಾಮಗಾರಿಯ ಮುಂದೆ ನಮೂದಿಸಿದ ಅಂದಾಜು ಮೊತ್ತ ಹಾಗೂ ಟೆಂಡರ್‌ಗಿಟ್ಟ ಮೊತ್ತ ದಲ್ಲಿ ಯಾವುದೇ ಬದಲಾವಣೆ ಇದ್ದಲ್ಲಿ ಟೆಂಡರ್ ದಾಖಲೆಯಲ್ಲಿ ನಮೂದಿಸಿದ ಟೆಂಡರ್‌ಗಿಟ್ಟ ಮೊತ್ತವು ಅಂತಿಮವಾಗಿರುತ್ತದೆ. 2) ಈ ಕೆಳಕಂಡ ದಿನಾಂಕಗಳಲ್ಲಿ ಯಾವುದೇ ಬದಲಾವಣೆ ಅದಲ್ಲಿ ಆ ದಿನಾಂಕಗಳನ್ನು ಕೆಪಿಪಿಪಿ ಪೋರ್ಟಲ್‌ನಲ್ಲಿ ಗಮನಿಸುವುದು ಹಾಗೂ ಯಾವುದೇ ಪ್ರತ್ಯೇಕ ಪ್ರಕಟಣೆಗಳನ್ನು ಹೊರಡಿಸಲಾಗುವುದಿಲ್ಲ.

**(1)** ಅಲ್ಪಾವಧಿ ಟೆಂಡರ್ ಬಗ್ಗೆ ಮಾಹಿತಿ ಪಡೆಯಲು ಕೊನೆಯ ದಿನಾಂಕ ಮತ್ತು ವೇಳೆ : 07.08.2025 ಸಮಯ: 17.00 **(2)** ಅಲ್ಪಾವಧಿ ಟೆಂಡರ್ ಸಲ್ಲಿಸುವ ಅಂತಿಮ ದಿನಾಂಕ ಮತ್ತು ವೇಳೆ : 08.08.2025 ಸಮಯ 17.00 **(3)** ಅಲ್ಪಾವಧಿ ಟೆಂಡರ್ ತೆರೆಯುವ ದಿನಾಂಕ: 11.08.2025 .ಸಮಯ : 11.00 ನಂತರ

ವಾಸಾಇ/ದಾವಣಗೆರೆ/228/ಕೆಎಸ್‌ಎಂಸಿಎ/2025–26

**ಸಹಿ/–ಕಾರ್ಯಪಾಲಕ ಅಭಿಯಂತರರು, ಮಹಾನಗರ ಪಾಲಿಕೆ, ದಾವಣಗೆರೆ**


Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**